

# ಚಿಗುರು

ಹೊಸ ಚಿಗುರು ಹಳೆ ಬೇರು ಕೂಡಿರಲು ಮರಸೊಬಗು ।
ಹೊಸಯುಕ್ತಿ ಹಳೆತತ್ವದೊಡಗೂಡೆ ಧರ್ಮ ॥
ಋಷಿವಾಕ್ಯದೊಡನೆ ವಿಜ್ಞಾನ ಕಲೆ ಮೇಳವಿಸೆ ।
ಜಸವು ಜನಜೀವನಕೆ – ಮಂಕುತಿಮ್ಮ ॥

**ವಾರ್ಷಿಕ ಸಂಚಿಕೆ**

ಸಂಪುಟ : 01 ಸಂಚಿಕೆ : 06 2021–22

**ಭಾಷಾ ಸಂಘದ ಸಹಯೋಗದೊಂದಿಗೆ**



# ಲೇಖನಗಳ ಸಂಗ್ರಹ



ಸ್ವಾಮಿ ವಿವೇಕಾನಂದ ವಿದ್ಯಾಸಂಸ್ಥೆ (ರಿ), ಶಿಕಾರಿಪುರ

**ಕುಮದ್ವತಿ ಶಿಕ್ಷಣ ಮಹಾವಿದ್ಯಾಲಯ**

(ಅನುದಾನಿತ, ಕುವೆಂಪು ವಿಶ್ವವಿದ್ಯಾಲಯಕ್ಕೆ ಶಾಶ್ವತ ಸಂಯೋಜಿತ ಮತ್ತು ಎನ್.ಸಿ.ಟಿ.ಇ, ಯು.ಜಿ.ಸಿ ಅಧಿನಿಯಮ 2 (f),ಸೆಕ್ಷನ್ 12 (B) ಮನ್ನಣೆ ಪಡೆದಿದೆ. ಹಾಗೂ ನ್ಯಾಕ್‌ನಿಂದ B ಗ್ರೇಡ್ ಮಾನ್ಯತೆ ಹೊಂದಿದೆ.

ಶಿವಮೊಗ್ಗ ರಸ್ತೆ, ಶಿಕಾರಿಪುರ – 577 427, ಶಿವಮೊಗ್ಗ ಜಿಲ್ಲೆ

☎: 08187 – 222383, 222067 ಮಿಂಚಂಚೆ: kumadvathibed@gmail.com

# ಭಾಷಾ ಸಂಘದ ಸದಸ್ಯರುಗಳು


ಅಕ್ಷತಾ ಎನ್.ಬಿ


ಅರ್ಪಿತ ಟಿ.ಕೆ


ಅಶ್ವಿನಿ ಡಿ ಎಸ್


ಮಾಲಾ ಎಂ


ಮೇಘನಾ ವಿ


ರಶ್ಮಿ ಎಂ


ಸಾಕಮ್ಮ


ಶೃತಿ ಡಿ.ಬಿ


ವಿದ್ಯಾಶ್ರೀ ಡಿ ಹೆಚ್


ಜಿ ಉಮಾದೇವಿ


ಮಂಜುಳಾ ಸಿ


ಪದ್ಮಾ ಜಿ


ಪ್ರೇಮಾ ಬಿ


ಪ್ರಿಯಾಂಕ ಬಿ ಎನ್


ರಚನಾ ಹೆಚ್ ಎಸ್


ರೇಣುಕಾ ಡಿ


ಶ್ವೇತಾ ಜಿ ಹೆಚ್


ಶ್ವೇತಾ ಎಲ್


ಮೌಲಾಲಿ ಕೆ ಟಿ


ಶಶಿಕುಮಾರ ಜಿ

**ಚಿಗುರು**
ವಾರ್ಷಿಕ ಸಂಚಿಕೆ
ಮಾರ್ಚ್ 2022,
ಸಂಪುಟ : 01 ಸಂಚಿಕೆ : 06

# ಪರಿವಿಡಿ

**ಅಧ್ಯಕ್ಷರು**

**ಡಾ. ಶಿವಕುಮಾರ್ ಜಿ.ಎಸ್.,**
ಪ್ರಾಚಾರ್ಯರು
ಕುಮದ್ವತಿ ಶಿಕ್ಷಣ ಮಹಾವಿದ್ಯಾಲಯ
ಶಿಕಾರಿಪುರ

**ಪ್ರಧಾನ ಸಂಪಾದಕರು :**

**ಡಾ. ವೀರೇಂದ್ರ ಕುಮಾರ ವಾಲಿ ಎಸ್.,**
ಸಹಾಯಕ ಪ್ರಾಧ್ಯಾಪಕರು
ಕುಮದ್ವತಿ ಶಿಕ್ಷಣ ಮಹಾವಿದ್ಯಾಲಯ
ಶಿಕಾರಿಪುರ

**ಡಾ. ರವಿ ಹೆಚ್.,**
ಸಹಾಯಕ ಪ್ರಾಧ್ಯಾಪಕರು
ಕುಮದ್ವತಿ ಶಿಕ್ಷಣ ಮಹಾವಿದ್ಯಾಲಯ
ಶಿಕಾರಿಪುರ

**ಸಹ ಸಂಪಾದಕರು :**

ಭಾಷಾ ಸಂಘದ ಸರ್ವಸದಸ್ಯರು.

**ಚಿಗುರು**
**ವಾರ್ಷಿಕ ಸಂಚಿಕೆ**
**ಭಾಷಾ ಸಂಘ**
ಕುಮದ್ವತಿ ಶಿಕ್ಷಣ ಮಹಾವಿದ್ಯಾಲಯ,
ಶಿಕಾರಿಪುರ 577427
ಫೋನ್ : 08187 – 222067
Email :
kumadvathibed@gmail.com


| ಕ್ರಮ ಸಂಖ್ಯೆ | ಸಂಗತಿಗಳು | ಪುಟ ಸಂಖ್ಯೆ |
|---|---|---|
| 01 | ವಚನ ಸಾಹಿತ್ಯ | 1–3 |
| 02 | ಕಾವ್ಯವೇ ಜೀವನ ಎಂದು ಬದುಕಿದ ನಾಡಿನ ಅಗ್ರಗಣ್ಯ ಕವಿ ಚನ್ನವೀರ ಕಣವಿ | 3–6 |
| 03 | ಪ್ರೊ. ಚಂದ್ರಶೇಖರ ಪಾಟೀಲ | 6–9 |
| 04 | ಕರ್ನಾಟಕ ರಾಜ್ಯೋತ್ಸವ ಇದು ಕನ್ನಡಿಗರ ಹಬ್ಬ | 10–11 |
| 05 | ಶಿವಶರಣೆ ಅಕ್ಕಮಹಾದೇವಿ ಅನುಭವ ಮಂಟಪದಲ್ಲಿ ಇತರ ಶರಣರ ಜೊತೆಗೆ ಕೈಗೊಂಡ ಸಂಭಾಷಣೆಯಲ್ಲಿನ ವೈಶಿಷ್ಟ್ಯ | 11–14 |
| 06 | ಕೆ. ಪಿ. ಪೂರ್ಣಚಂದ್ರ ತೇಜಸ್ವಿ | 15–17 |
| 07 | ಮರೆಮಾಚಿದಂತಿರುವ ಮಾನವೀಯ ಮೌಲ್ಯಗಳು | 17–18 |
| 08 | ಶಿಕ್ಷಣ ಮತ್ತು ಸಮಾಜಕ್ಕೆ ಸ್ವಾಮಿ ವಿವೇಕಾನಂದರ ಸಂದೇಶಗಳು | 19–21 |
| 09 | ಮಹಿಳೆ ಮತ್ತು ಮೂಢನಂಬಿಕೆಗಳು | 21–25 |
| 10 | ಕನ್ನಡ ಭಾಷೆ ಮತ್ತು ಸಂಸ್ಕೃತಿಯ ಮಹತ್ವ | 26–29 |
| 11 | ಜ್ಞಾನಪೀಠ ಪ್ರಶಸಿ | 30–31 |
| 12 | ಬೆಂಗಳೂರಿನ ನಿರ್ಮಾತೃ ಕೆಂಪೇಗೌಡ | 32–34 |
| 13 | ಪರಾಕ್ರಮ ದಿವಸ್ | 35 |
| 14 | ವೃಕ್ಷಮಾತೆ ಸಾಲುಮರದ ತಿಮ್ಮಕ್ಕ | 36–37 |
| 16 | ಭಾಷಾಸಂಘದ ಅಡಿಯಲ್ಲಿ ಕೈಗೊಳ್ಳಲಾದ ಆನ್‌ಲೈನ್ ರಸಪ್ರಶ್ನೆ ಕಾರ್ಯಕ್ರಮದ ಲಿಂಕ್‌ಗಳು | 38 |
| 17 | 2020–2021 ಮತ್ತು 2022ರ ಭಾಷಾಸಂಘದ ಅಡಿಯಲ್ಲಿ ನಡೆದ ಕಾರ್ಯಕ್ರಮಗಳ ಪತ್ರಿಕೆಗಳಲ್ಲಿ ಮೂಡಿಬಂದ ವರದಿಗಳು | 39–40 |

**ಸಿರಿಗನ್ನಡಂಗೆಲ್ಗೆ ಸಿರಿಗನ್ನಡಂಬಾಳ್ಗೆ**



# ವಚನ ಸಾಹಿತ್ಯ



ಸಮಗ್ರ ವಚನ ಸಾಹಿತ್ಯ ಕನ್ನಡದ ಸಾಹಿತ್ಯದ ಪ್ರಮುಖ ಪ್ರಕಾರಗಳಲ್ಲಿ ಒಂದು. 11ನೇ ಶತಮಾನದ ಉತ್ತರಾರ್ಧದಲ್ಲಿ ಉದಯಿಸಿ 12ನೇ ಶತಮಾನದ ಕಡೆಯವರೆಗೂ ಬಸವಣ್ಣನವರ–ಜನಸಾಮಾನ್ಯರ ಆಂದೋಲನದ ಭಾಗವಾಗಿ ಬೆಳೆದು ಬಂತು. ಇದು ಸಾಹಿತ್ಯ ಪರಿಭಾಷೆಯ ಒಂದು ವಿಶಿಷ್ಟ ಸಾಹಿತ್ಯ ಪ್ರಕಾರದ ಕಾವ್ಯ. ಹಾಡಿದರೆ ಹಾಡಾಗುವ, ಓದಿದರೆ ಗದ್ಯವಾಗುವ ಕನ್ನಡದ ವಿಶೇಷ ಕಾವ್ಯ ಪ್ರಕಾರ. ವಚನ ಸಾಹಿತ್ಯವು ತನ್ನ ಕಾಲದಲ್ಲಿನ ಜನರ ಮನೋಭಿವ್ಯಕ್ತಿಗೆ ಸಂಗಾತಿಯಾಯಿತು.ವಚನ ಎಂದರೆ "ಪ್ರಮಾಣ", "ಕೊಟ್ಟ ಮಾತು" ಎಂದರ್ಥ.

11ನೇ ಶತಮಾನದಲ್ಲಿ ಉದಯಿಸಿದ ಧರ್ಮ ಪ್ರೇರಿತ ಸಾಹಿತ್ಯವಾದ ವಚನವು, ಕನ್ನಡದ ಪ್ರಾಚೀನ ಸಾಹಿತ್ಯದಡಿಯಲ್ಲಿ ವರ್ಗಾಯಿಸಲ್ಪಟ್ಟಿದೆ. ಸ್ವಂತಿಕೆಯಿಂದ ಮೆರೆವ ವಚನಗಳು ಕನ್ನಡ ಸಾಹಿತ್ಯದಲ್ಲಿ ಪ್ರಭಾವಶಾಲಿ ಆತ್ಮವಿಮರ್ಶೆಯ ಮಾಧ್ಯಮವಾಗಿ ಸ್ವತಂತ್ರವಾಗಿ ಬೆಳೆದು ವಿಜೃಂಭಿಸಿ ಮುಂದಿನ ಸಾಹಿತ್ಯ ಪರಂಪರೆಗಳ ಮೇಲೆ ಪ್ರಭಾವ ಬೀರಿ ವಿಶ್ವಸಾಹಿತ್ಯದಲ್ಲೂ ಒಂದು ಅವಿಭಾಜ್ಯ ಅಂಗವಾಗಿ ಉಳಿದಿದೆ. ವಚನ ಸಾಹಿತ್ಯವನ್ನು, ವಚನಗುರು ದೇವರ ದಾಸಿಮಯ್ಯ ಮಾದಾರ ಚೆನ್ನಯ್ಯ ನವರ ಆದಿಯಾಗಿ ಗುರು ಬಸವಣ್ಣನವರು ಮತ್ತು ಅವರ ಸಮಕಾಲೀನ ಶರಣರು ನೀಡಿದರು.

ಸಮಾಜದ ಎಲ್ಲಾ ಜಾತಿಯವರೂ ವಚನವನ್ನು ಮುಖ್ಯ ಮಾಧ್ಯಮವನ್ನಾಗಿ ಮಾಡಿಕೊಂಡು, ತಮ್ಮ ಅನುಭವಗಳನ್ನು ಹೇಳಿಕೊಳ್ಳತೊಡಗಿದ್ದರಿಂದ ವಚನ ಸಾಹಿತ್ಯ ಒಂದು ಚಳವಳಿಯೂ ಆಯಿತು. ಬಂಡಾಯ ಸಾಹಿತ್ಯಕ್ಕಿಂತ ಮೊದಲು ಕನ್ನಡ ನಾಡಿನಲ್ಲಿ ವಚನ ಒಂದು ಚಳವಳಿಯ. ಮುಖವಾಣಿಯಾಗಿತ್ತೆಂದರೆ ಅದರ ಸಾಮಾಜಿಕ ವ್ಯಾಪಕತೆ ಅಪಾರವಾದುದೆಂಬುದು ಅರಿವಿಗೆ ಬಾರದೆ ಇರದು. ವಚನಗಳು ಅತ್ಯಂತ ಸರಳ ಹಾಗೂ ನೇರವಾಗಿ ದೇಸಿಯ ಸೊಗಡಿನಿಂದ ಕೂಡಿವೆ. ಹಲವಾರು ಕವಿಗಳು, ಮಠಾಧೀಶರು ಲಿಂಗಾಯತ ಸಿದ್ಧಾಂತವನ್ನು ಅಳವಡಿಸಿ ಸಾಹಿತ್ಯ ರಚಿಸಿದ್ದರೂ, ಇಡೀ ಲಿಂಗಾಯತ ಸಾಹಿತ್ಯದಲ್ಲಿ ಮುಖ್ಯ ಮತ್ತು ಅಪರೂಪದ ಅಭಿವ್ಯಕ್ತಿಯೆಂದರೆ ವಚನ ಸಾಹಿತ್ಯ. ಅದು ಸ್ಥಾವರ ಸಮಾಜವನ್ನು ತಿರಸ್ಕರಿಸಿ ಜಂಗಮ ಸಮಾಜವನ್ನು ನಂಬಿದ ಬಹಳ ದೊಡ್ಡ ಮಾನವೀಯ ಮೌಲ್ಯ. ಕಾಯಕ ಮತ್ತು ದಾಸೋಹಗಳ ಮೂಲಕ ಸಮಾಜೋತ್ಪನ್ನಗಳ ಸಮಪಾಲು ಸಿದ್ಧಾಂತವನ್ನು ಮಂಡಿಸುವ ಈ ಚಳವಳಿ ಭಾರತೀಯ ಸಂಸ್ಕೃತಿಯಲ್ಲೇ ಅತಿ ಪ್ರಮುಖವಾದುದು.

ವಚನ ಸಾಹಿತ್ಯ 12ನೇ ಶತಮಾನದಲ್ಲಿ ಜಾತಿ, ಧರ್ಮ, ವರ್ಣಾಶ್ರಮದ ವಿರುದ್ಧ ಬಂಡೆದ್ದು ಮಾನವ ಜಾತಿ, ಧರ್ಮ ಒಂದೇ ಸಾರಿದಲ್ಲದೆ ಅದನ್ನು ನಿಜಜೀವನದಲ್ಲಿಯೂ ಕಾರ್ಯರೂಪಕ್ಕೆ ತಂದವರು ಶಿವಶರಣರು. ಶ್ರೀ ಬಸವಣ್ಣನವರ ನೇತೃತ್ವದಲ್ಲಿ ಆತ್ಮ ಶುಧ್ಧಿ ಮತ್ತು ಕಾಯಕದ ಮಹತ್ವವನ್ನು ಜಗತ್ತಿಗೇ ತಿಳಿ ಹೇಳಿದ್ದಲ್ಲದೇ ಕಾರ್ಯರೂಪಕ್ಕೂ ತಂದವರು ಶಿವಶರಣರು. ಉಚ್ಚ ಕುಲದವರ ಸ್ವತ್ತೆಂದು ಪರಿಗಣಿಸಿದ್ದ, ಸಂಸ್ಕೃತದ ಸೋಂಕಿಲ್ಲದೆ, ಪ್ರಾಸ, ಛಂದಸ್ಸುಗಳ ಸೋಂಕಿಲ್ಲದೆ, ನಾಡಿನ ಜನರ ಆಡುಭಾಷೆಯಾದ ಕನ್ನಡದಲ್ಲಿಯೇ ಸೀದಾ ಸಾದಾ ನೇರ ನುಡಿಗಳಲ್ಲಿ ರಚಿತವಾದವುಗಳು ಶಿವ ಶರಣರ ವಚನಗಳು. ಈ ವಚನಗಳು ಕೇವಲ ದೇವರು, ದಿಂಡಿರುಗಳ ಬಗ್ಗೆ ಮಾತ್ರ ಸೀಮಿತವಾಗದೆ, ಜನಸಾಮಾನ್ಯರ ಜೀವನದಲ್ಲಿ ಹಾಸು ಹೊಕ್ಕಾಗಿರುವ ಸೂಕ್ಷ್ಮ ಸಮಸ್ಯೆಗಳ ಎಳೆಗಳನ್ನು ವಚನಕಾರರ ವಚನಗಳು ಮಾರ್ಮಿಕವಾಗಿ ತಿಳಿಸಿವೆ.

ವಚನ ಸಾಹಿತ್ಯದ ಶ್ರೀಮಂತಿಕೆಗೆ ನೂರಾರು ಜನ ಶರಣರು ಶ್ರಮಿಸಿದ್ದಾರೆ. ತಮ್ಮ ವಚನಗಳಲ್ಲಿ ತಮ್ಮದೇ ಆದ ಅಂಕಿತನಾಮಗಳನ್ನು ಬಳಸಿದ್ದಾರೆ. ದೇವರ ದಾಸಿಮಯ್ಯ 'ರಾಮನಾಥ' ಎಂದು ಬಳಸಿದರೆ, ಬಸವಣ್ಣನವರು 'ಕೂಡಲ ಸಂಗಮದೇವ' ಹಾಗೂ ಅಕ್ಕಮಹಾದೇವಿಯು 'ಚೆನ್ನಮಲ್ಲಿಕಾರ್ಜುನ' ಎಂದು ಬಳಸಿದ್ದಾರೆ. ಮತ್ತು ಮತ್ತಿತರ ಸುಪ್ರಸಿದ್ಧ ವಚನಕಾರರೆಂದರೆ: ಅಲ್ಲಮ ಪ್ರಭು, ಅಂಬಿಗರ ಚೌಡಯ್ಯ, ಮಾದಾರ ಚೆನ್ನಯ್ಯ, ಸೂಳೆ ಸಂಕವ್ವೆ, ಏಕಾಂತ ರಾಮಯ್ಯ, ಹಡಪದ ಅಪ್ಪಣ್ಣ, ಒಕ್ಕಲು ಮಾದಯ್ಯ, ಮಡಿವಾಳ ಮಾಚಯ್ಯ, ಆಯ್ದಕ್ಕಿ ಲಕ್ಕಮ, ಹೆಂಡದ ಮಾರಯ್ಯ, ಅಂಗಸೋಂಕಿನ ಲಿಂಗತಂದೆ, ಅಕ್ಕಮ್ಮ, ಅಖಂಡ ಮಂಡಲೇಶ್ವರ, ಅಘ್ಘವಣಿ ಹಂಪಯ್ಯ, ಅಘ್ಘವಣಿ ಹೊನ್ನಯ್ಯ, ಅಜಗಣ್ಣ ತಂದೆ, ಅರಿವಿನ ಮಾರಿತಂದೆ, ಅನುಗಲೇಶ್ವರ, ಅನಾಮಿಕ ನಾಚಯ್ಯ, ಅಪ್ರಮಾಣ ಗುಹೇಶ್ವರ, ಅಪ್ಪಿದೇವಯ್ಯ, ಅವಸರದ ರೇಕಣ್ಣ, ಅಮರಗುಂಡದ ಮಲ್ಲಿಕಾರ್ಜುನ ತಂದೆ, ಅಮುಗೆ ರಾಯಮ್ಮ, ಅಮುಗಿದೇವಯ್ಯ, ಅಲ್ಲಮಪ್ರಭುದೇವರು, ಅಶ್ವಥರಾಮ, ಆಯ್ದಕ್ಕಿ ಮಾರಯ್ಯ, ಆಯ್ದಕ್ಕಿ ಲಕ್ಕಮ್ಮ, ಆದಯ್ಯ, ಆನಂದ ಸಿದ್ಧೇಶ್ವರ, ಆನಂದಯ್ಯ, ಇಮ್ಮಡಿ ಮುರಿಘಾ ಗುರುಸಿದ್ಧ / ಗುರುಸಿದ್ಧಸ್ವಾಮಿ, ಈಶ್ವರೀಯ ವರದ ಚೆನ್ನರಾಮ, ಉಗ್ಘಡಿಸುವ ಗಬ್ಬಿದೇವಯ್ಯ, ಉರಿಲಿಂಗದೇವ, ಉರಿಲಿಂಗಪೆದ್ದಿ, ಉರಿಲಿಂಗಪೆದ್ದಿಗಳ ಪುಣ್ಯಸ್ತ್ರೀ ಕಾಳವ್ವೆ, ಉಪ್ಪರಗುಡಿಯ ಸೋಮಿದೇವಯ್ಯ, ಉಳಿಯುಮೇಶ್ವರ ಚಿಕ್ಕಣ್ಣ, ಎಚ್ಚರಿಕೆ ಕಾಯಕದ ಮುಕ್ತನಾಥಯ್ಯ, ಎಡೆಮಠದ ನಾಗಿದೇವಯ್ಯಗಳ ಪುಣ್ಯಸ್ತ್ರೀ ಮಸಣಮ್ಮ, ಎಲೆಗಾರ ಕಾಮಣ್ಣ, ಏಕಾಂತ ವೀರಸೊಡ್ಡಳ, ಏಕಾಂತರಾಮಿತಂದೆ, ಏಕೋರಾಮೇಶ್ವರ ಲಿಂಗ, ಏಲೇಶ್ವರ ಕೇತಯ್ಯ, ಒಕ್ಕಲಿಗ ಮುದ್ದಣ್ಣ, ಕಂಬದ ಮಾರಿತಂದೆ, ಕರಸ್ಥಲದ ಮಲ್ಲಿಕಾರ್ಜುನೊಡೆಯ, ಕರುಳ ಕೇತಯ್ಯ, ಕದಿರಕಾಯಕದ ಕಾಳವ್ವೆ, ಕದಿರರೆಮ್ಮವ್ವೆ ಕನ್ನಡಿಕಾಯಕದ ಅಮ್ಮಿದೇವಯ್ಯ, ಕನ್ನಡಿಕಾಯಕದ ರೇಮಮ್ಮ, ಕನ್ನಡ ಮಾರಿತಂದೆ, ಕಲಕೇತಯ್ಯ, ಕಲ್ಲಯ್ಯದೇವರು, ಕುರಂಗಲಿಂಗ, ಕುರಂಗಲಿಂಗ, ಕುರಂಗೇಶ್ವರಲಿಂಗ, ಕುಷ್ಟಗಿ ಕರಿಬಸವೇಶ್ವರ, ಕೂಗಿನ ಮಾರಯ್ಯ, ಕೂಡಲಸಂಗಮೇಶ್ವರ, ಕಾಟಕೂಟಯ್ಯಗಳ ಪುಣ್ಯಸ್ತ್ರೀ ರೇಚವ್ವೆ, ಕಾಡಸಿದ್ಧೇಶ್ವರ, ಕಾಮಾಟದ ಭೀಮಣ್ಣ, ಕಾಲಕಣ್ಣಿಯ ಕಾಮಮ್ಮ, ಕೊಂಡೆಮಂಚಣ್ಣಗಳ ಪುಣ್ಯಸ್ತ್ರೀ ಲಕ್ಷ್ಮಮ್ಮ, ಕೊಟ್ಟಣದ ಸೋಮಮ್ಮ, ಕೊಟಾರದ ಸೋಮಣ್ಣ, ಕೋಲ ಶಾಂತಯ್ಯ, ಕಿನ್ನರಿ ಬ್ರಹ್ಮಯ್ಯ, ಕೀಲಾರದ ಭೀಮಣ್ಣ, ಗಂಗಾಂಬಿಕೆ, ಗಜೇಶ ಮಸಣಯ್ಯ, ಗಜೇಶಮಸಣಯ್ಯದ ಪುಣ್ಯಸ್ತ್ರೀ, ಗಣದಾಸಿ ವೀರಣ್ಣ, ಗುಂಡಯ್ಯಗಳ ಪುಣ್ಯಸ್ತ್ರೀ ಕೇತಲದೇವಿ, ಗುರು ವಿಶ್ವೇಶ್ವರಾ, ಗುರುಪುರದ ಮಲ್ಲಯ್ಯ, ಗುರುಬಸವೇಶ್ವರ, ಮೋಳಿಗೆ ಮಾರಯ್ಯ ಇನ್ನೂ ಮೊದಲಾದ ವಚನಕಾರರು ವಚನ ಸಾಹಿತ್ಯಕ್ಕೆ ಉತ್ತಮ ಕಾಣಿಕೆ ನೀಡಿದ್ದಾರೆ.

ಅಲ್ಲಮ ಪ್ರಭುಗಳ ವಚನದ ಒಂದು ಸಣ್ಣ ತುಣುಕು ಹೀಗಿದೆ:

ಹೊನ್ನು ಮಾಯೆ ಎಂಬರು
ಹೆಣ್ಣು ಮಾಯೆ ಎಂಬರು
ಮಣ್ಣು ಮಾಯೆ ಎಂಬರು
ಹೊನ್ನು ಮಾಯೆಯಲ್ಲ
ಹೆಣ್ಣು ಮಾಯೆಯಲ್ಲ
ಮಣ್ಣು ಮಾಯೆಯಲ್ಲ
ಮನದ ಮುಂದಣ ಆಶೆಯೇ ಮಾಯೆ ಕಾಣ ಗುಹೇಶ್ವರ ॥

ಸಂಕೀರ್ಣ ವ್ಯಕ್ತಿತ್ವವನ್ನು ಪಡೆದು ಬಾಳಿದ ಮಹಾಯೋಗಿಯಾದ ಪ್ರಭುಗಳ ಅನುಭವದ ತೀವ್ರತೆಯು ತಮ್ಮ ಈ ಸಣ್ಣ ವಚನ ಸಾರಿ ಹೇಳುತ್ತದೆ.

ಹೀಗೆ ಅನೇಕ ವಚನಕಾರರು ತಮ್ಮ ಅನುಭವಗಳನ್ನು ವಚನಗಳ ಮೂಲಕ ಹೇಳುತ್ತಾ ಸಮಾಜದ ಅಂಕು ಡೊಂಕುಗಳನ್ನು ಸುಧಾರಿಸುವ ಕೆಲಸವನ್ನು ಮಾಡಿ ಎಲ್ಲರಿಗೆ ಆದರ್ಶ ಪ್ರಾಯರಾಗಿದ್ದಾರೆ.

**ಮೌಲಾಲಿ ಕೆ. ಟಿ ಮತ್ತು ಶಶಿಕುಮಾರ ಗಂಟೇರ., ಪ್ರಶಿಕ್ಷಣಾರ್ಥಿಗಳು**

## ಕಾವ್ಯವೇ ಜೀವನ ಎಂದು ಬದುಕಿದ ನಾಡಿನ ಅಗ್ರಗಣ್ಯ ಕವಿ ಚನ್ನವೀರ ಕಣವಿ



ಚೆನ್ನವೀರ ಕಣವಿ (28 ಜೂನ್ 1928 – 16 ಫೆಬ್ರವರಿ 2022) ಕನ್ನಡದ ಸಮನ್ವಯ ಕವಿ, ಸುನೀತಗಳ ಸಾಮ್ರಾಟ ಎಂದು ಪ್ರಸಿದ್ಧರಾಗಿದ್ದ ಕನ್ನಡದ ಖ್ಯಾತ ವಿದ್ವಾಂಸ ಮತ್ತು ಹೊಸಗನ್ನಡ ಕಾವ್ಯದ ಪ್ರಮುಖ ಕವಿಗಳಲ್ಲಿ ಒಬ್ಬರಾಗಿದ್ದರು.

**ಜೀವನ**

ಚನ್ನವೀರ ಕಣವಿಯವರು ಗದಗ ಜಿಲ್ಲೆಯ ಹೊಂಬಳ ಗ್ರಾಮದಲ್ಲಿ 1928ರ ಜೂನ್ 28ರಂದು ಜನಿಸಿದರು. ತಂದೆ ಸಕ್ಕರೆಪ್ಪ ಮತ್ತು ತಾಯಿ ಪಾರ್ವತವ್ವ. ತಂದೆ ಸಕ್ಕರೆಪ್ಪ ಪ್ರಾಥಮಿಕ ಶಾಲೆಯಲ್ಲಿ ಶಿಕ್ಷಕರಾಗಿದ್ದರು. ಧಾರವಾಡದಲ್ಲಿ ಮಾಧ್ಯಮಿಕ ಹಾಗು ಕಾಲೇಜು ಶಿಕ್ಷಣ ಪೂರೈಸಿ ಕಣವಿಯವರು 1952ರಲ್ಲಿ ಕರ್ನಾಟಕ ವಿಶ್ವವಿದ್ಯಾಲಯದಿಂದ ಎಂ.ಎ. ಪದವಿ ಪಡೆದು ಆಗ ತಾನೆ ಆರಂಭವಾಗಿದ್ದ ವಿಶ್ವವಿದ್ಯಾಲಯದ ಪ್ರಸಾರಾಂಗ ವಿಭಾಗದ ಕಾರ್ಯದರ್ಶಿಯಾದರು.

ಜೂನ್ ತಿಂಗಳ ಋತುಮಾನ ಕಣವಿಯ ಅವರ ಕವಿಯ ಬದುಕಿನ ಮೇಲೆ ಪ್ರಭಾವಿ ಬೀರಿದಂತಿದೆ. ಏಕೆಂದರೆ ಅವರ ಕವಿತೆಯ ಸಾಲುಗಳಲ್ಲಿ ಬೇಂದ್ರೆ ಅವರಂತೆಯೇ ಮಳೆಗಾಲವು ಮೇಲಿಂದ ಮೇಲೆ ಕಾಣಿಸಿಕೊಂಡಿದ್ದಿದೆ. ಹೀಗಾಗಿ ಜಿ.ಎಸ್. ಶಿವರುದ್ರಪ್ಪನವರು ಕಣವಿ ಅವರನ್ನು ಮಳೆಗಾಲದ ಕವಿ ಎಂದು ಬಣ್ಣಿಸಿದ್ದಾರೆ.

1956ರ ವೇಳೆಗೆ ಅದೇ ವಿಭಾಗದ ನಿರ್ದೇಶಕರಾಗಿ 1983 ರವರೆಗೆ ಸೇವೆ ಸಲ್ಲಿಸಿದರು. ಅವರ ಪತ್ನಿ ಶಾಂತಾದೇವಿ ಅವರು ಕೂಡ ಸಾಹಿತ್ಯ ಸಂಸ್ಕೃತಿಯ ಒಲವುಳ್ಳ ದೊಡ್ಡ ಮನೆತನದಿಂದ ಬಂದವರು.

ಚನ್ನವೀರ ಕಣವಿಯವರು(93) 16 ಫೆಬ್ರವರಿ 2022 ರಂದು ಬೆಳಿಗ್ಗೆ 9.15ಕ್ಕೆ ಧಾರವಾಡದ SDM ವೈದ್ಯಕೀಯ ಕಾಲೇಜಿನ ಆಸ್ಪತ್ರೆಯಲ್ಲಿ ಕೊನೆಯುಸಿರೆಳೆದರು.

ಪ್ರಾಥಮಿಕ ಶಾಲೆಯ ಮಾಸ್ತರರ ಪುತ್ರ ನಾಡೋಜ ಡಾ. ಚೆನ್ನವೀರ ಕಣವಿ ಒಬ್ಬ ಸಂಸ್ಕಾರವಂತ ಸಾಹಿತಿಗಳಲೊಬ್ಬರು. ಬಾಲ್ಯದಿಂದಲೇ ಹಳ್ಳಿಯ ಸೊಗಡು, ತೋಟ, ಗದ್ದೆ, ಗುಡ್ಡ, ಕಣಿವೆ ನೋಡುತ್ತ ಭಾವ ಜೀವನದಲ್ಲಿ ಬೆಳೆದ ಅವರು ಜೀವನವೇ ಕಾವ್ಯ.. ಕಾವ್ಯವೇ ಜೀವನ ಎಂದು ಬದುಕಿದ ನಾಡಿನ ಅಗ್ರಗಣ್ಯ ಕವಿ. ಅವರ ಕವಿತ್ವ ಬದುಕು, ಬೆಳೆದುಬಂದ ಹಾದಿ ಒಂದು ರೋಚಕ!.

**ಕಾವ್ಯ ಲೋಕದಲ್ಲಿ**

ಚನ್ನವೀರ ಕಣವಿಯವರು ವಿಮರ್ಶೆಯನ್ನು ಬರೆದಿದ್ದರಾದರೂ ಪ್ರಧಾನವಾಗಿ ಅವರು ಕವಿ. ಚೆನ್ನವೀರ ಕಣವಿಯವರು ಕವಿಯಾಗಿ ಪ್ರಕಟವಾಗಿದ್ದು ನವೋದಯದ 'ನಡುಹಗಲ' ಕಾಲದಲ್ಲಿ. ಬೇಂದ್ರೆ, ಕುವೆಂಪು, ಪು.ತಿ.ನ, ಮಧುರಚೆನ್ನ ಮೊದಲಾದವರ ಕಾವ್ಯ ಹೊಸದಾಗಿ ಕಾವ್ಯ ರಚನೆಗೆ ತೊಡಗುವವರನ್ನು ಗಾಢವಾಗಿ ಪ್ರಭಾವಿಸುತ್ತಿದ್ದ ಕಾಲ ಅದು.

ಕಣವಿ ಅವರ ಪ್ರಾರಂಭದ ರಚನೆಗಳಲ್ಲಿ ಇಂಥ ಪ್ರಭಾವಗಳ ನೆಲೆಯನ್ನು ಗುರುತಿಸಬಹುದಾಗಿದ್ದು, ಅವರ ಕಾವ್ಯದಲ್ಲಿ ರಮ್ಯ ಮನೋಧರ್ಮ, ಆದರ್ಶಪ್ರಿಯತೆ, ವ್ಯಕ್ತಿತ್ವ ನಿರ್ಮಾಣದ ಹಂಬಲಗಳು ವಿಶೇಷವಾಗಿ ಕಂಡು ಬರುತ್ತವೆ[5]. 1949ರಲ್ಲಿ ಪ್ರಕಟವಾದ 'ಕಾವ್ಯಾಕ್ಷಿ', 1950ರಲ್ಲಿ ಪ್ರಕಟವಾದ 'ಭಾವಜೀವಿ' ಸಂಗ್ರಹಗಳಲ್ಲಿ ಈ ಎಲ್ಲ ಅಂಶಗಳನ್ನೂ ಗುರುತಿಸಬಹುದು.

**ಪ್ರತಿಮಾನಿಷ್ಠ ಕವಿತೆ**

1953ರಲ್ಲಿ ಕಣವಿಯವರ ಮೂರನೆಯ ಸಂಗ್ರಹ 'ಆಕಾಶಬುಟ್ಟಿ' ಪ್ರಕಟವಾಯಿತು. ಈ ಸಂಗ್ರಹದಲ್ಲಿ ಕಣವಿ ಅವರ ಆಸಕ್ತಿಗಳು ವಿಸ್ತಾರಗೊಳ್ಳುತ್ತಿರುವ ಸೂಚನೆಗಳಿವೆ. ಸಾಮಾಜಿಕತೆ ಈ ಸಂಗ್ರಹದಲ್ಲಿ ಗುರುತಿಸಲೇಬೇಕಾದ ಬಹುಮುಖ್ಯ ಅಂಶವಾಗಿದೆ. ಸಮಾಜದ ದೋಷಗಳನ್ನು ಕವಿ ಇಲ್ಲಿ ವ್ಯಗ್ರರಾಗಿ ಟೀಕೆಗೆ ಗುರಿ ಮಾಡುತ್ತಾರೆ. ವ್ಯಂಗ್ಯದ ಧಾಟಿ ಇಂಥ ಸಂದರ್ಭಗಳಲ್ಲಿ ಮುಖ್ಯವಾಗುತ್ತದೆ.

ಬಸವರಾಜ ಕಟ್ಟೀಮನಿ, ನಿರಂಜನ, ಎಕ್ಕುಂಡಿ ಮೊದಲಾದವರ ಸ್ನೇಹ ಸಂಪರ್ಕ ಮತ್ತು ಆಗ ಪ್ರಚಲಿತವಿದ್ದ ಪ್ರಗತಿಶೀಲ ಸಾಹಿತ್ಯ ಚಳವಳಿ ಅವರನ್ನು ಪ್ರಭಾವಿಸಿರಬಹುದು. ಆಕಾಶಬುಟ್ಟಿ ಸಂಗ್ರಹದಲ್ಲಿರುವ ಪ್ರಜಾಪ್ರಭುತ್ವ ಎಂಬ ಕವಿತೆ ಯನ್ನು ನಾವಿಲ್ಲಿ ವಿಶೇಷವಾಗಿ ನೆನೆಯಬೇಕು. ಪ್ರತಿಮಾನಿಷ್ಠವಾದ ಈ ಕವಿತೆ ಕಣವಿ ಅವರ ಮುಂದಿನ ಕಾವ್ಯದ ಮುನ್ಸೂಚನೆಯಂತಿದೆ.

**ಶಿರೋಲೇಖ**

ನವ್ಯತೆಯಲ್ಲೂ ಕಾಯ್ದುಕೊಂಡ ವಿಭಿನ್ನತೆ 1954ರಲ್ಲಿ ಗೋಪಾಲಕೃಷ್ಣ ಅಡಿಗರ 'ಚಂಡೆ ಮದ್ದಳೆ' ಪ್ರಕಟವಾಗಿ ನವ್ಯಮಾರ್ಗ ಅಧಿಕೃತವಾಗಿ ಉದ್ಘಾಟಿತವಾಯಿತು[6]. ವಿಶೇಷವಾಗಿ ರೋಮ್ಯಾಂಟಿಕ್ ಮನೋಧರ್ಮದ ಚೆನ್ನವೀರಕಣವಿ ಅವರು ಈ ಹೊಸ ಕಾವ್ಯ ಸಂದರ್ಭದೊಂದಿಗೆ ಬೇರೊಂದು ರೀತಿಯಲ್ಲಿ ಸಂಘರ್ಷಕ್ಕೆ ತೊಡಗಿದ್ದೇ ಅವರ ಕಾವ್ಯ ಜೀವನದ ಮುಂದಿನ ಅಧ್ಯಾಯ. ಅಡಿಗರ ನವ್ಯ ಮಾರ್ಗದೊಂದಿಗೆ ಕಣವಿ ಅವರ ಸಂಬಂಧ ಅನ್ಯೋನ್ಯವಾದುದಾಗಿರಲಿಲ್ಲ.

ಅಡಿಗರ ಕಾವ್ಯ ಪ್ರವಾಹದಲ್ಲಿ ಪೂರ್ತಿಯಾಗಿ ಕೊಚ್ಚಿ ಹೋಗದಷ್ಟು ಕಣವಿ, ಜಿ.ಎಸ್.ಎಸ್ ಮತ್ತು ಕೆ.ಎಸ್.ನ ಅವರು ಸಾಧಿಸಿಕೊಂಡಿದ್ದರು. ಹೀಗಾಗಿಯೇ ಅಡಿಗರ ಅನುಯಾಯಿಗಳಿಗಿಂತ ಭಿನ್ನವಾಗಿ ಇವರು ಕಾವ್ಯ ಸೃಷ್ಟಿಸುವುದು ಸಾಧ್ಯವಾಯಿತು. ಭಾಷೆಯ ದೃಷ್ಟಿಯಿಂದ, ಲಯದ ದೃಷ್ಟಿಯಿಂದ, ಅನುಭವವನ್ನು ನಿಷ್ಠುರವಾಗಿ ಶೋಧಿಸಬೇಕೆಂಬ ದೃಷ್ಟಿಯಿಂದ ಇವರು ನವ್ಯವನ್ನು ಒಪ್ಪಿಕೊಂಡರು.

ಆದರೆ ಆಗ ನವ್ಯದಲ್ಲಿ ವಿಶೇಷವಾಗಿ ಕಾಣುತ್ತಿದ್ದ ನಿರಾಶಾಭಾವ, ಏಕಾಕಿತನದ ನೋವು, ಕಾಮದ ವಿಜ್ರಂಭಣೆ, ವ್ಯಂಗ್ಯದ ಆಟಾಟೋಪಗಳನ್ನೂ ಇವರು ಅನುಮಾನಿಸಿದರು. ಬದುಕನ್ನು ಸ್ನೇಹ, ಪ್ರೀತಿ, ವಾತ್ಸಲ್ಯ, ಸಹನಶೀಲತೆ ಮೊದಲಾದ ಮೌಲ್ಯಗಳನ್ನು ಆಶ್ರಯಿಸಿ ಸಹ್ಯವಾಗಿಸುವುದು ಸಾಧ್ಯವಿದೆ ಎಂಬುದು ಕಣವಿ ಅವರ ನಿಲುವಾಗಿ ತ್ತು. ಇವರು ತಮ್ಮ ಕಹಿಯನ್ನು ಸಾಮಾಜಿಕ ನೆಲೆಯಲ್ಲಿ ವ್ಯಕ್ತ ಪಡಿಸುತ್ತಾರೆ.

ಆದರೆ ವೈಯಕ್ತಿಕ ನೆಲೆಯಲ್ಲಿ ಮನಸ್ಸು ಕಹಿ ಮಾಡಿಕೊಳ್ಳದೆ ಆರ್ದ್ರರಾಗಿ ಪ್ರವರ್ತಿಸುತ್ತಾರೆ. 'ನಿನಗೆ ನೀನೇ ಗೆಳೆಯ ನಿನಗೆ ನೀನೇ' ಎಂದು ಅಡಿಗರಂತೆ ಕಣವಿ ಅವರು ಬರೆಯುವುದನ್ನು ನಾವು ಕಲ್ಪಿಸುವುದೇ ಸಾಧ್ಯವಿಲ್ಲ.

ದಾಂಪತ್ಯವನ್ನು ಕುರಿತು, ಮಕ್ಕಳನ್ನು ಕುರಿತು, ನಿಸರ್ಗವನ್ನು ಕುರಿತು, ಅಷ್ಟೇಕೆ ಪ್ರಾಣಿ–ಪಕ್ಷಿಗಳನ್ನು ಕುರಿತು ಕಣವಿ ಅವರು ಬರೆದಿರುವ ಕವಿತೆಗಳನ್ನು ನೋಡಿದರೆ, ಅವರು ಹೇಗೆ ಅಡಿಗರಿಂದ ಭಿನ್ನವಾಗಿ ಬರೆಯುತ್ತಿದ್ದರು ಎಂಬುದು ಸ್ಪಷ್ಟವಾಗುತ್ತದೆ.

"ನವ್ಯಕಾವ್ಯದಿಂದಾಗಿ ರೂಪುಗೊಂಡ ಮುಕ್ತ ಛಂದಸ್ಸು, ವಾಸ್ತವ ಮುಖತೆ, ಸಾಮಾಜಿಕ ಎಚ್ಚರ, ವ್ಯಂಗ್ಯ – ವಿಡಂಬನೆಗಳನ್ನು ಕಣವಿ ಅವರ ಕವಿತೆ ಹಿಡಿದುಕೊಂಡಿತಾದರೂ, ಕಣವಿಯವರು ತಮ್ಮ ವ್ಯಕ್ತಿತ್ವದ ಮೂಲದ್ರವ್ಯಗಳಾದ ನಿಸರ್ಗಪ್ರಿಯತೆ, ಅನುಭಾವಿಕ ದೃಷ್ಟಿ, ಮಾನವೀಯ ತೆ, ಮೌಲ್ಯಪ್ರಜ್ಞೆ ಇತ್ಯಾದಿಗಳನ್ನು ಬಿಟ್ಟು ಕೊಡಲಿಲ್ಲ" ಎಂಬ ರಾಷ್ಟ್ರಕವಿ ಜಿ.ಎಸ್. ಶಿವರುದ್ರಪ್ಪನವರು ಈ ಅಂಶವನ್ನು ತುಂಬಾ ಚೆನ್ನಾಗಿ ಗುರುತಿಸಿದ್ದಾರೆ.

ಕವಿತೆ ಜನತೆಗೆ ತಲುಪುವುದು ಅಗತ್ಯ ಎಂದು ಬಯಸುತ್ತಾ ಬಂದ ಕವಿಗಳಲ್ಲಿ ಕಣವಿ ಅವರೂ ಒಬ್ಬರು. ಅವರು ರಚಿಸಿರುವ ಗೀತೆಗಳನ್ನು ಈ ದೃಷ್ಟಿಯಿಂದ ನೋಡಬೇಕು. ಇಲ್ಲಿ ಅವರ ಗಂಭೀರ ಕಾವ್ಯದ ಆಸಕ್ತಿಗಳೇ ಸರಳ ರೂಪದಲ್ಲಿ ಅಭಿವ್ಯಕ್ತಿ ಪಡೆಯುತ್ತವೆ. ಕಾವ್ಯಬಂಧದಲ್ಲಿ ಅರ್ಥಪುಷ್ಟಿ ಗಿಂತ ನಾದ ಮಾಧುರ್ಯಕ್ಕೆ ಹೆಚ್ಚು ಒತ್ತು ಬೀಳುತ್ತದೆ. ಗೀತೆಗಳ ಸ್ವರೂಪವೇ ಅದು. ಭಾವ ಮತ್ತು ನಾದಗಳಲ್ಲಿ ರಮಿಸಲಾಗದ ಮನಸ್ಸು ಪಾಯಶಃ ಗೀತೆಗಳ ರಚನೆಗೆ ಸಮರ್ಥವಾಗುವುದಿಲ್ಲ. ಕಣವಿ ಅವರ ಗೀತೆಗಳಲ್ಲಿ ಸಹಜ ಕವಿಯೊಬ್ಬ ಬರೆದಾಗ ಮಾತ್ರ ಕಾಣಿಸಿಕೊಳ್ಳಬಲ್ಲ ಅನೇಕ ಕಾವ್ಯಾತ್ಮಕ ಹೊಳಹುಗಳು ವಿಶೇಷವಾಗಿ ಕಂಡು ಬರುತ್ತವೆ.

ವಿಶ್ವಭಾರತಿಗೆ ಕನ್ನಡದಾರತಿ,
ಮುಂಜಾವದಲಿ ಹಸಿರು ಹುಲ್ಲು ಮಕಮಲ್ಲಿನಲಿ,
ಹೂವು ಹೊರಳುವುವು ಸೂರ್ಯನ ಕಡೆಗೆ
ಒಂದು ಮುಂಜಾವಿನಲಿ ತುಂತುರಿನ ಸೋನೆ ಮಳೆ'

ಮೊದಲಾದ ಅವರ ಜನಪ್ರಿಯ ಗೀತೆಗಳನ್ನು ಈ ದೃಷ್ಟಿಯಿಂದಲೇ ಲಕ್ಷಿಸಬೇಕಾಗುತ್ತದೆ. ಇಂಥ ರಚನೆಗಳನ್ನು ಸಾಪೇಕ್ಷ ಕಾವ್ಯ ಎಂದು ಪು.ತಿ.ನ ಕರೆಯುತ್ತಾರೆ. ಪು.ತಿ.ನ, ಕೆ.ಎಸ್.ನ, ಜಿ.ಎಸ್.ಎಸ್ ಮೊದಲಾದವರು ಬೆಳೆಸಿಕೊಂಡು ಬಂದಿರುವ ಈ ಗೀತ ರಚನಾ ಪರಂಪರೆಗೆ ಕಣವಿ ಅವರದ್ದೂ ಬೆಲೆಯುಳ್ಳ ಕಾಣಿಕೆಯಾಗಿದೆ.

ಐವತ್ತು ವರ್ಷಗಳ ಕಾಲ ಕಾವ್ಯ ಸಲ್ಲಿಸಿದ ನಂತರದಲ್ಲಿ ಕೂಡಾ 'ಶಿಶಿರದಲ್ಲಿ ಬಂದ ಸ್ನೇಹಿತ' ಅಂತಹ ಕವನ ಸಂಕಲನಗಳಲ್ಲಿ ಕಣವಿಯವರ ಯಾವುದೇ ಅಬ್ಬರವಿಲ್ಲದ ಮೆಲುದನಿಯ ಕವಿತೆಗಳಿವೆ. ಕವಿಯ ಕಾವ್ಯಜೀವನದ ಮಾಗುವಿಕೆ ಈ ಕವಿತೆಗಳಲ್ಲಿ ತನಗೆ ತಾನೇ ಸ್ಪಷ್ಟವಾಗುವ ಅಂಶ. ಮಳಲು ಹಾಡುತ್ತದೆ, ಹಲ್ಲಿಗಳ ಸಹವಾಸ, ಕನಸಿನ ಗೊಮ್ಮಟ, ಈಗಿನ ಮಕ್ಕಳು ಅಂತಹ ಕವಿತೆಗಳು ಕೊಡುವ ಚಿತ್ರಗಳು ಹೊಸವು. ಅಂತರಂಗದ ಗತಿಗೆ ಹೊರ ಜಗತ್ತಿನ ಸಂಗತಿಗಳು ಅಪ್ರಯತ್ನಕವೆಂಬಷ್ಟು ಸಹಜವಾಗಿ, ಪ್ರತೀಕವಾಗಿ ನಿಲ್ಲುವ ಬಗೆಯಿಂದ ಇವು ಸಹಜ ಕಾವ್ಯದ ಮಾದರಿಗಳಾಗಿವೆ.

ಒಟ್ಟಾರೆ ತಮ್ಮ ಸುದೀರ್ಘ ಕಾವ್ಯೋದ್ಯೋಗದಲ್ಲಿ ಕಣವಿಯವರು ಶ್ರೇಷ್ಠವಾದ ಅನೇಕ ಕವಿತೆಗಳನ್ನು ಬರೆದು ಆಧುನಿಕ ಕನ್ನಡ ಕಾವ್ಯ ಸಂದರ್ಭದ ಬಹು ಮುಖ್ಯ ಕವಿಗಳಲ್ಲಿ ಒಬ್ಬರಾಗಿದ್ದಾರೆ. ಲೋಕೋತ್ತರ ಸ್ಫುರಿತಗಳು ಅವರ ಕಾವ್ಯದಲ್ಲಿ ಆಗಾಗ ಕಾಣುವುದಾದರೂ, ಅವರು ವಿಶೇಷವಾಗಿ 'ಸಾಮಾನ್ಯ'ದ ಆರಾಧಕರಾದ ಕವಿ. ಅವರ ಕಾವ್ಯದಲ್ಲಿ ನಾವು ಕೇಳುವುದು ಅವಧೂತನ ವಾಣಿಯನ್ನಲ್ಲ;

ಸದ್ಗಹಸ್ಥನೋಬ್ಬನ ಸಮಾಧಾನದ ಧ್ವನಿಯನ್ನು. ಇದ್ದುದರಲ್ಲೇ ಬದುಕನ್ನು ಹಿತವಾಗಿಸಿಕೊಂಡು ನೆಮ್ಮದಿಯಿಂದ ಬದುಕುವ ಅಗತ್ಯವನ್ನು ಅವರ ಕಾವ್ಯ ಒತ್ತಿ ಹೇಳುತ್ತಿದೆ. 'ಮೂರು ಗಳಿಗೆಯ ಬಾಳು

ಮಗಮಗಿಸುತಿರಲಿ' ಎಂಬುದು ಅವರ ಹಾರೈಕೆ. ಅದಮ್ಯ ಜೀವನ ಪ್ರೀತಿಯ ಕಣವಿ ಅವರ ಕಾವ್ಯ, ನೋವು ನಲಿವುಗಳನ್ನು ಸಮತೂಕದಲ್ಲಿ ಧಾರಣ ಮಾಡಿದೆ. ಸಮಾಧಾನವೇ ಅದರ ಸ್ಥಾಯಿ ಅಂತಃಸತ್ವವಾಗಿದೆ.

ಅಂತಿಮವಾಗಿ, ಸಮನ್ವಯದ ಕವಿ, ಯುಗದ ಕವಿ, ಜೀವನ ಮತ್ತು ಸಾಹಿತ್ಯದಲ್ಲಿ ಸಮತೆಯನ್ನು ಸಾಧಿಸಿ ತೋರಿಸಿದ ಧೀಮಂತ ಕವಿ ಇಡೀ ತಮ್ಮ ಜೀವನವನ್ನು ಸಾಹಿತ್ಯಕ್ಕೆ ಮುಡಿಪಾಗಿಟ್ಟು ಜ್ಞಾನವನ್ನು ಧಾರೆಯೆರೆದವರು. ಕಥೆ, ಕಾದಂಬರಿ, ಕವನ, ಪ್ರವಾಸ ಸಾಹಿತ್ಯ, ಹಾಗೂ ಜೀವನ ಚರಿತ್ರೆ ಮುಂತಾದ ಪ್ರಕಾರಗಳಲ್ಲಿ ಅವಿರತವಾಗಿ ಬರೆದು ಸಾಹಿತ್ಯದ ರುಚಿಯನ್ನು ಹಚ್ಚಿದವರು ಇಂತಹ ಮೇರು ಕವಿ ಇಂದು ನಮ್ಮನ್ನು ಅಗಲಿದ್ದಾರೆ. ಆದರೆ, ಅವರ ಸಾಹಿತ್ಯದ ಕೊಡುಗೆ ಎಂದಿಗೂ ಮರೆಯಲಾರದ ಬರವಣಿಗೆಗಳ ಕಣಿಗಳು ಆದ್ದರಿಂದ ಪ್ರಶಿಕ್ಷಣಾರ್ಥಿಗಳು ಹಾಗೂ ಸಾಹಿತ್ಯಾಸಾಕ್ತರು ಇಂತಹ ಕವಿಗಳ ಜೀವನ ಶೈಲಿ ಹಾಗೂ ಸಾಹಿತ್ಯ ಸೇವೆಯನ್ನು ನಾವುಗಳು ಅಳವಡಿಸಿಕೊಂಡಾಗ ಮಾತ್ರ ನಾವು ಸಲ್ಲಿಸುವ ಕೊಡುಗೆಗಳು ಇದನ್ನು ನಾವು ಪಾಲಿಸಿ ಮುಂದಿನ ಪೀಳಿಗೆಗೆ ತೆಗೆದುಕೊಂಡು ಹೋಗೋಣ ಎಂದು ಆಶಿಸುತ್ತೇನೆ.

**ಡಾ. ವೀರೇಂದ್ರ ಕುಮಾರ ವಾಲಿ ಎಸ್.,**
ಸಹಾಯಕ ಪ್ರಾಧ್ಯಾಪಕರು

## ಪ್ರೊ. ಚಂದ್ರಶೇಖರ ಪಾಟೀಲ



ಕನ್ನಡ ನಾಡಿನ ಕವಿ, ನಾಟಕಕಾರ, ಸಂಘಟನಕಾರ, ಪತ್ರಿಕಾ ಸಂಪಾದಕ, ಆಡಳಿತಗಾರ, ಕನ್ನಡ ಹೋರಾಟಗಾರ ಹೀಗೆ ಬಹುಮುಖ ವ್ಯಕ್ತಿತ್ವದಿಂದ ಪ್ರಸಿದ್ಧರಾಗಿದ್ದಾರೆ. ಚಂದ್ರಶೇಖರ ಪಾಟೀಲರ ಕಾವ್ಯನಾಮ "ಚಂಪಾ".

**ಇವರ ಜೀವನ**

ಚಂದ್ರಶೇಖರ ಪಾಟೀಲರು ಹುಟ್ಟಿದ್ದು ಹಾವೇರಿ ಜಿಲ್ಲೆಯ ಸವಣೂರು ತಾಲ್ಲೂಕಿನ ಹತ್ತೀಮತ್ತೂರಿನಲ್ಲಿ 1939ರ ಜೂನ್ 18ರಂದು. ತಂದೆ ಬಸವರಾಜ ಹಿರೇಗೌಡರು, ತಾಯಿ ಮುರಿಗೆವ್ವ. ಚಂದ್ರಶೇಖರ ಪಾಟೀಲರು ಸಾಹಿತ್ಯ ಲೋಕದಲ್ಲಿ ಚಂಪಾ ಎಂಬ ಹೆಸರಿನಿಂದ ಪ್ರಖ್ಯಾತರು. ಪಾಟೀಲರ ಪ್ರಾರಂಭಿಕ ಶಿಕ್ಷಣ ಹಾವೇರಿಯಲ್ಲಿ ಮತ್ತು ಪ್ರೌಢಶಿಕ್ಷಣ ಧಾರವಾಡದಲ್ಲಿ ನೆರವೇರಿತು. ಅವರ ತಂದೆಯವರಿಗೆ ಇಂಗ್ಲಿಷ್ ಬಗ್ಗೆ ಅಭಿಮಾನವಿದ್ದುದರಿಂದ ಅದರಿಂದ ಪ್ರೇರಿತರಾಗಿ ಇಂಗ್ಲಿಷ್ ಎಂ.ಎ. ಪದವಿ ಗಳಿಸಿದರು. ಇದಲ್ಲದೆ ಬ್ರಿಟಿಷ್ ಕೌನ್ಸಿಲ್ ವಿದ್ಯಾರ್ಥಿವೇತನ ಪಡೆದು ಇಂಗ್ಲೆಂಡಿನ ಲೀಡ್ಸ್ ವಿಶ್ವವಿದ್ಯಾಲಯದಿಂದ ಭಾಷಾಶಾಸ್ತ್ರದಲ್ಲಿನ ಸ್ನಾತಕೋತ್ತರ ಪದವಿ ಮತ್ತು ಹೈದರಾಬಾದಿನ ಕೇಂದ್ರೀಯ ಇಂಗ್ಲಿಷ್ ಸಂಸ್ಥೆಯಿಂದ ಇಂಗ್ಲಿಷ್ ಅಧ್ಯಯನದ ಡಿಪ್ಲೊಮ ಪಡೆದರು. ಶಿಕ್ಷಣದ ಪ್ರತಿ ಹಂತದಲ್ಲಿಯೂ ಅಗ್ರ ಶ್ರೇಯಾಂಕ ಗಳಿಸಿದ ಕೀರ್ತಿ ಅವರದ್ದಾಗಿತ್ತು.

**ಇವರ ಅಧ್ಯಾಪನದ ಜೊತೆಗೆ ಬರಹ**

ಚಂದ್ರಶೇಖರ ಪಾಟೀಲರು ಕರ್ನಾಟಕ ವಿಶ್ವವಿದ್ಯಾಲಯದಲ್ಲಿ ಇಂಗ್ಲಿಷ್ ಉಪನ್ಯಾಸಕರಾಗಿ ಬೋಧಕ ವೃತ್ತಿ ಆರಂಭಿಸಿ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸುತ್ತಲೇ ತಮ್ಮ ಕಾವ್ಯ ಹಾಗೂ ನಾಟಕಗಳ ಮೂಲಕ ಪ್ರಸಿದ್ಧರಾಗುತ್ತಾ ಬಂದರು. ಅವರು ಹಾವೇರಿಯ ಮುನಿಸಿಪಲ್ ಹೈಸ್ಕೂಲಿನಲ್ಲಿದ್ದಾಗಲೇ ಕವನ ಬರೆಯುವುದರ ಬಗ್ಗೆ ಆಸಕ್ತಿ ಮೂಡಿಸಿಕೊಂಡಿದ್ದರು. ಅರವಿಂದರ ಬಗ್ಗೆ ಭಾವೋದ್ವೇಗದಿಂದ ಮಾತನಾಡುತ್ತಿದ್ದ ಗಂಗಾಧರ ಸವದತ್ತಿ ಮಾಸ್ತರರು, ವ್ಯಂಗ್ಯ ಶೈಲಿಯಲ್ಲಿ ಬದುಕಿನ ಹಾಗೂ ಭಾಷೆಯ ಎಳೆಗಳನ್ನು ಬಿಚ್ಚಿಡುತ್ತಿದ್ದ ಆರ್.ವಿ. ಕುಲಕರ್ಣಿ ಮತ್ತು ಗಣಿತದ ಪ್ರಮೇಯಗಳನ್ನು ಬಿಡಿಸುವ ಮುನ್ನ ಹಿಂದಿನ ರಾತ್ರಿ ಬರೆದಿದ್ದ ಕವನಗಳನ್ನೂ ವಾಚಿಸಲು ಪ್ರಾರಂಭಿಸುತ್ತಿದ್ದ ಪಿ.ಜಿ. ಬಿದರಿಮಠ ಮಾಸ್ತರು – ಹೀಗೆ ಹಲವಾರು ಮಂದಿ ಇವರ ಎಳೆ ವಯಸ್ಸಿನಲ್ಲಿಯೇ ಸಾಹಿತ್ಯದ ಪ್ರಭಾವ ಬೀರಿದ್ದರು. ಧಾರವಾಡದ ಕಾಲೇಜಿಗೆ ಬಂದಾಗ ಪ್ರಿನ್ಸಿಪಾಲರಾಗಿದ್ದ ವಿ.ಕೃ. ಗೋಕಾಕರು ನವ್ಯಕಾವ್ಯ ನಿರ್ಮಿತಿಯ ನೇತಾರರಲ್ಲೊಬ್ಬರಾಗಿದ್ದು, ಇವರ ಪ್ರಭಾವಕ್ಕೆ ಒಳಗಾಗಿ ಕವನಗಳನ್ನೂ ಬರೆಯತೊಡಗಿ, ಅವುಗಳಲ್ಲಿ ಹಲವಾರು ಕವನಗಳು 'ಪ್ರಪಂಚ' ಪತ್ರಿಕೆಯಲ್ಲಿ ಪ್ರಕಟಗೊಂಡವು. ಕಾವ್ಯದಲ್ಲಿ ಬೆಳೆದ ಆಸಕ್ತಿಯಿಂದ, ಹಲವಾರು ಮಂದಿ ಉದಯೋನ್ಮುಖರು ಸೇರಿ 'ಕಮಲ ಮಂಡಲ' ಎಂಬ ಸಂಸ್ಥೆಯನ್ನು ಹುಟ್ಟುಹಾಕಿದರು.

**ಇವರ ಕಾವ್ಯ**

1957ರಲ್ಲಿ ಚಂದ್ರಶೇಖರ ಪಾಟೀಲರು ಹೊಂಗನಸ ಹಡಗು, ನಾಳಿಗಿದೋ ಸ್ವಾಗತ, ಚರಿಪನಾದವೊ ಹಾಡು ಹಕ್ಕಿಯೋ, ಬಾನುಲಿ, ಮಧ್ಯಬಿಂದು, ಗಾಂಧೀ ಸ್ಮರಣೆ. ಮುಂತಾದ ಕವನಗಳು.

**ಇವರ ನಾಟಕ**

ಕಾವ್ಯಕೃಷಿಯಲ್ಲೇ ತೊಡಗಿಸಿಕೊಂಡಿದ್ದ ಚಂಪಾರವರು ಹಲವಾರು ಸಮಸ್ಯೆಗಳ ಮಿಡಿತಕ್ಕೆ ಒಳಗಾಗಿ ಕಾವ್ಯ ಮಾಧ್ಯಮದಿಂದ ನಾಟಕಮಾಧ್ಯಮವನ್ನೂ ಆಯ್ದುಕೊಂಡು ಹಲವಾರು ನಾಟಕಗಳನ್ನೂ ರಚಿಸಿದ್ದು ಅವುಗಳಲ್ಲಿ ಕೊಡೆಗಳು, ಅಪ್ಪ, ಕುಂಟ ಕುಂಟ ಕುರುವತ್ತಿ, ಗುರ್ತಿನವರು, ಟಿಂಗರ ಬುಡ್ಡಣ್ಣ, ಕತ್ತಲರಾತ್ರಿ, ಗೋಕರ್ಣದ ಗೌಡಸಾನಿ, ಜಗದಂಬೆಯ ಬೀದಿನಾಟಕ, ಬುರಡಿ ಬಾಬನ ವಸ್ತ್ರಾಪಹರಣ ಪವಾಡ, ನಳ ಕವಿಯ ಮಸ್ತಕಾಭಿಷೇಕ, ವಂದಿಮಾಗಧ ಮುಂತಾದವುಗಳು ಪ್ರಖ್ಯಾತವಾಗಿವೆ.

**ಇವರ ಸಂಪಾದನೆ**

ಚಂಪಾ ಇವರ ಸಂಪಾದಿತ ಕೃತಿಗಳೆಂದರೆ ಸಂಕ್ರಮಣ ಕಾವ್ಯ, ಗಾಂಧಿ ಗಾಂಧಿ, ಜೂನ್ 75–ಮಾರ್ಚ್ 77, ಬಂಡಾಯ ಮತ್ತು ಸಾಹಿತ್ಯ, ನೆಲ್ಸನ್ಮಂಡೇಲಾ, ಕನ್ನಡನಾಡಿಗೊಂದು ಪ್ರಾದೇಶಿಕ ಪಕ್ಷ, ಸಂಕ್ರಮಣ ಸಾಹಿತ್ಯ (3 ಸಂಪುಟಗಳಲ್ಲಿ), ಗಾಂಧಿ ಎನ್ನುವ ಹೆಸರು ಮುಂತಾದವುಗಳು. ಪಾಟೀಲರ ಇತರ ಕೃತಿಗಳೆಂದರೆ ಬೇಂದ್ರೆ–ನಾ ಕಂಡಂತೆ, ನನಗೆ ಕಂಡಷ್ಟು, 26 ದಿನ 25 ರಾತ್ರಿ, ಕನ್ನಡ ಕನ್ನಡ ಬರ್ರಿ ನಮ್ಮ ಸಂಗಡ ಮತ್ತು ಇಂಗ್ಲಿಷ್ನಲ್ಲಿ ರಚಿಸಿದ ಕೃತಿ AT THE OTHER END ಮುಂತಾದವು.

**ಸಂಕ್ರಮಣ**

ಪೂರ್ಣರೂಪದ ಸಾಹಿತ್ಯ ಪತ್ರಿಕೆಯೊಂದರ ಅವಶ್ಯಕತೆಯನ್ನು ಮನಗಂಡ ಚಂದ್ರಶೇಖರ ಪಾಟೀಲರು ಸಮಾನ ಮನಸ್ಕರೊಡನೆ ಸಮಾಲೋಚಿಸಿ ಗಿರಡ್ಡಿ ಗೋವಿಂದರಾಜ, ಸಿದ್ಧಲಿಂಗ ಪಟ್ಟಣಶೆಟ್ಟಿ,

ಇವರುಗಳೊಡನೆ ಸೇರಿ 1964ರಲ್ಲಿ ಪ್ರಾರಂಭಿಸಿದ ಪತ್ರಿಕೆ 'ಸಂಕ್ರಮಣ'. ಈ ಪತ್ರಿಕೆಯು ನವ್ಯದ ಉಚ್ಛ್ರಾಯ ಸ್ಥಿತಿಯಲ್ಲಿ ಪ್ರಾರಂಭವಾಗಿದ್ದು ಎಪ್ಪತ್ತರ ದಶಕದ ನಂತರ ದಲಿತ, ಬಂಡಾಯ ಸಾಹಿತ್ಯ ಚಳವಳಿ ಮುಂತಾದವುಗಳನ್ನು ಒಳಗೊಂಡು ಹಲವಾರು ಯುವ ಬರಹಗಾರರಿಗೆ ವೇದಿಕೆಯನ್ನು ಕಲ್ಪಿಸಿದ ಪತ್ರಿಕೆಯಾಗಿ ಐದು ದಶಕಗಳಿಗೂ ಹೆಚ್ಚು ಕಾಲದಿಂದ ಪ್ರಕಟವಾಗುತ್ತಿದೆ.

**ಇವರ ಕನ್ನಡ ಹೋರಾಟ**

ಚಂದ್ರಶೇಖರ ಪಾಟೀಲರು ಉತ್ತರ ಕರ್ನಾಟಕದ ಸಾಂಸ್ಕೃತಿಕ ರಾಜಧಾನಿ ಎನಿಸಿಕೊಂಡಿರುವ ಧಾರವಾಡದಲ್ಲಿದ್ದಾಗಿನಿಂದಲೂ ಕನ್ನಡ ಪರ ಕಾಳಜಿ ವಹಿಸಿ, ಕನ್ನಡ ಪರ ಹೋರಾಟವನ್ನು ನಡೆಸುತ್ತಾ ಬಂದವರು. ಹಲವಾರು ಸಂಘಟನೆಗಳಲ್ಲಿ ಪ್ರಮುಖ ಪಾತ್ರವಹಿಸಿದವರು. ರಾಜ್ಯ ಬಂಡಾಯ ಸಾಹಿತ್ಯ ಸಂಘಟನೆಯ ಸಂಚಾಲಕರಾಗಿ, ಅಖಿಲ ಕರ್ನಾಟಕ ಕೇಂದ್ರ ಕನ್ನಡ ಕ್ರಿಯಾಸಮಿತಿಯ ಪ್ರಧಾನ ಕಾರ್ಯದರ್ಶಿಯಾಗಿ, ಧಾರವಾಡ ನಾಟಕ ಕೂಟದ ಕಾರ್ಯದರ್ಶಿಯಾಗಿ, ಮ್ಯಾಳ ನಾಟಕ ಸಂಘದ ಕಾರ್ಯಾಧ್ಯಕ್ಷರಾಗಿ, ಕರ್ನಾಟಕ ವಿಶ್ವವಿದ್ಯಾಲಯದ ವಿಶ್ವಚೇತನ ಸಾಂಸ್ಕೃತಿಕ ವೇದಿಕೆಯ ನಿಯೋಜಕರಾಗಿ– ಹೀಗೆ ಹಲವು ಹತ್ತು ಸಂಘಟನೆಗಳಲ್ಲೂ, ಗೋಕಾಕ ಚಳವಳಿ ಮುಂತಾದ ಅನೇಕ ಜನಪರ ಚಳವಳಿಗಳಲ್ಲೂ ತಮನ್ನು ತೊಡಗಿಸಿಕೊಂಡವರು. ತುರ್ತು ಪರಿಸ್ಥಿತಿಯ ಸಂದರ್ಭದಲ್ಲಿ 26ದಿನ 25ರಾತ್ರಿ ಜೈಲುವಾಸವನ್ನನುಭವಿಸಿದರು.

**ಇವರ ಜವಾಬ್ದಾರಿಗಳು**

ಕನ್ನಡಕ್ಕಾಗಿ ದುಡಿಯುತ್ತಿದ್ದ ಚಂದ್ರಶೇಖರ ಪಾಟೀಲರನ್ನು ಕರ್ನಾಟಕ ಸರ್ಕಾರವು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾಗಿ ನೇಮಿಸಿತು. 1996–99ರ ಅವಧಿಗೆ ಈ ಜವಾಬ್ದಾರಿಯನ್ನು ನಿರ್ವಹಿಸುವುದರ ಜೊತೆಗೆ 2004–08 ಅವಧಿಗೆ ಕನ್ನಡ ಸಾಹಿತ್ಯ ಪರಿಷತ್ತಿನ ಚುನಾಯಿತ ಅಧ್ಯಕ್ಷರಾಗಿಯೂ ಕಾರ್ಯನಿರ್ವಹಿಸಿದರು. ಅವರು ಪರಿಷತ್ತಿನ ಅಧ್ಯಕ್ಷರಾಗಿದ್ದಾಗ ಪರಿಷತ್ತನ್ನು ಪ್ರಬಲ ಹೋರಾಟದ ವೇದಿಕೆಯನ್ನಾಗಿ ರೂಪಿಸಿದ್ದು, ಪುಸ್ತಕ ಮಾರಾಟದ ಮೂಲಕ ಸಣ್ಣ ಪ್ರಮಾಣದ ಪ್ರಕಾಶಕರನ್ನು ಉತ್ತೇಜಿಸಲು 'ಪುಸ್ತಕ ಸಂತೆ'ಯನ್ನು ಪ್ರತಿ ಶನಿವಾರ ಸಂಜೆ ಏರ್ಪಡಿಸಿದ್ದರ ಜೊತೆಗೆ ಆಯೋಜಿಸಿದ ಸಾಂಸ್ಕೃತಿಕ ಕಾರ್ಯಕ್ರಮಗಳು, ಶಿಕ್ಷಣ ಸಮಸ್ಯೆಯನ್ನು ಪರಿಹರಿಸಲು ಉನ್ನತ ಮಟ್ಟದ ಸಮಾಲೋಚನ ಸಭೆಯನ್ನು ಏರ್ಪಡಿಸಿದ್ದು, ಗಡಿನಾಡ ಕನ್ನಡಿಗರ ಸಮಸ್ಯೆಗಳ ಪರಿಹಾರಕ್ಕಾಗಿ ಅಧ್ಯಕ್ಷರ ಪುಸ್ತಕ ನಿಧಿಯನ್ನು ಪ್ರಾರಂಭಿಸಿದ್ದು, ಕನ್ನಡ ಭಾಷೆಗೂ ಶಾಸ್ತ್ರೀಯ ಸ್ಥಾನಮಾನ ದೊರೆಯುವಂತಾಗಲು ಹೋರಾಟ ನಡೆಸಿದ್ದು, ಪರಿಷತ್ತಿಗೆ ತನ್ನದೇ ಆದ ವೆಬ್ಸೈಟ್, ಅಂತರ್ಜಾಲ ಸೌಲಭ್ಯಗಳು, ಗಣಕ ಸಮ್ಮೇಳನದ ಆಯೋಜನೆ ಮುಂತಾದ ಹಲವಾರು ಕಾರ್ಯಕ್ರಮಗಳನ್ನು ಆಯೋಜಿಸಿದರು.

**ಇವರಿಗೆ ಸಂದ ಪ್ರಶಸ್ತಿ ಗೌರವಗಳು**

ಕನ್ನಡ ನಾಡು–ನುಡಿ, ಸಂಸ್ಕೃತಿಯ ರಕ್ಷಣೆಗಾಗಿ ನಿರಂತರ ಹೋರಾಡುತ್ತಾ ಬಂದಿರುವ ಚಂಪಾರವರಿಗೆ ಬಂದಿರುವ ಪ್ರಶಸ್ತಿ ಗೌರವಗಳು ಹಲವಾರು. ಇವುಗಳಲ್ಲಿ ರಾಜ್ಯ ಸಾಹಿತ್ಯ ಅಕಾಡೆಮಿ ಬಹುಮಾನ (1960, 74, 76), ರಾಜ್ಯ ಸಾಹಿತ್ಯ ಅಕಾಡೆಮಿ ಗೌರವ ಪ್ರಶಸ್ತಿ, ದಿನಕರ ದೇಸಾಯಿ ಪ್ರತಿಷ್ಠಾನ ಪ್ರಶಸ್ತಿ, ಕರ್ನಾಟಕ ನಾಟಕ ಅಕಾಡೆಮಿ ಪ್ರಶಸ್ತಿ, ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ, ಕೆ.ವಿ. ಶಂಕರಗೌಡ ರಂಗಭೂಮಿ ಪ್ರಶಸ್ತಿ, ಸಂದೇಶ್ ಮಾಧ್ಯಮ ಪ್ರಶಸ್ತಿ, ಕರುನಾಡ ಭೂಷಣ ಪ್ರಶಸ್ತಿ, ಆಳ್ವಾಸ್ ನುಡಿಸಿರಿ ಪ್ರಶಸ್ತಿ

ಮತ್ತು ಪಂಪ ಪ್ರಶಸ್ತಿ ಮುಂತಾದವುಗಳು ಪ್ರಮುಖವಾಗಿವೆ. 2017 ರಲ್ಲಿ ಮೈಸೂರಿನಲ್ಲಿ ನಡೆದ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷರಾಗಿದ್ದರು 2018 ಸಾಲಿನಲ್ಲಿ ಬಸವಶ್ರೀ ಪ್ರಶಸ್ತಿ ನೀಡಿ ಗೌರವಿಸಲಾಗಿದೆ

**ಇವರ ಪ್ರಸಿದ್ಧ ಗೀತೆಗಳು**

ಚಂಪಾ ಅವರ ಅನೇಕ ಗೀತೆಗಳು ಕರ್ನಾಟಕದ ಪ್ರಸಿದ್ಧ ಗಾಯಕರ ಧ್ವನಿಯಲ್ಲಿ ವೈಭವಿಸಿವೆ. ಸಿ ಅಶ್ವತ್ಥರ ಧ್ವನಿಯಲ್ಲಿ ಮೂಡಿರುವ ಗುಪ್ತಗಾಮಿನಿ ನನ್ನ ಶಾಲ್ಮಲ ಅತ್ಯಂತ ಜನಪ್ರಿಯವಾದದ್ದು.

**ಇವರ ವಿನೋದ ಪ್ರವೃತ್ತಿ**

ಚಂದ್ರಶೇಖರ ಪಾಟೀಲರು 'ಕನ್ನಡ ಕಾವ್ಯದ ಭೂತ ಭವಿಷ್ಯವ ಬಣ್ಣಿಸಿ ಹೇಳೋ ಗಾಂಪಾ; ನಮ್ಮ ಆದಿಕವಿ ಪಂಪಾ, ಗುರುವೇ ನಮ್ಮ ಅಂತ್ಯಕವಿ ಚಂಪಾ' ಅಂದು ತಮ್ಮನ್ನೇ ತಾವು ವಿನೋದ ಮಾಡಿಕೊಳ್ಳುತ್ತಾರೆ.

**ಇವರ ನಿಧನ**

ಕನ್ನಡ ನಾಡು ನುಡಿಯ ಕುರಿತು ಅಪಾರ ಕಾಳಜಿ ಮತ್ತು ಪ್ರೀತಿಯನ್ನು ಹೊಂದಿದ್ದ ಚಂಪಾರವರು ವಯೋಸಹಜ ಅನಾರೋಗ್ಯದಿಂದ ದಿನಾಂಕ 10-01-2022ರಂದು ತಮ್ಮ ಕೊನೆಯುಸಿರೆಳೆದರು.

ಹಿರಿಯರಾದ ಇವರು ಈಗ ನಮ್ಮೊಂದಿಗಿಲ್ಲ, ಆದರೆ ಅವರ ಸಾಹಿತ್ಯದ ಕೊಡುಗೆ ಯಾವಾಗಲೂ ಸದಾ ನಮ್ಮೊಂದಿಗಿರುತ್ತದೆ. ಅದನ್ನು ತಿಳಿಯುವ ಪ್ರಯತ್ನ ಮಾಡುತ್ತಾ ಅವರಿಗೆ ನುಡಿನಮನ ಸಲ್ಲಿಸೋಣ.

**ಡಾ. ರವಿ ಹೆಚ್**
ಸಹಾಯಕ ಪ್ರಾಧ್ಯಾಪಕರು

# ಕರ್ನಾಟಕ ರಾಜ್ಯೋತ್ಸವ ಇದು ಕನ್ನಡಿಗರ ಹಬ್ಬ



ಕೇಳಲು ತಂಪಾಗಿರುವ, ಮಾತನಾಡಲು ಸರಳವಾಗಿರುವ, ಮನಸ್ಸಿಗೆ ಮುದ ನೀಡುವ ಭಾಷೆ ಎಂದರೆ ಅದು ಕನ್ನಡ.......ಕನ್ನಡ. ಅದೊಂದು ಸಿಹಿ ಜೇನು ಇದ್ದ ಹಾಗೆ. ಜೇನು ತುಪ್ಪವನ್ನು ನಾವು ಸವಿಯುತ್ತಾ ಹೋದ ಹಾಗೆ ಸಿಹಿ ಇರುತ್ತೆ ಹೊರತು ಕಹಿ ಇರುವುದಿಲ್ಲ. ಹಾಗೆಯೇ ಈ ನಮ್ಮ ಸವಿ ಕನ್ನಡ.

ನವೆಂಬರ್ 1 ಬಂತು ಎಂದರೆ ನಮಗೆ ನೆನಪಾಗುವುದು ಕನ್ನಡ ಬಾವುಟ ಹಿಡಿದು ಬೀದಿಯಲ್ಲಿ ಸಂಚರಿಸುವ ಸಣ್ಣ ಪುಟ್ಟ ಶಾಲಾ ಪುಟಾಣಿಗಳು, ಕನ್ನಡದ ಜಯ ಘೋಷಗಳು, ಕನ್ನಡಾಂಬೆಯ ಪೂಜೆ ಇವೆಲ್ಲಾ ಕಣ್ಣ ಮುಂದೆ ಬರುತ್ತವೆ.

ಕನ್ನಡವೆಂಬುದದೊಂದು ಅಮೃತ ಕುಡಿಯಂತೆ ಎಂಬ ಕವಿ ವಾಣಿಯೊಂದಿದೆ. ಅಂತಹ ಕನ್ನಡ ನಾಡು ಉದಯವಾದ ದಿನ ನವೆಂಬರ್ 1, 1956 ರಲ್ಲಿ ಕನ್ನಡ ಪ್ರದೇಶಗಳು 'ಮೈಸೂರು ರಾಜ್ಯ' ಎನ್ನುವ ಹೆಸರಿನಲ್ಲಿ ಒಂದು ಗೂಡಿದವು. ನಂತರದಲ್ಲಿ 1973 ರಲ್ಲಿ 'ಕರ್ನಾಟಕ ರಾಜ್ಯ' ಎಂದು ಮರು ಹೆಸರಿಸಲಾಯಿತು. ಹಾಗಾಗಿ ಭಾಷೆಯ ಆಧಾರದ ಮೇಲೆ ನವೆಂಬರ್ 1, 1973 ರಂದು ಕನ್ನಡ ನಾಡಿನ ಸವಿ ನೆನಪಿಗಾಗಿ ನಾಡ ಹಬ್ಬವಾಗಿ ಆಚರಿಸುತ್ತಾ ಬರುತ್ತಿದ್ದೇವೆ. ಬ್ರಿಟಿಷ್ ಆಡಳಿತದ ಕಾಲಾವಧಿಯಲ್ಲಿ ಕೆಲವು ಜಿಲ್ಲೆಗಳನ್ನು ಹೊಂದಿದ್ದ ಅಂದಿನ ಕರ್ನಾಟಕ(ಮೈಸೂರು) ರಾಜ್ಯ, ನಂತರ ಸುಲಭ ಆಡಳಿತಕ್ಕಾಗಿ ಕರ್ನಾಟಕ ಹೊಸ ಜಿಲ್ಲೆಗಳನ್ನು ರಚಿಸಿಕೊಂಡಿತು. ಬೆಂಗಳೂರು ನಗರ ಬೆಳೆಯುತ್ತಾ ಹೋದ ಹಾಗೆ 1983 ರಲ್ಲಿ ನಗರ ಮತ್ತು ಗ್ರಾಮಾಂತರ ಜಿಲ್ಲೆ ಎಂದು ಪ್ರತ್ಯೇಕಿಸಲಾಯಿತು. ಕರ್ನಾಟಕ ಜನತೆಯ ಬೇಡಿಕೆಯಿಂದಾಗಿ 1997 ರಲ್ಲಿ ಜೆ.ಹೆಚ್. ಪಾಟೇಲರು ಈ ಹೊಸ (ಹಾವೇರಿ, ಗದಗ, ಬಾಗಲಕೋಟೆ, ದಾವಣಗೆರೆ, ಚಾಮರಾಜ ನಗರ, ಉಡುಪಿ) ಜಿಲ್ಲೆಗಳನ್ನು ರಚಿಸಿದರು. ಇವು ಆಗ ಅಸ್ತಿತ್ವಕ್ಕೆ ಬಂದ ರಾಜ್ಯಗಳು. 2007 ರಲ್ಲಿ ರಾಮನಗರ, ಚಿಕ್ಕಬಳ್ಳಾಪುರ 2 ಜಿಲ್ಲೆಗಳನ್ನು ರಚಿಸಲಾಯಿತು. ಅಲ್ಲದೆ ಕರ್ನಾಟಕದ ಪ್ರತಿಯೊಂದು ಜಿಲ್ಲೆಗಳು ಕೂಡ ತಮ್ಮದೇ ಆದ ಐತಿಹಾಸಿಕ ಮಹತ್ವ ಪಡೆದುಕೊಂಡಿವೆ.

ವಿಜಯನಗರ ಸಾಮ್ರಾಜ್ಯದ ಕಾಲದಲ್ಲಿದ್ದ ಹಂಪಿಯು 1986 ರಲ್ಲಿ, ಚಾಲುಕ್ಯರ ಮನೆತನ ನಿರ್ಮಿಸಿದ ಪಟ್ಟದಕಲ್ಲು 1987 ರಲ್ಲಿ, 2012 ರಲ್ಲಿ ಪಶ್ಚಿಮ ಘಟ್ಟವು ಯುನೆಸ್ಕೋ ಪಾರಂಪರಿಕ ಪಟ್ಟಿಗೆ ಸೇರಿರುವುದು ನಮ್ಮೆಲ್ಲರ ಹೆಮ್ಮೆಯ ಸಂಗತಿ. ಕನ್ನಡ ನಾಡು ನುಡಿಗಾಗಿ ಅಂದಿನಿಂದ ಇಂದಿನವರೆಗೂ ಅನೇಕ ಮಹನಿಯರು ಕನ್ನಡ ನಾಡಿನ ಸಂಸ್ಕೃತಿ ಸಂಪ್ರದಾಯಗಳ ಉಳಿವಿಗಾಗಿ, ಬೆಳವಣಿಗೆಗಾಗಿ ಶ್ರಮಿಸುತ್ತಾ ಬರುತ್ತಿದ್ದಾರೆ. ಹಾಗೆಯೆ ನಾವು ಕನ್ನಡ ನಾಡು ನುಡಿಗಾಗಿ ತ್ಯಾಗ, ಪ್ರೀತಿ, ಸಹನೆಯ ಮನೋಭಾವಗಳನ್ನು ಬೆಳೆಸಿಕೊಂಡು, ಉಳಿಸಿಕೊಂಡು ಮುಂದಿನ ಪೀಳಿಗೆಗೆ ಮಾದರಿಯಾಗಬೇಕಾದದ್ದು ನಮ್ಮೆಲ್ಲರ ಆದ್ಯ ಕರ್ತವ್ಯ.

ಅಷ್ಟೇ ಅಲ್ಲ ಕನ್ನಡ ನಾಡಿನ ಕಲೆ, ಸಂಸ್ಕೃತಿ, ಉಡುಗೆ ತೊಡುಗೆಗೆ ವಿದೇಶಗರು ಮಾರು ಹೋಗಿದ್ದಾರೆ. ಸ್ವಾತಂತ್ರ್ಯಕ್ಕಾಗಿ ತಮ್ಮ ಜೀವನವನ್ನೇ ಮುಡಿಪಾಗಿಟ್ಟ ಕೆಲ ಮಹಾನ್ ವೀರರು, ವೀರ ವನಿತೆಯರು ಹುಟ್ಟಿದ ನಾಡಲ್ಲಿ ಬಾಳುತ್ತಿರುವ, ಬೆಳೆಯುತ್ತಿರುವ ನಾವುಗಳೇ ಧನ್ಯರು. ಅಲ್ಲದೆ ಕರ್ನಾಟಕದಲ್ಲಿ ಅಪಾರವಾದ ಬೆಲೆ ಬಾಳುವ ಖನಿಜ ಸಂಪತ್ತು ಇದ್ದು, ಇದನ್ನು ಕೆಲ ಪ್ರಭಾವಿ ಜನರು ಹಾಳು ಮಾಡದಂತೆ

ಕಾಪಾಡಬೇಕಿದೆ. ಉಳಿಸಲು ನಮ್ಮ ನಾಡಿನ ಜನ ಕೈ ಕಟ್ಟಿ ನಿಲ್ಲಬೇಕಿದೆ. ಹಾಗೆಯೇ ನಾವೆಲ್ಲರೂ ಕನ್ನಡ ಮಾತೆಯ ಮಡಿಲಲ್ಲಿ ಕನ್ನಡಿಗರಾಗಿ ಬಾಳೋಣ.

ಈ ಕನ್ನಡ ರಾಜ್ಯೋತ್ಸವದ ದಿನ ಕನ್ನಡಕ್ಕೆ ನಾವೇನು ಕೊಡುಗೆ ಕೊಟ್ಟಿದ್ದೇವೆ ಎಂಬ ಮಾತಿಗಿಂತಲೂ ಹೆಚ್ಚಾಗಿ ಚರ್ಚೆ ಆಗುವುದು ಮಾತ್ರ. "ಕನ್ನಡವನ್ನು ಉಳಿಸಿ, ಬೆಳೆಸಿ ಕನ್ನಡಕ್ಕಾಗಿ ಹೋರಾಡಿ" ಎಂಬ ನುಡಿ ಮುತ್ತುಗಳು ಭಾಷಾ ಪ್ರೇಮದೊಂದಿಗೆ ಈ ಘೋಷಣೆಗಳು ಮುಗಿಲು ಮುಟ್ಟುವಂತಿದ್ದರೂ ಈ ದಿನದಂದು ಕಿಂಚಿತ್ತೂ ಆದರೂ ಸೇವೆ ನಾವು ಮಾಡಿದ್ದೇವೆಯೇ ಎಂಬುದನ್ನು ಒಂದೆಡೆ ಕುಳಿತು ಆಲೋಚಿಸಬೇಕಾಗುತ್ತದೆ. ಆದರೆ ಈ ಯೋಚನೆ ಮಾತ್ರ ಪ್ರಚಾರ ಪ್ರಿಯವಾಗಬಾರದು ಮತ್ತು ಮಾಧ್ಯಗಳಲ್ಲಿ ತಮ್ಮ ಭಾವಚಿತ್ರ ಬರುತ್ತವೆಂಬ ದಾವಂತ ಆಗಬಾರದು. ಒಟ್ಟಾರೆಯಾಗಿ "ಹೆಸರಾಯಿತು ಕರ್ನಾಟಕ – ಉಸಿರಾಯಿತು ಕನ್ನಡ" ಎಂಬ ಮಾತಿನಂತೆ ಇರಲಿ ಎಂಬುದು ಕೋಟ್ಯಂತರ ಕನ್ನಡಿಗರ ಆಶಯ.

**ರೇಣುಕಾ ಡಿ ಮತ್ತು ಪ್ರೇಮ ಬಿ., ಪ್ರಶಿಕ್ಷಣಾರ್ಥಿಗಳು**

## ಶಿವಶರಣೆ ಅಕ್ಕಮಹಾದೇವಿ ಅನುಭವ ಮಂಟಪದಲ್ಲಿ ಇತರ ಶರಣರ ಜೊತೆಗೆ ಕೈಗೊಂಡ ಸಂಭಾಷಣೆಯಲ್ಲಿನ ವೈಶಿಷ್ಟ್ಯ



ಒಮ್ಮೆ ಅನುಭವ ಮಂಟಪದಲ್ಲಿ ಚರ್ಚೆ ನಡೆಯುತ್ತಿರುವಾಗ ಮಹಾದೇವಿಯ ಆಗಮನವಾಗುತ್ತದೆ. ಆಗ ಮಡಿವಾಳ ಮಾಚಿದೇವರು ಎದ್ದು ನಿಂತು ಬುದ್ಧಿ ಉಡುತಡಿಯ ಮಹಾದೇವಿ ಅಕ್ಕನವರು ಆಗಮಿಸುತ್ತಿದ್ದಾರೆ ಎಂದು ಹೇಳುತ್ತಾರೆ. ಆಗ ಬಸವಣ್ಣನವರು ಮಾಚಿದೇವರೇ ಮಹಾದೇವಿಯವರನ್ನು ಮರ್ಯಾದೆಯಿಂದ ಕರೆ ತನ್ನಿ ಎಂದು ಹೇಳಲು ಮಾಚಿದೇವರು ಆಕೆಗೆ ನಡೆ ಮುಡಿಯನ್ನು ಹಾಸುತ್ತಾರೆ. ಆಗ ಮಹಾದೇವಿಯು ಮಡಿಯನ್ನು ಸರಿಸಿ ಒಳಗೆ ಬರುತ್ತಾಳೆ. ಅಲ್ಲಿಂದ ಮುಂದೆ ಅಲ್ಲಮಪ್ರಭುದೇವರು ಮತ್ತು ಅಕ್ಕಮಹಾದೇವಿಯ ನಡುವೆ ಈ ರೀತಿ ಸಂಭಾಷಣೆ ನಡೆಯುತ್ತದೆ.

**ಅಕ್ಕ :** ಪ್ರಭುದೇವರ ಶ್ರೀ ಚರಣಗಳಿಗೆ ಶರಣು ಶರಣಾರ್ಥಿ,

**ಅಲ್ಲಮ :** ನಿಲ್ಲು ತುಂಬು ಯೌವನದ ಸತಿ ನೀನು ಇತ್ತಲೇಕೆ ಬಂದೆಯವ್ವ. ಸತಿ ಎಂದರೆ ಮುನಿಯುವರು ನಮ್ಮ ಶರಣರು. ನಿನ್ನ ಪತಿಯ ಹೆಸರ ಹೇಳಿದರೆ ಬಂದು ಕುಳ್ಳಿರು ಅಲ್ಲವಾದರೆ ತೆರಳು ತಾಯೆ. ನಮ್ಮ ಶರಣರ ಸಂಘ ಸುಖದಲಿ ಸನ್ನಿಹಿತವ ಬಯಸುವೆಯಾದರೆ ನಿನ್ನ ಪತಿಯ ಹೆಸರ ಹೇಳಾ, ಎಲೆ ಅವ್ವಾ ಅಲ್ಲವಾದರೆ ನಿನಗೆ ಇಲ್ಲಿ ಸ್ಥಳವಿಲ್ಲ.

**ಅಕ್ಕ :** ಹರನೇ ಗಂಡನಾಗಬೇಕೆಂದು ಅನಂತ ಕಾಲ ತಪಿಸಿದೆ ನೋಡಾ! ಎನ್ನ ಜನ್ಮ ಜನ್ಮಾಂತರದ ಬಯಕೆ ಆ ಶಿವನೇ ಗಂಡನಾಗಬೇಕೆಂಬುದು, ಅದು ಈ ಜನ್ಮದಲ್ಲಿ ಸಿದ್ದಿಸಿದೆ. ಗುರು ನನ್ನನ್ನು ಚನ್ನಮಲ್ಲಿಕಾರ್ಜುನನಿಗೆ

ವಿವಾಹ ಮಾಡಿ ಕೊಟ್ಟಿದ್ದಾನೆ. ಗುರುವೇ ತೆತ್ತಿಗನಾದ, ಲಿಂಗವೇ ಮದುವಣಿಗನಾದ, ಆನು ಮದುವಣಗಿತ್ತಿಯಾದೆನು. ಈ ಭುವನವೆಲ್ಲವರಿಯಲು ಅಸಂಖ್ಯಾತರೆನ್ನ ತಾಯಿ ತಂದೆಗಳು, ಕೊಟ್ಟರು ಪ್ರಭುವಿನ ಮನೆಗೆ ಸಾದೃಶ್ಯವಪ್ಪ ವರನನ್ನು ನೋಡಿ, ಇದು ಕಾರಣ ಚೆನ್ನಮಲ್ಲಿಕಾರ್ಜುನನೇ ಗಂಡನೆನಗೆ ಮಿಕ್ಕಿನ ಲೋಕದ ಗಂಡರೆನಗೆ ಸಂಬಂಧ ವಿಲ್ಲವಯ್ಯಾ ಪ್ರಭುವೇ.

**ಅಲ್ಲಮ :** ಈ ಮಾತಿನ ಚಮತ್ಕಾರವನ್ನು ನಮ್ಮ ಶರಣರು ಮೆಚ್ಚಲಾರರು ಮಹಾದೇವಿ. ನಿನ್ನ ಚರಿತ್ರೆಯನ್ನು ಲೋಕ ತಿಳಿಯದೆಂದು ಭಾವಿಸಬೇಡ. ಲಗ್ನವಾದ ಕೌಶಿಕನ ಮೇಲೆ ತಪ್ಪನ್ನು ಹೊರೆಸಿ ಅರಮನೆಯನ್ನು ಬಿಟ್ಟು ನಿರ್ವಾಣ ಶರೀರಿಯಾಗಿ ಹೊರಟು ಬಂದಿರುವೆ ಎಂಬ ಮಾತು ನಿಜವೇ? ಪತಿಯ ಮೇಲೆ ತಪ್ಪನ್ನು ಹೊರಿಸಿ ಬರುವ ಸತೀಧರ್ಮವನ್ನು ಈ ನಮ್ಮ ಶರಣರು ಮೆಚ್ಚಲಾರರು.

**ಅಕ್ಕ :** ನನ್ನ ಮದುವೆಯ ಕತೆಯನ್ನು ಪ್ರಪಂಚ ಹೇಗಾದರೂ ತಿಳಿದು ಕೊಂಡಿರಲಿ. ನಾನು ಮೊದಲಿನಿಂದಲೂ ಚನ್ನಮಲ್ಲಿಕಾರ್ಜುನನಿಗೆ ಮೀಸಲು ಹೆಣ್ಣು. ಸಾವ ಕೆಡುವ ಗಂಡಂದಿರನೆಂದೂ ಬಯಸಿದವಳಲ್ಲ. ಸೀಮೆ ಇಲ್ಲದ ನಿಸ್ಸೀಮ ಚಲುವನಿಗೆ ಮಾತ್ರ ಒಲಿದವಳು. ನನ್ನ ಜೀವನದಲ್ಲಿ ಕೌಶಿಕನ ಪ್ರಸಂಗ ಒಂದು ದೈವ ಕೃಪೆಯಂತೆ ಬಂದಿತಷ್ಟೇ. ಸ್ತ್ರೀಯ ಸೌಂದರ್ಯದ ವ್ಯರ್ಥ ವ್ಯಾಮೋಹವನ್ನು ಬಿಡಿಸಲು ದಿಗಂಬರಳಾಗಿ ಅರಮನೆಯನ್ನು ತ್ಯಜಿಸಿ ಬಂದೆ. ಸೌಂದರ್ಯದ ಹಂಗನ್ನು ಹರಿದೊಗೆದು ಬಂದಂತಹವಳು.

**ಅಲ್ಲಮ :** ನಿನ್ನ ದೇಹದ ಮೋಹ ನಿನಗಿನ್ನು ಹೋಗಿಲ್ಲ, ನಿನ್ನ ಸೌಂದರ್ಯದ ಮೋಹ ನಿನಗಿನ್ನೂ ಉಳಿದಿದೆಯಲ್ಲವೇ?

**ಅಕ್ಕ :** ಇಲ್ಲ, ಆ ಭಾವ ನನಗೆ ಎಳ್ಳಷ್ಟೂ ಉಳಿದಿಲ್ಲ, ಕಾಯ ಕರ್ರನೆ ಕಂದಿದರೇನಯ್ಯ? ಕಾಯ ಮಿರ್ರನೆ ಮಿಂಚಿದರೇನಯ್ಯ? ಅಂತರಂಗ ಶುದ್ಧವಾದ ಬಳಿಕ ಚನ್ನಮಲ್ಲಿಕಾರ್ಜುನನಿಗೆ ಒಲಿದ ಅಂಗವು ಹೇಗಿದ್ದರೇನಯ್ಯ ಪ್ರಭುವೇ?

**ಅಲ್ಲಮ :** ಇದು ಬರಿಯ ಆಡಂಬರದ ಮಾತು, ಮಾತಿನಂತೆ ನಡೆ ಇಲ್ಲದವರನ್ನು ಗುಹೇಶ್ವರ ಲಿಂಗ ಮೆಚ್ಚುವವನಲ್ಲ. ಅಂತರಂಗದ ನಾಚಿಕೆ ಬಹಿರಂಗದಲ್ಲಿ ತಲೆದೋರುತ್ತಿದೆ. ಸೀರೆಯನ್ನಳಿದು ಕೂದಲನ್ನೇಕೆ ಮರೆಮಾಡಿ ಕೊಳ್ಳಬೇಕಾಗಿತ್ತು, ಈ ವರ್ತನೆ ಒಪ್ಪವಲ್ಲ ಗುಹೇಶ್ವರ ಲಿಂಗಕ್ಕೆ.

**ಅಕ್ಕ :** ನಿಜ. ಒಂದರ ಹಂಗನ್ನು ಬಿಟ್ಟು, ಇನ್ನೊಂದರ ಹಂಗನ್ನು ನಾನು ಹೊಂದಿದ್ದೇನೆಂದು ನೀವು ಹೇಳುವ ಮಾತು ನಿಜ. ಆದರೆ ಅದು ನನಗಾಗಿ ಅಲ್ಲ, ನಿಮಗಾಗಿ ಅಂದರೆ ಜನರ ಹಂಗಿಗಾಗಿ ಇದನ್ನು ಅವಲಂಬಿಸಿದ್ದೇನೆ. ಫಲ ಒಳಗೆ ಪಕ್ವವಾದಲ್ಲದೆ ಹೊರಗಣ ಸಿಪ್ಪೆ ಒಪ್ಪಗೆಡದು. ಕಾಮನ ಮುದ್ರೆಯ ಕಂಡು ನಿಮಗೆ ನೋವಾದಿತೆಂದು ಆ ಭಾವದಿಂದ ಮುಚ್ಚಿದೆ. ಇದಕ್ಕೆ ನೋವೇಕೆ ಕಾಡದಿರಣ್ಣ ಚನ್ನಮಲ್ಲಿಕಾರ್ಜುನನ ದೇವರ ದೇವನ ಒಳಗಾದವಳ.

**ಅಲ್ಲಮ :** ಏನೂ! ಫಲ ಪಕ್ವವಾದಲ್ಲದೆ ಹೊರಗಣ ಸಿಪ್ಪೆ ಒಪ್ಪಗೆಡದು ಎಂದೆಯಲ್ಲವೆ ನಾನು ಹೇಳುತ್ತೇನೆ ಕೇಳು, ಸಿಪ್ಪೆ ಒಪ್ಪಗೆಟ್ಟಾಗ ಹಣ್ಣಿನ ರಸ ಕೊಳಕಾಗುತ್ತದೆ ಅದನ್ನಾದರೂ ಮೆಚ್ಚುವುದು ಹೇಗೆ?

**ಅಕ್ಕ :** ಆ ಹಣ್ಣನ್ನು ನಾನು ಹಾಗೇ ಇಟ್ಟಿಲ್ಲ ಪ್ರಭುವೇ, ಎಂದೋ ಚನ್ನಮಲ್ಲಿಕಾರ್ಜುನನಿಗೆ ಸಮರ್ಪಿಸಿ ಬಿಟ್ಟಿದ್ದೇನೆ. ಅರಿಷಡ್ವರ್ಗಗಳನ್ನಳಿದು ನನ್ನ ದೇಹವನ್ನು ವ್ಯಾಪಿಸಿರುವ ಸಚ್ಚಿದಾನಂದಾತ್ಮಕವಾದ ರಸ ಅದು.

ಸಿಪ್ಪೆ ಒಪ್ಪಗೆಟ್ಟರು ಕೊಳೆಯಲಾರದು, ನನ್ನ ಒಳ ಹೊರೆಗೆಲ್ಲವ ನಳಿದು ನನ್ನತನ ಒಂದೂ ಇಲ್ಲವೆಂದು ಎಂದೆಂದೂ ಅಳಿಯದ ಅಮರ ಪವಿತ್ರತೆಯನ್ನು ತಂದು ಕೊಟ್ಟಿದೆ ಪ್ರಭುವೆ.

**ಅಲ್ಲಮ :** ಈ ಬಾಹ್ಯ ಬ್ರಹ್ಮದ ಬೆಡಗನ್ನು ನಾವು ಮೆಚ್ಚುವವರಲ್ಲ. ನಾ ಸತ್ತೆನೆಂದು ಹೆಣ ಕೂಗಿದುದುಂಟೆ? ಬೈಚಿಟ್ಟ ಬಯಕೆ ಕರೆದುದುಂಟೆ? ಹೆಪ್ಪಿಟ್ಟ ಹಾಲು ಸಿಹಿಯಪ್ಪುದೇ? ಈ ಮಾತು ಒಪ್ಪವಲ್ಲ ಗುಹೇಶ್ವರ ಲಿಂಗದಲ್ಲಿ.

**ಅಕ್ಕ :** ಸತ್ತ ಹೆಣ ಕೂಗಿದುದುಂಟು. ಮರೆತು ಒರಗಿ ಕನಸು ಕಂಡು ಅದನ್ನು ಹೇಳುವಲ್ಲಿ ಸತ್ತ ಹೆಣ ಎದ್ದಂತೆ ಆಯಿತು. ಹೆಪ್ಪಿಟ್ಟ ಹಾಲು ಗಟ್ಟಿ ತುಪ್ಪವಾಗಿ ಸಿಹಿಯಾಗಿತ್ತು. ಇದಕ್ಕೆ ತಪ್ಪು ಸಾಧಿಸಲೇಕೆ ಪ್ರಭುವೇ.

**ಅಲ್ಲಮ :** ಅದೂ ಹೋಗಲಿ, ಅರಿಷಡ್ವರ್ಗಗಳಿಂದಲೇ ತುಂಬಿರುವ ಈ ಶರೀರದಲ್ಲಿದ್ದು ಅದನ್ನು ದಾಟಿದ್ದೇನೆ ಎಂದರೆ ಅದನ್ನಾದರೂ ನಂಬುವುದು ಹೇಗೆ?

**ಅಕ್ಕ :** ಕಾಮನ ಗೆದ್ದ ಠಾವನ್ನು ಹೇಳಬೇಕೆ ಪ್ರಭುವೇ? ಕಾಮವನ್ನು ಗೆಲ್ಲುವುದಕ್ಕೆ ಆ ಕಾಮ ನನ್ನ ಮನಸ್ಸಿನಲ್ಲಿ ಎಂದೂ ಹುಟ್ಟಿಯೇ ಇಲ್ಲ. ಕೇಳಿ ಅಂಗದ ಭಂಗವ ಲಿಂಗ ಸುಖದಿಂದ ಗೆಲ್ಲಿದೆ. ಜೀವದ ಭಂಗವ ಶಿವಾನುಭವದಿಂದ ಗೆಲ್ಲಿದೆ. ಕರಗದ ಕತ್ತಲೆಯ ಬೆಳಗನ್ನುಟ್ಟು ಗೆಲ್ಲಿದೆ. ಜವ್ವನದ ಹೊರ ಮಿಂಚಿನಲ್ಲಿ ನಿಮ್ಮ ಕಣ್ಣಿಗೆ ಕಾಣುವ ಕಾಮನ ಸುಟ್ಟುರಿಯುವ ಭಸ್ಮವ ನೋಡಯ್ಯ. ಕಾಮನ ಕೊಂದು ಮನಸ್ಸಿಜನಾಗುಳಿದರೆ, ಮನಸಿಜನ ತಲೆ ಬರಹವ ತೊಡೆದೆನು. ಎನ್ನ ಮನಸ್ಸಿಜನ ಜನನಕ್ಕೆ ಅವಕಾಶವನ್ನೇ ಕಲ್ಪಿಸಿಕೊಟ್ಟಿಲ್ಲ. ಇದನ್ನು ತಮ್ಮಂತಹ ಕೆಲವರು ಮಾತ್ರವೇ ಅರ್ಥ ಮಾಡಿ ಕೊಳ್ಳಬಲ್ಲವರು ಪ್ರಭುವೇ.

**ಅಲ್ಲಮ :** ನೋಡಿದೆಯಾ ಬಸವಣ್ಣ, ಮಹಾದೇವಿಯ ಈ ನಿಲುವನ್ನು ಲೋಕಕ್ಕೆ ಪ್ರಕಟ ಮಾಡಬೇಕೆಂದೇ ನಾನು ಇಷ್ಟು ನಿಷ್ಠುರನಾದೆ. ತಾಯೇ ನಿನ್ನ ಜ್ಞಾನ ಘನ, ನಿನ್ನ ವಿರತಿ ಘನ, ನೀನು ವೈರಾಗ್ಯ ನಿಧಿ. ನಿನ್ನನ್ನು ಪಡೆದ ಜಗತ್ತು ಪಾವನ. ಮಾಯೆ ನಿನ್ನ ಮುಟ್ಟಲಿಲ್ಲ, ಮರಹು ನಿನ್ನ ಸೋಂಕಲಿಲ್ಲ, ಕಾಮ ನಿನ್ನ ಕೆಡಿಸಲಿಲ್ಲ, ಮಹಾದೇವಿ ಅಕ್ಕ ನೀನು ವಿಶ್ವ ಸ್ತ್ರೀ ಕುಲದ ಜ್ಯೋತಿ. ದಿಟ್ಟ ಹೆಜ್ಜೆ, ಧೀರ ನುಡಿಯ ತಾಯಿ ನೀನು, ವಿನಯ ವಿಶ್ವಾಸಗಳ ರತ್ನಗಣಿ ನೀನು, ತಾಯೇ ಮಹಾದೇವಿ ನಿನ್ನ ಸ್ತ್ರೀ ಪಾದಗಳಿಗೆ ನಮೋ ನಮೋ ಎಂದೆನು. (ಅಲ್ಲಮಪ್ರಭು ಕೈ ಮುಗಿಯುವರು)

**ಬಸವಣ್ಣ :** ಹೌದು ಪ್ರಭುವೇ, ಈಕೆ ನಮ್ಮೆಲ್ಲರ ಅಕ್ಕ. ನಮಗೆಲ್ಲರಿಗೂ ಗುರುವಾಗಬಲ್ಲ ಯೋಗ್ಯತೆಯುಳ್ಳವಳು. ಅಕ್ಕಮಹಾದೇವಿ ನಿನಗೆ ಶರಣು ಶರಣಾರ್ಥಿ. (ಬಸವಣ್ಣನವರು ಕೈಮುಗಿಯುವರು)

ಅಕ್ಕ : ತಾವು ಹಾಗೆಲ್ಲಾ ಹೇಳಬಾರದು, ನಿಮ್ಮೆಲ್ಲರ ಕರುಣೆಯ ಶಿಶು ನಾನು, ನಿಮ್ಮೆದುರಿನಲ್ಲಿ ಅತಿ ಚಿಕ್ಕವಳು.

**ಚನ್ನಬಸವಣ್ಣ :** ಇರಬಹುದು, ವಯಸ್ಸು ಅತಿ ಚಿಕ್ಕದೇ ಇರಬಹುದು. ಆದರೂ ನೀನು ಎಲ್ಲರಿಗೂ ಅಕ್ಕನಾಗಬಲ್ಲವಳು ತಾಯಿ. ಮಹಾದೇವಿ ಅಕ್ಕ ಹಿರಿತನ ಕೇವಲ ವಯಸ್ಸಿನಿಂದ ಮಾತ್ರವೇ ಬರುವುದಿಲ್ಲ. ಅಜ ಕಲ್ಪಕೋಟಿ ವರುಷದವರೆಲ್ಲರೂ ಹಿರಿಯರೇ? ಹುತ್ತೇರಿ ಬೆತ್ತ ಬೆಳೆದ ತಪಸ್ವಿಗಳೆಲ್ಲರೂ ಹಿರಿಯರೇ? ನಡು ಮುರಿದು, ತಲೆ ನಡುಗಿ, ಮತಿಗೆಟ್ಟು ಒಂದನಾಡ ಹೋಗಿ ಒಂಭತ್ತನಾಳುವ ಅಜ್ಞಾನಿಗಳೆಲ್ಲರೂ ಹಿರಿಯರೇ?; ಅನುವನರಿದು, ಘನವ ಬೆರೆಸಿ, ಹಿರಿದು ಕಿರಿದೆಂಬ ಭೇದವ ಮರೆತು ಕೂಡಲ ಚನ್ನಸಂಗಯ್ಯನಲ್ಲಿ ಬೆರೆಸಿ ಬೇರಿಲ್ಲದಿಪ್ಪ ಹಿರಿತನ ನಮ್ಮ ಮಹಾದೇವಿಯಕ್ಕಂಗಾಯಿತ್ತು.

**ಸಿದ್ದರಾಮ :** ಅಹುದಹುದು ಮತ್ತೇನು, ಮರಹಿಂಗೆ ಹಿರಿದು ಕಿರಿದುಂಟಲ್ಲದೆ, ಅರಿವಿಂಗೆ ಹಿರಿದು ಕಿರಿದುಂಟೆ ಹೇಳಯ್ಯ? ಜಾತಂಗೆ ಮರಣದ ಭಯ ಉಂಟಲ್ಲದೆ, ಅಜಾತಂಗೆ ಮರಣದ ಭಯವುಂಟೇ ಹೇಳಯ್ಯ? ಕಪಿಲಸಿದ್ಧ ಮಲ್ಲಿನಾಥನಲ್ಲಿ ಮಹಾದೇವಿಯಕ್ಕನ ನಿಲವಿಂಗೆ ಶರಣೆಂದು ಶುದ್ಧನಾದೆನು ಕಾಣಾ ಚನ್ನಬಸವಣ್ಣ.

**ಅಕ್ಕ :** ಭಕ್ತಿ ಬಂಡಾರಿ ಬಸವಣ್ಣನವರ ಶ್ರೀ ಚರಣಗಳಿಗೆ ಶರಣು ಶರಣಾರ್ಥಿ.

**ಬಸವಣ್ಣ :** ಶರಣು ತಾಯೇ ಶರಣು ಶರಣು.

**ಅಕ್ಕ :** ಜ್ಞಾನ ನಿಧಿ ಚನ್ನಬಸವಣ್ಣನವರ ಶ್ರೀ ಚರಣಗಳಿಗೆ ಶರಣು ಶರಣಾರ್ಥಿ.

**ಚನ್ನಬಸವಣ್ಣ :** ಶರಣು ತಾಯೇ ಶರಣು.

**ಅಕ್ಕ :** ಧರ್ಮಯೋಗಿ ಸಿದ್ಧರಾಮಣ್ಣನವರ ಶ್ರೀ ಚರಣಗಳಿಗೆ ಶರಣು ಶರಣಾರ್ಥಿ.

**ಸಿದ್ಧರಾಮ :** ಶರಣು ತಾಯೇ ಶರಣು.

**ಅಕ್ಕ :** ಎಲ್ಲಾ ಶರಣ ಶರಣೆಯರಿಗೂ ಶರಣು ಶರಣಾರ್ಥಿ.


**ಎಲ್ಲರೂ :** ಶರಣು ತಾಯೇ ಶರಣು ಶರಣು ಎಂದು ಎಲ್ಲಾ ಶರಣರು ನಮಸ್ಕರಿಸುವರು

ಆಗ ಬಸವಣ್ಣನವರು ಅಕ್ಕನನ್ನು ಅಂದಿನ ಅನುಭವಮಂಟಪದ ಗೋಷ್ಠಿಯಲ್ಲಿ ಪಾಲ್ಗೊಳ್ಳುವಂತೆ ಹೇಳುವರು. ಆಗ ಅಕ್ಕನು ಶರಣ ಶರಣೆಯರ ನಡುವಣ ಕುಳಿತು ಅಂದಿನ ಗೋಷ್ಠಿಯಲ್ಲಿ ಭಾಗವಹಿಸುವಳು.

ಹೀಗೆ ಅನುಭವ ಮಂಟಪದಲ್ಲಿ ಎಲ್ಲಾ ಶಿವಶರಣರ ಮನವನ್ನು ಗೆಲ್ಲುವ ಮೂಲಕ ಇಡೀ ಮನುಕುಲದ ಮಹಾ ಅಕ್ಕಳಾಗಿ ಮಹಾದೇವಿ ಪರಿಣಮಿಸುತ್ತಾರೆ.

**ಜಿ ಉಮಾದೇವಿ ಮತ್ತು ಶ್ವೇತಾ ಎಲ್., ಪ್ರಶಿಕ್ಷಣಾರ್ಥಿಗಳು**

# ಕೆ. ಪಿ. ಪೂರ್ಣಚಂದ್ರ ತೇಜಸ್ವಿ



ಕನ್ನಡದ ಪ್ರಮುಖ ಸಾಹಿತಿಗಳಲ್ಲೊಬ್ಬರು. ತೇಜಸ್ವಿ ಅವರು ರಾಷ್ಟ್ರಕವಿ ಕುವೆಂಪು ಅವರ ಪುತ್ರ ಹಾಗೂ ಕನ್ನಡ ನವ್ಯ ಸಾಹಿತ್ಯದ ಪ್ರಮುಖ ಲೇಖಕ ಹಾಗೂ ಸ್ವತಂತ್ರ ಪ್ರವೃತ್ತಿಯ ಬರಹಗಾರರು. ನವ್ಯ ಸಾಹಿತ್ಯದ ಕಾಲಘಟ್ಟದಲ್ಲಿ ಪ್ರಮುಖವಾಗಿ ಕೇಳಿ ಬಂದ ಹೆಸರು, ಅಬಚೂರಿನ ಪೋಸ್ಟಾಫೀಸು ಕಥಾ ಸಂಕಲನದ ಮೂಲಕ ಬಂಡಾಯ ಸಾಹಿತ್ಯವನ್ನು ಪ್ರಾರಂಭಿಸಿದರು. ತೇಜಸ್ವಿ ಆರಂಭದಲ್ಲಿ ಬೇರೊಂದು ಹೆಸರಿನಲ್ಲಿ ಕಾವ್ಯ ರಚನೆ ಮಾಡಿದ್ದರೂ, ನಂತರ ಕಥಾ ಸಾಹಿತ್ಯ, ಕಾದಂಬರಿ, ಲೇಖನಗಳ ಕಡೆ ಹೆಚ್ಚಿನ ಗಮನ ಹರಿಸಿದರು.

ತೇಜಸ್ವಿ ಅವರು ರಾಷ್ಟ್ರಕವಿ ಕುವೆಂಪು ಅವರ ಪುತ್ರ. ಅವರ ತಾಯಿ ಹೇಮಾವತಿ. ಇವರು 1938 ಸೆಪ್ಟೆಂಬರ್ 8 ರಂದು ಶಿವಮೊಗ್ಗ ಜಿಲ್ಲೆಯ ಕುಪ್ಪಳಿಯಲ್ಲಿ ಜನಿಸಿದರು. ಮೈಸೂರಿನ ಮಹಾರಾಜ ಕಾಲೇಜಿನಲ್ಲಿ ಪದವಿ ಪಡೆದ ನಂತರ, ಮೈಸೂರು ವಿಶ್ವವಿದ್ಯಾನಿಲಯದಿಂದ ಕನ್ನಡದಲ್ಲಿ ಎಂ.ಎ. ಪದವಿಯನ್ನು ಪಡೆದರು.

ಇವರ ಮೊದಲ ಕಥೆ ಲಿಂಗ ಬಂದ. ಈ ಕಥೆಯಿಂದ ಅವರು ರಾಜ್ಯೋತ್ಸವ ಪ್ರಶಸ್ತಿ ಪಡೆದರು. ಸ್ನಾತಕೊತ್ತರ ಪದವಿಯ ನಂತರ ಓರಗೆಯ ಇತರೆ ಬರಹಗಾರರಂತೆ ಅದ್ಯಾಪಕ ವೃತ್ತಿಯನ್ನು ಬಯಸದೆ ಮಲೆನಾಡಿನ ಮೂಡಿಗೆರೆಯಲ್ಲಿ ಕೃಷಿಯನ್ನು ಮಾಡುವ ಮಹತ್ವದ ನಿರ್ಧಾರವನ್ನು ಮಾಡಿದರು. ಕೃಷಿಯ ಜತೆಜತೆಗೆ ಅಗಾದವಾದ ಸಾಹಿತ್ಯದ ಕೃಷಿ ಮಾಡಿದರು. ಸಾಹಿತ್ಯದ ಜೊತೆಗೆ ಇವರಿಗೆ ವ್ಯವಸಾಯ, ಛಾಯಾಚಿತ್ರಗ್ರಹಣ ಹಾಗು ಬೇಟೆಯಲ್ಲಿ ಆಸಕ್ತಿಯಿತ್ತು. ಇವರು ರೈತ ಚಳುವಳಿಗಳಲ್ಲಿ ತಮ್ಮನ್ನು ತೊಡಗಿಸಿಕೊಂಡಿದ್ದರು.

ಇವರ ಪತ್ನಿ ರಾಜೇಶ್ವರಿ. ಇವರಿಗೆ ಇಬ್ಬರು ಹೆಣ್ಣು ಮಕ್ಕಳು, ಸುಸ್ಮಿತಾ ಹಾಗು ಈಶಾನ್ಯ. ಇವರಿಬ್ಬರೂ ಸಾಫ್ಟ್ ವೇರ್ ಪರಿಣತರು.

ಕವಿತೆ, ನಾಟಕ, ಕಾದಂಬರಿ, ಕತೆ ಮೊದಲಾದ ಸಾಹಿತ್ಯಕ ಪ್ರಕಾರಗಳಲ್ಲಿ ಬರೆದಿದ್ದಾರೆ. ಹಲವಾರು ಆಂಗ್ಲ ಕೃತಿಗಳನ್ನು ಕನ್ನಡಕ್ಕೆ ಅನುವಾದ ಮಾಡಿದ್ದಾರೆ. ನಾಲ್ಕು ದಶಕಗಳ ಕಾಲ ಕಥೆ, ಕಾದಂಬರಿಗಳ ಮೂಲಕ, ವಿಜ್ಞಾನದ ವಿಸ್ಮಯಗಳ ಮೂಲಕ ತೇಜಸ್ವಿಯವರು ಕನ್ನಡ ಸಾಹಿತ್ಯಕ್ಕೆ ಅನೇಕ ಮಹತ್ವಪೂರ್ಣ ಕೃತಿಗಳನ್ನು ನೀಡಿದ್ದಾರೆ. ಇದರಲ್ಲಿ ಕೀಟಗಳು, ಪ್ರಾಣಿಗಳು, ನದಿ–ಕೊಳ್ಳಗಳು, ಕಾಡುಗಳು, ಬೇಟೆಯ ವೈವಿಧ್ಯತೆಯ ಬಗ್ಗೆ ಹಲವಾರು ಕೃತಿಗಳನ್ನು ನೀಡಿದ್ದಾರೆ. "ಕರ್ವಾಲೋ" ಕೃತಿಯಲ್ಲಿ, ಜೀವವಿಕಾಸ ಪಥದಲ್ಲಿ ಎಲ್ಲವೂ ಬದಲಾಗುತ್ತ ರೂಪಾಂತರ ಹೊಂದುತ್ತಾ ಬಂದಿರುವಾಗ ಹಾರುವ ಓತಿಯ ಕುರಿತು ಕುತೂಹಲ ಹುಟ್ಟಿಸುವ ಸನ್ನಿವೇಶಗಳು ಮೂಡಿ ಬಂದಿವೆ.

ಅವರೊಬ್ಬ ಸಮಾಜವಾದಿ ಚಿಂತಕ. ಸಮಾಜದಲ್ಲಿ ತಾಂಡವವಾಡುತ್ತಿದ್ದ ಬಡತನ, ಅಸಮಾನತೆ, ಶೋಷಣೆಯ ಬಗ್ಗೆ ಸಾಹಿತ್ಯದ ಮೂಲಕ ಸದಾ ಧ್ವನಿ ಎತ್ತುತ್ತಿದ್ದ ಅದ್ಬುತ ಲೇಖಕ. ಇಡೀ ಬದುಕಿನ ತುಂಬಾ ರಚಿಸಿದ ಸಾಹಿತ್ಯದಲ್ಲಿ ಕಲೆ, ಸಂಸ್ಕೃತಿ, ಪರಿಸರ ಮತ್ತು ಕೃಷಿಯ ವಿಷಯಗಳನ್ನಷ್ಟೇ ಆಧಾರವಾಗಿಟ್ಟುಕೊಂಡು ಹತ್ತಾರು ಕೃತಿಗಳನ್ನು ರಚಿಸಿದ ಮಹಾನ್ ಲೇಖಕ ಕೆ.ಪಿ. ಪೂರ್ಣಚಂದ್ರ ತೇಜಸ್ವಿ ಅವರು ತುಂಬಾ ಸರಳ ವ್ಯಕ್ತಿತ್ವ ನೇರ ನಡೆ–ನುಡಿಯವರು. ಪಟ್ಟಣ ಜೀವನವನ್ನು ಅಷ್ಟೊಂದು ಇಷ್ಟ ಪಡದೇಸದಾ ಪರಿಸರದೊಟ್ಟಿಗೆ ಬದುಕು ಕಳೆದ ಪರಿಸರ ಪ್ರೇಮಿ. ಬೆಂಗಳೂರಿನಲ್ಲಿ ನೆಲೆಸಲು ಅಂದಿನ ಸರ್ಕಾರಗಳು ಎಲ್ಲ ಅವಕಾಶ

ಕೊಟ್ಟರೂ ತಮ್ಮ ಕಡೆಯ ದಿನಗಳವರೆಗೂ ಮಲೆನಾಡಿನ ಮೂಡಿಗೆರೆಯ ಯಾವುದೋ ಒಂದು ಪುಟ್ಟ ಮನೆಯಲ್ಲಿ ಬದುಕನ್ನು ಸವೆಸಿದ ತೇಜಸ್ವಿಯವರು ಬೇರೆ ಸಾಹಿತಿಗಳಿಗಿಂತ ಬಹಳ ಭಿನ್ನವಾಗಿ ಕಾಣಿಸುತ್ತಾರೆ.

ಯಾವುದೇ ಕಾಲ್ಪನಿಕ ವಸ್ತು ವಿಷಯವನ್ನು ತಮ್ಮ ಕೃತಿಗಳಲ್ಲಿ ಪಾತ್ರಗಳನ್ನು ಆಯ್ಕೆ ಮಾಡಿಕೊಳ್ಳದೆ ಅವರ ಸುತ್ತಮುತ್ತಲಿನ ದೈನಂದಿನ ಬದುಕಿನಲ್ಲಿ ನೋಡಿದ, ಕೇಳಿದ ವಿಚಾರಗಳನ್ನು ಸಾಹಿತ್ಯದ ಮುಖೇನ ಕುತೂಹಲ ಕೆರಳಿಸುವ ರೀತಿಯಲ್ಲಿ ಕಾದಂಬರಿಗಳನ್ನು ಸೃಷ್ಟಿಸಿ ಕನ್ನಡ ಸಾಹಿತ್ಯ ಕ್ಷೇತ್ರವನ್ನು ಶ್ರೀಮಂತಗೊಳಿಸಿದ ಕೀರ್ತಿ ಇವರಿಗೂ ಸಹ ಸಲ್ಲಬೇಕು. ಚಿದಂಬರ ರಹಸ್ಯ, ಜುಗಾರಿ ಕ್ರಾಸ್ ಪತ್ತೆದಾರಿ ಕಾದಂಬರಿಗಳು ಸಾಹಿತ್ಯ ಪ್ರೇಮಿಗಳ ಮನದಲ್ಲಿ ಇಂದಿಗೂ ಅಚ್ಚಳಿಯದೆ ಉಳಿದಿವೆ. ಅಬಚೂರಿನ ಪೋಸ್ಟಾಫೀಸು, ತಬರನ ಕಥೆ ಚಲನಚಿತ್ರಗಳಾಗಿ ರಾಷ್ಟ್ರ ಪ್ರಶಸ್ತಿ ಗಳಿಸಿವೆ.

ಇವರ ಮತ್ತೊಂದು ಕಾದಂಬರಿ ಕಿರಗೂರಿನ ಗಯ್ಯಾಳಿಗಳು ಬಿಡುಗಡೆಗೊಂಡು ಪ್ರೇಕ್ಷಕರ ಮೆಚ್ಚುಗೆ ಗಳಿಸಿದೆ. ರಾಷ್ಟ್ರಕವಿಯಾಗಿದ್ದ ಕುವೆಂಪು ಅವರ ಮುದ್ದಿನ ಮಗನಾಗಿದ್ದ ತೇಜಸ್ವಿ ಅವರದು ಸದಾ ನಿರ್ಲಿಪ್ತ ಭಾವ. ಅವರಿಗೆ ವ್ಯವಸಾಯದ ಚಟುವಟಿಕೆಯಲ್ಲಿ ಸಾಹಿತ್ಯದ ಮೇಲಿದ್ದಷ್ಟೆ ತೀವ್ರ ಆಸಕ್ತಿ ಮತ್ತು ಪ್ರೀತಿ ಇತ್ತು. ಮೂಡಿಗೆರೆಯಲ್ಲಿದ್ದ ಅವರ ಒಡೆತನದ ಕಾಫಿ ತೋಟದಲ್ಲಿ ಕೆಲಸದಾಳುಗಳೊಟ್ಟಿಗೆ ತೇಜಸ್ವಿಯವರು ಸಹ ಕೂಲಿಕಾರರಂತೆ ಕೆಲಸ ಮಾಡುತ್ತಿದ್ದರು.

ಪೂರ್ಣಚಂದ್ರ ತೇಜಸ್ವಿಯವರ ಅಬಚೂರಿನ ಪೋಸ್ಟಾಫೀಸು, ತಬರನ ಕಥೆ, ಕುಬಿ ಮತ್ತು ಇಯಾಲ ಹಾಗೂ ಕಿರಗೂರಿನ ಗಯ್ಯಾಳಿಗಳು ಕೃತಿಗಳು ಚಲನಚಿತ್ರಗಳಾಗಿವೆ.

1. ನನ್ನ ತೇಜಸ್ವಿ (ಲೇ: ರಾಜೇಶ್ವರಿ ತೇಜಸ್ವಿ)
2. ತೇಜಸ್ವಿ ನಾನು ಕಂಡಷ್ಟು (ಲೇ: ಧನಂಜಯ ಜೀವಾಳ ಬಿ. ಕೆ.)
3. ಮತ್ತೆ ಮತ್ತೆ ತೇಜಸ್ವಿ (ಸಿ.ಡಿ.) ಇವು ತೇಜಸ್ವಿಯವರನ್ನು ಕುರಿತು ಬರೆದ ಕೃತಿಗಳು.

ಕೃಷಿಗೆ ಸಂಬಂಧಪಟ್ಟಂತೆ ಏನಾದರೂ ಸಮಸ್ಯೆಗಳು ಬಂದಾಗ ಅವರೇ ಮುಂಚೂಣಿಯಲ್ಲಿ ನಿಂತು ರೈತ ಚಳುವಳಿ ಮುಖಾಂತರ ಹೋರಾಟ ಮಾಡುತ್ತಿದ್ದರು. ಇವರು ಅದ್ಭುತ ಛಾಯಾಚಿತ್ರಗಾರ. ದಿನಗಟ್ಟಲೇ ಊಟ-ತಿಂಡಿ ಬಿಟ್ಟು ಕಾಡಿನಲ್ಲಿ ಪ್ರಾಣಿ-ಪಕ್ಷಿಗಳ ಫೋಟೋ ತೆಗೆಯುತ್ತಿದ್ದರು. ಇವರಿಗೆ ಬೆಟ್ಟ-ಗುಡ್ಡವೇ ಪ್ರಪಂಚ. ಮಲೆನಾಡಿನ ಸೌಂದರ್ಯವೇ ಇವರ ಬರವಣಿಗೆಗೆ ಸ್ಪೂರ್ತಿ. ಕ್ರಿಮಿ-ಕೀಟ, ಪ್ರಾಣಿ-ಪಕ್ಷಿ ಇವರಿಗೆ ಬರವಣಿಗೆಯಲ್ಲಿ ಅತ್ಯಂತ ಆಸಕ್ತಿ ಉಂಟುಮಾಡುತ್ತಿದ್ದವು.

ಮಿಂಚುಳ್ಳಿ, ಹಕ್ಕಿಪುಕ್ಕ, ಫ್ಲೈಯಿಂಗ್ ಏರೋಪ್ಲೇನ್ ಮತ್ತು ಇತರೆ ಕೃತಿಗಳು ತೇಜಸ್ವಿಯವರಿಗಿದ್ದ ಪರಿಸರ ಮತ್ತು ವಿಜ್ಞಾನದ ಬಗ್ಗೆ ಅಗಾಧ ಜ್ಞಾನವನ್ನು ತಿಳಿಸುತ್ತವೆ. ಇನ್ನು ಇವರ ಕೌಟುಂಬಿಕ ಜೀವನ ಅತ್ಯಂತ ಸರಳ. ಇಬ್ಬರು ಪುತ್ರಿಯರು ಮತ್ತು ಮಡದಿಯೊಂದಿಗೆ ಒಂದು ಚಿಕ್ಕ ಸಂಸಾರ ಇವರದ್ದಾಗಿತ್ತು. ಅವರ ಸರಳ ವ್ಯಕ್ತಿತ್ವದ ಜೀವನ ನಮ್ಮೆಲ್ಲರಿಗೂ ಜೀವಂತ ಆದರ್ಶ. ಬರವಣಿಗೆಗಿಂತ ಬರೀ ಪ್ರಶಸ್ತಿ ಪುರಸ್ಕಾರಕ್ಕೆ ಹಾತೊರೆಯುವ ಇಂದಿನ ಅದೆಷ್ಟೋ ಸಾಹಿತಿಗಳಿಗೆ ಇವರ ಬದುಕು ದೊಡ್ಡ ರೋಲ್ ಮಾಡೆಲ್ ಎಂದು ಹೇಳಿದರೆ ತಪ್ಪಾಗಲಾರದು.

ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ, ಪಂಪ ಪ್ರಶಸ್ತಿ, ರಾಜ್ಯ ಪ್ರಶಸ್ತಿ ಹೀಗೆ ಯಾವ ಲಾಭಿಯನ್ನು ಮಾಡದೇ ಹಲವಾರು ಪ್ರಶಸ್ತಿಗಳನ್ನು ತೇಜಸ್ವಿಯವರು ಗಳಿಸಿದರೂ ಸಹ ಅದರ ಬಗ್ಗೆ ಎಂದಿಗೂ ಅವರು

ಸಡಗರ ಪಡಲಿಲ್ಲ. ಹಮ್ಮು–ಬಿಮ್ಮು ತೋರಿಸಲಿಲ್ಲ. ಅಲ್ಲಿಯೂ ಸಹ ನಿರ್ಲಿಪ್ತ ಭಾವ. ಅರ್ಥಪೂರ್ಣ ಬದುಕನ್ನು ಕಳೆದ ಮಹಾನ್ ಕವಿ ಏಪ್ರಿಲ್ 5, 2007 ರಲ್ಲಿ ತಮ್ಮ 69ನೆ ವಯಸ್ಸಿನಲ್ಲಿ ಹೃದಯಾಘಾತದಿಂದ ಇಹಲೋಕ ತ್ಯಜಿಸಿ ತಮ್ಮ ಕೃತಿಗಳನ್ನು ಸಾಹಿತ್ಯ ಪ್ರೇಮಿಗಳಲ್ಲಿ ಜೀವಂತವಾಗಿ ಉಳಿಸಿ ಹೋಗಿರುವ ಮಹಾನ್ ಚೇತನ ಕೆ.ಪಿ. ಪೂರ್ಣಚಂದ್ರ ತೇಜಸ್ವಿ.

ಹಿರಿಯರಾದ ಇವರು ಈಗ ನಮ್ಮೊಂದಿಗಿಲ್ಲ, ಆದರೆ ಅವರ ಸಾಹಿತ್ಯದ ಕೊಡುಗೆ ಯಾವಾಗಲೂ ಸದಾ ನಮ್ಮೊಂದಿಗಿರುತ್ತದೆ. ಅದನ್ನು ತಿಳಿಯುವ ಪ್ರಯತ್ನ ಮಾಡುತ್ತಾ ಅವರಿಗೆ ನುಡಿನಮನ ಸಲ್ಲಿಸೋಣ.

**ಶ್ವೇತಾ ಜಿ ಹೆಚ್., ಪ್ರಶಿಕ್ಷಣಾರ್ಥಿ**

## ಮರೆಮಾಚಿದಂತಿರುವ ಮಾನವೀಯ ಮೌಲ್ಯಗಳು



ನಿತ್ಯ ಜೀವನದ ಪ್ರಯಾಣದಲ್ಲಿ ಪ್ರತಿ ಕ್ಷಣವೂ ಹೊಸ ಪರಿಚಯ, ಸ್ನೇಹ, ಪರಿಚಿತರ ಬೀಳ್ಕೊಡುಗೆಯೊಂದಿಗೆ ಸಾಗುತ್ತಿರುತ್ತದೆ. ಯಾವ ಪರಿಚಯ, ಸ್ನೇಹವು ಶಾಶ್ವತವಲ್ಲ. ಮರೆಯುವಂಥದ್ದೂ ಅಲ್ಲ. ಯಾರ ಪ್ರಯಾಣ ಎಂದು ಮುಗಿಯುತ್ತದೆ ಎಂದು ತಿಳಿಯದ ಒಂದು ಸುಂದರ ಪ್ರಯಾಣ ಈ ನಮ್ಮ ಜೀವನ.

ಪ್ರಯಾಣ ಎಂದಾಕ್ಷಣ ಕೇವಲ ಒಂದು ಕ್ರಿಯೆಯಾಗಿ ಉಳಿಯದೆ ನಮ್ಮ ಇರುವಿಕೆ ಇಲ್ಲದಿರುವಿಕೆಯ ವ್ಯತ್ಯಾಸ ತಿಳಿಯದಂತಾದಾಗಬೇಕು. ಅರ್ಥಾತ್ ನಮ್ಮ ಸಾವಿನ ನಂತರವೂ ಜನರ ಮನಸ್ಸಿನಲ್ಲಿ ಜೀವಿಸುವಂತಿರಬೇಕು. ನಮ್ಮ ಹೆಜ್ಜೆ ಗುರುತನ್ನು ಉಳಿಸುವ ಒಂದೇ ಅರ್ಥಬದ್ದ ಜೀವನ ನಮ್ಮದಾದರೆ ಅದು ಒಂದು ಸಾರ್ಥಕ ಜೀವನ ಪ್ರಯಾಣವಾಗುತ್ತದೆ.

ಹೇಗೆ? – ಇದು ಪ್ರತಿ ಮನುಷ್ಯನ ಬುದ್ದಿ, ವಿವೇಚನೆ, ಆಕಾಂಕ್ಷೆಗಳ ಮೇಲೆ ಅವಲಂಬಿತವಾಗಿರುತ್ತದೆ.

ಪ್ರಸ್ತುತ ನಮ್ಮ ಸಮಾಜದಲ್ಲಿ ಸಾಮಾನ್ಯವಾಗಿ ನಮ್ಮ ಜನರು ಹೇಳುವುದು, ನಾಗರೀಕತೆ ಬೆಳೆಯುತ್ತ ಮನುಷ್ಯ ತನ್ನ ಮಾನವೀಯ ಗುಣಗಳನ್ನು ಗಾಳಿಗೆ ತೂರುತ್ತಿದ್ದಾನೆ, ಭಾವನೆಗಳು ನಶಿಸುತ್ತಿವೆ, ಕರ್ತವ್ಯವನ್ನು ಮರೆತು ಯಾಂತ್ರಿಕ ಜೀವನ ನಡೆಸುತ್ತಿದ್ದಾನೆ ಎಂದು. ಆದರೆ ನಮ್ಮ ಸುತ್ತಲೂ ನಡೆಯುವ ಸಂಗತಿಗಳನ್ನು ಗಮನಿಸಿದಾಗ ಮಾತ್ರ ನಮಗೆ ಸತ್ಯದ ಅರಿವಾಗುತ್ತದೆ. ನಾವು ನಮ್ಮ ಜೀವನ ಶೈಲಿಯನ್ನು ಬದಲಿಸಿಕೊಂಡು ಜನರು ಬದಲಾಗುತ್ತಿರುವರೆಂಬುದು ಸರಿಯೇ?

ನಾಗರೀಕತೆಯ ಕಾರಣದಿಂದಾಗಿ ನಮ್ಮ ಜೀವನ ರೀತಿ ಸುಲಭ ಹಾಗು ವೈಜ್ಞಾನಿಕವಾಗಿದೆ. ಜೊತೆಯಲ್ಲಿ ಇನ್ನೂ ಸುಲಭಸಾಧ್ಯ ಮಾಡುವ ಹಂಬಲವು ನಮ್ಮ ಜೀವನದ ಬಿಡುವನ್ನು ತನ್ನ ವಶವಾಗಿಸಿಕೊಂಡಿದೆ. ಆದರೆ ಜೀವನ ತಾನು ಇರುವಂತೆಯೇ ಇದೆ. ಬದಲಾಗಿರುವುದು ಮನಸ್ಸು.

ಯಾವ ಮಾನವೀಯ ಮೌಲ್ಯಗಳು ಕಳೆದು ಹೋಗಿಲ್ಲ. ಅದನ್ನು ನೋಡಲು ಬೇಕಾದ ದೃಷ್ಟಿ ನಮ್ಮಲ್ಲಿ ಇಲ್ಲ. ಮಕ್ಕಳು ತಮ್ಮ ತಂದೆ ತಾಯಿಯನ್ನು ಆಶ್ರಮಕ್ಕೆ ಬಿಡುತ್ತಾರೆ ಸಾಕಲಾರೆದೆ ಇದು ಸಂಬಂಧಗಳು ಕಳಚುವುದಕ್ಕೆ ಉದಾಹರಣೆ ಆಗುವುದಾದರೆ, ನಮ್ಮ ಸಮಾಜದಲ್ಲಿ ನೊಂದ ತಂದೆ ತಾಯಿಗಳಿಗಾಗಿ ವೃದ್ದಾಶ್ರಮ ನಡೆಸುವವರಲ್ಲಿ ಮಾನವೀಯತೆ ಕಾಣುವುದಿಲ್ಲವೇ? ಅಪಘಾತ ನಡೆದಾಗ ದೂರ ಹೋದವರನ್ನು ದೂಷಿಸುವಲ್ಲಿ ಪಕ್ಕದಲ್ಲೇ ಸಹಾಯ ಮಾಡುವವರು ನಮಗೇಕೆ ಕಾಣುವುದಿಲ್ಲ?

ಮುಂಜಾನೆ ಕವಿದ ಇಬ್ಬನಿ ಇರುವವರೆಗೂ ನಮಗೆ ಕಾಣದ ಹತ್ತಿರದ ವಸ್ತುಗಳನ್ನು ಇಲ್ಲ ಎಂದು ಹೇಳಲಾಗುವುದೇ? ಅದು ತಾತ್ಕಾಲಿಕ. ಬಿಸಿಲು ಬೀಳುವವರೆಗೂ ಮಾತ್ರ. ಕ್ಷಣಿಕ ನಡೆಯುವ ವಿಚಾರವನ್ನು ದೊಡ್ಡ ನಿರ್ಧಾರಗಳಿಗಾಗಿ ಬಳಸಿದಾಗ ಇಂತಹ ಪ್ರಮಾದವಾಗುತ್ತದೆ.


ಪ್ರತಿ ವಸ್ತು ಹಾಗು ಪ್ರತಿ ಘಟನೆಗೂ ನಮಗೆ ನೇರವಾಗಿ ಕಾಣದ ಇನ್ನೊಂದು ಮುಖವಿರುತ್ತದೆ. ಇಂದಿಗೂ ಎಲೆಮರೆಯ ಕಾಯಿಯಂತೆ ಸಮಾಜಕ್ಕೆ ತಮ್ಮ ಕೊಡುಗೆ ನೀಡುವವರು ನಮ್ಮಲ್ಲಿಯೇ ಇದ್ದಾರೆ. ಗುರುತಿಸುವ ವಿವೇಚನೆಯನ್ನು ಕಳೆದುಕೊಳ್ಳುವ ಯಾಂತ್ರಿಕ ಜೀವನದಲ್ಲಿ ನಾವಿದ್ದೇವೆ. ಯಾರು ಕರೆಯದೆಯೇ ಸಹಾಯ ಮಾಡುವವರು ಇಂದಿಗೂ ಇದ್ದಾರೆ. ಆದರೆ ನಾವು ನಮ್ಮ ಕರ್ತವ್ಯದಿಂದ ಹಿನ್ನಡೆದಾಗ ಮುಂದೆ ಚಲಿಸಿದಾಗ ನಮ್ಮ ಹಿಂದೆ ಮಾನವೀಯತೆ ಮೆರೆದವರು ಕಾಣುವುದಿಲ್ಲ. ನಕಾರಾತ್ಮಕ ಭಾವನೆ ಎನ್ನುವುದು ನಮ್ಮ ಮನದಲ್ಲಿ ಹುಟ್ಟಿ ಹೆಮ್ಮರವಾಗಿ ಬೆಳೆದು, ಸಕಾರಾತ್ಮಕ ಸಮಾಜದ ಹಿತವಾದ ವಿಷಯಗಳು ನಮಗೆ ಕಾಣದಂತೆ ಮಾಡಿದೆ. ಸತ್ಯ ಧರ್ಮ, ಪ್ರೀತಿ ವಿಶ್ವಾಸ ಎಲ್ಲ ಕಾಲಕ್ಕೂ ಸಲ್ಲುವ ವಿಷಯಗಳು. ರೀತಿ ಬೇರೆಯಾಗಬಹುದು. ಆದರೆ ಇವೆಲ್ಲವೂ ಪಕೃತಿಯ ನಿಯಮಗಳು.

ನಮ್ಮ ಸಮಾಜ ಜಾಗೃತವಾಗಿದೆ. ಕರ್ತವ್ಯಗಳ ಅರಿವು ಹೆಚ್ಚುತ್ತಿದೆ. ವಿಷಯದ ಆಳಕ್ಕೆ ಇಳಿದು ಸತ್ಯ ತಿಳಿಯುವ ಜ್ಞಾನ ನಮ್ಮಲ್ಲಿ ಮೂಡಿದೆ. ಒಂದು ಸ್ವಸ್ಥ ಸಮಾಜ ಕಟ್ಟಲು ಬೇಕಾದ ಎಲ್ಲ ಜ್ಞಾನವು ನಮ್ಮಲ್ಲಿ ಹೆಚ್ಚುತ್ತಿದೆ. ಆದ್ರೆ ಮನದ ಕಣ್ಣು ತೆರೆದಾಗ ಸುಲಭ ಜೀವನ, ಆಧುನಿಕ ಜೀವನ ಶೈಲಿಯ ಜೊತೆಗೆ ಮಾನವೀಯತೆಯನ್ನು ತನ್ನಲ್ಲಿ ಅಡಗಿಸಿಕೊಂಡಿರುವ ಒಂದು ಸುಂದರ ನಾಡು ನಮಗೆ ಕಾಣುತ್ತದೆ.

ದ್ರಾಕ್ಷಿ ಸಿಗದ ನರಿ ಹಣ್ಣು ಹುಳಿ ಎಂದ ಹಾಗೆ, ಮನದ ಕಣ್ಣು ತೆರೆಯದೆ ನಾಗರೀಕತೆಯನ್ನು ದೂಷಿಸುವ ನಮ್ಮ ನಿಲುವು ಬದಲಾಗಬೇಕಿದೆ. ಮಾನವೀಯ ಮೌಲ್ಯಗಳನ್ನು ಜೀವಂತವಾಗಿಡುವಲ್ಲಿ ನಮ್ಮ ಪಾತ್ರ ದೊಡ್ಡದಾಗಿದೆ. ಅದನ್ನರಿತು ಸುಂದರ ಸ್ವಸ್ಥ ಕುಟುಂಬ, ಸಮಾಜ, ನಾಡು, ದೇಶ ಕಟ್ಟುವಲ್ಲಿ ಪ್ರಯತ್ನಿಸೋಣ.

**ಸಾಕಮ್ಮ ಸನ್ನೇರ ಮತ್ತು ಅರ್ಪಿತಾ ಟಿ.ಕೆ., ಪ್ರಶಿಕ್ಷಣಾರ್ಥಿಗಳು**

# ಶಿಕ್ಷಣ ಮತ್ತು ಸಮಾಜಕ್ಕೆ ಸ್ವಾಮಿ ವಿವೇಕಾನಂದರ ಸಂದೇಶಗಳು



1–ಶಿಕ್ಷಣವೆಂದರೆ ಮೊದಲೇ ಮನುಷ್ಯನಲ್ಲಿ ಇರುವ ಪರಿಪೂರ್ಣತೆಯನ್ನು ಪ್ರಕಾಶಪಡಿಸುವುದು.

2–ವಿದ್ಯಾಭ್ಯಾಸವೆಂದರೇನು? ಪುಸ್ತಕ ಪಾಂಡಿತ್ಯವೇ? ಅಲ್ಲ. ಹಲವು ವಿಧದ ಜ್ಞಾನಾರ್ಜನೆಯೇ? ಅದೂ ಅಲ್ಲ. ಯಾವ ತರಬೇತಿಯ ಮೂಲಕ ಇಚ್ಛಾಶಕ್ತಿಯ ಪ್ರವಾಹ ಮತ್ತು ಅಭಿವ್ಯಕ್ತಿಗಳು ನಿಯಂತ್ರಣಕ್ಕೆ ಒಳಗಾಗಿ ಫಲಕಾರಿಯಾಗುವವೋ ಅದೇ ಶಿಕ್ಷಣ.

3–ನನ್ನ ದೃಷ್ಟಿಯಲ್ಲಿ ವಿದ್ಯಾಭ್ಯಾಸದ ಸಾರವೇ ಮನಸ್ಸಿನ ಏಕಾಗ್ರತೆ. ಬರಿಯ ವಿಷಯ ಸಂಗ್ರಹವಲ್ಲ. ನಾನು ಪುನಃ ವಿದ್ಯಾಭ್ಯಾಸವನ್ನು ಪ್ರಾರಂಭಿಸಬೇಕಾದರೆ, ಈ ನಿಟ್ಟಿನಲ್ಲಿ ನನಗೇನಾದರೂ ಸ್ವಲ್ಪ ಸ್ವಾತಂತ್ರ್ಯವಿದ್ದರೆ ನಾನು ವಿಷಯಗಳನ್ನು ಕಲಿತುಕೊಳುವುದಿಲ್ಲ. ನಾನು ಮೊದಲು ಮನಸ್ಸನ್ನು ಹೇಗೆ ಏಕಾಗ್ರಗೊಳಿಸುವುದು ಮತ್ತು ಅದನ್ನು ಹೇಗೆ ಹಿಂದಕ್ಕೆ ಸೆಳೆಯುವುದು ಎಂಬುದನ್ನು ಕಲಿತುಕೊಂಡು ಅನಂತರ ಒಂದು ಸರಿಯಾದ ಉಪಕರಣದಿಂದ ನನ್ನ ಇಚ್ಛಾಪ್ರಕಾರ ವಿಷಯಗಳನ್ನು ಸಂಗ್ರಹಿಸುತ್ತೇನೆ.

4–ಯಾವ ಶಿಕ್ಷಣ ಜನಸಾಧಾರಣರನ್ನು ಜೀವನ ಸಂಗ್ರಾಮಕ್ಕೆ ಸಮರ್ಥರನ್ನಾಗಿ ಮಾಡುವುದಕ್ಕಾಗುವುದಿಲ್ಲವೊ, ಯಾವುದು ಮನುಷ್ಯನಿಗೆ ಚಾರಿತ್ರ್ಯಬಲ, ಸೇವಾತತ್ಪರತೆ, ಸಿಂಹಸಾಹಸಿಕತೆ ಇವುಗಳನ್ನು ಒದಗಿಸುವುದಿಲ್ಲವೊ ಅದು ಶಿಕ್ಷಣ ಎಂಬ ಹೆಸರಿಗೆ ಯೋಗ್ಯವೇನು? ಜೀವನದಲ್ಲಿ ವ್ಯಕ್ತಿ ತನ್ನ ಕಾಲಿನ ಮೇಲೆ ತಾನು ನಿಂತುಕೊಳ್ಳುವ ಸಾಮರ್ಥ್ಯವನ್ನು ಯಾವುದು ನೀಡುವುದೋ ಅದೇ ನಿಜವಾದ ಶಿಕ್ಷಣ.

5–ಈ ಜ್ಞಾನವೆಂಬುದು ಮನುಷ್ಯನಲ್ಲಿಯೇ ಅಡಗಿರುವುದು. ಹೊರಗಿನಿಂದ ಯಾವ ಜ್ಞಾನವೂ ಬರುವುದಿಲ್ಲ. ಅದೆಲ್ಲವೂ ಒಳಗೇ ಇರುವುದು... ನ್ಯೂಟನ್ನನು ಗುರುತ್ವಾಕರ್ಷಣವನ್ನು ಕಂಡುಹಿಡಿದನೆಂದು ನಾವು ಹೇಳುತ್ತೇವಲ್ಲವೇ? ಅದೇನು ಎಲ್ಲಿಯೋ ಒಂದು ಮೂಲೆಯಲ್ಲಿ ಕುಳಿತುಕೊಂಡು ನ್ಯೂಟನ್ನನು ತನ್ನನ್ನು ಕಂಡು ಹಿಡಿಯುವುದಕ್ಕೆ ಬರುವನೆಂದು ಕಾಯುತ್ತಿದ್ದಿತೇನು? ಅದು ಆತನ ಮನಸ್ಸಿನಲ್ಲಿಯೇ ಇದ್ದಿತು, ಸಮಯ ಬಂದಿತು, ಆಗ ಅದು ಬಯಲಾಯಿತು, ಎಂದರೆ ಆತನಿಗೆ ಜ್ಞಾನ ಹೊಳೆಯಿತು. ಜಗತ್ತುಗಳಿಸಿರುವ ಜ್ಞಾನವೆಲ್ಲವೂ ಮನಸ್ಸಿನಿಂದ ಬಂದುದೇ. ಜಗತ್ತಿನ ಅನಂತ ಪುಸ್ತಕ ಭಂಡಾರವೆಲ್ಲ ನಿಮ್ಮ ಮನಸ್ಸಿನಲ್ಲಿಯೇ ಇದೆ. ಬಾಹ್ಯಪ್ರಪಂಚವೆಂಬುದು ಸೂಚನೆ ಮಾತ್ರ, ಅದು ನಿಮ್ಮ ಮನಸ್ಸನ್ನು ವಿಚಾರ ಮಾಡುವಂತೆ ಪ್ರೇರೇಪಿಸುವುದು.

7–ಪ್ರತಿಯೊಬ್ಬರೂ ಆಜ್ಞಾಪಿಸುವವರೆ. ಆಜ್ಞಾಧಾರಕರಾಗಲು ಯಾರೂ ಇಚ್ಛಿಸುವುದಿಲ್ಲ. ಹಿಂದಿನಕಾಲದ ಬ್ರಹ್ಮಚರ್ಯಾಶ್ರಮ ಈಗ ಇಲ್ಲದಿರುವುದೇ ಇದಕ್ಕೆ ಕಾರಣ. ಮೊದಲು ಅಪ್ಪಣೆ ಪಾಲಿಸುವುದನ್ನು ಕಲಿಯಿರಿ. ಆಜ್ಞೆ ಕೊಡುವುದು ಅನಂತರ ಬರುವುದು. ಮೊದಲು ಹೇಗೆ ಸೇವಕನಾಗಬೇಕೆಂಬುದನ್ನು ಕಲಿಯಿರಿ. ಅನಂತರ ಸ್ವಾಮಿಯವಾಗಲೂ ಯೋಗ್ಯರಾಗುವಿರಿ.

8–ವಿದ್ಯೆ, ವಿದ್ಯೆ, ವಿದ್ಯೆಯೊಂದೇ. ಅನೇಕ ಐರೋಪ್ಯ ದೇಶಗಳಲ್ಲಿ ಪ್ರಯಾಣ ಮಾಡುತ್ತಿದ್ದಾಗ ಅತಿ ದೀನರಿಗೂ ಅಲ್ಲಿ ಲಭಿಸಿರುವ ಸೌಕರ್ಯ ಮತ್ತು ವಿದ್ಯೆ ಇವುಗಳನ್ನು ಕಂಡಾಗ, ನನ್ನ ದೇಶದ ಬಡಜನರ

ಸ್ಥಿತಿಯು ನನಗೆ ನೆನಪಾಗಿ, ನಾನು ಕಂಬನಿಯನ್ನು ಸುರಿಸುತ್ತಿದ್ದೆ. ಈ ವ್ಯತ್ಯಾಸ ಹೇಗೆ ಆಯಿತು? ನನಗೆ ಸಿಕ್ಕಿದ ಉತ್ತರವೇ, ವಿದ್ಯೆ.

9–ಆರ್ಯ ಜನಾಂಗದಲ್ಲಿ ಭರತಖಂಡ ಅವನತಿಯಲ್ಲಿರುವುದಕ್ಕೆ ಏನನ್ನಾದರೂ ಕಾರಣವನ್ನು ನೀವು ಕೊಡಬಲ್ಲಿರಾ? ಇಲ್ಲಿ ಬುದ್ಧಿಗೆ ಬರಗಾಲವೆ, ಕೌಶಲ್ಯಕ್ಕೆ ಬರಗಾಲವೆ? ಇಲ್ಲಿನ ಕಲೆ, ಗಣಿತಶಾಸ್ತ್ರ, ತತ್ವ ಇವನ್ನೂ ನೋಡಿ 'ಹೌದು ಎನ್ನಬಲ್ಲಿರಾ? ಈಗ ಪ್ರಗತಿಪರ ರಾಷ್ಟ್ರಗಳೊಡನೆ ಅಗ್ರಭಾಗದಲ್ಲಿ ನಿಲ್ಲಬೇಕಾದರೆ ಬೇಕಾಗಿರುವುದು ಶತಮಾನಗಳಿಂದ ಇದ್ದ ತಾಮಸಿಕ ಸ್ಥಿತಿಯಿಂದ ಪಾರಾಗಿ ಜಾಗ್ರತರಾಗುವುದು..... ಭರತಖಂಡದ ಜನಾಂಗದ ಆದರ್ಶವೇ ತ್ಯಾಗ ಮತ್ತು ಸೇವೆ. ಇವೆರಡನ್ನು ಚೆನ್ನಾಗಿ ರೂಢಿಸಿ, ಉಳಿದುವೆಲ್ಲ ತಮಗೆ ತಾವೇ ಹೊಂದಿಕೊಳ್ಳುವುವು.

10–ಎಲ್ಲವನ್ನೂ ಪರಿಹಾಸ್ಯಮಾಡುವ ಹುಡುಗಾಟಿಕೆಯ ರೋಗ ನಮ್ಮ ರಾಷ್ಟ್ರಜೀವನದ ರಕ್ತವನ್ನು ಹೊಕ್ಕಿವೆ. ಮೊದಲು ಅದನ್ನು ತ್ಯಜಿಸಿ. ಧೀರರಾಗಿ, ಶ್ರದ್ಧಾವಂತರಾಗಿ, ಉಳಿದುದೆಲ್ಲಾ ಸ್ವಾಭಾವಿಕವಾಗಿ ಸಿದ್ಧಿಸುವುದು.

11–ಹೀನಸ್ಥಿತಿಯಲ್ಲಿರುವ ನಮ್ಮ ಬಡವರಿಗೆ ನಾವು ಮಾಡಬೇಕಾದ ಮುಖ್ಯಕರ್ತವ್ಯವೆ, ಅವರಿಗೆ ವಿದ್ಯೆಯನ್ನು ಕೊಟ್ಟು ಅವರನ್ನು ಪುನಃ ಮನುಷ್ಯರನ್ನಾಗಿ ಮಾಡುವುದು... ಅವರಿಗೆ ಉನ್ನತ ವಿಚಾರಗಳನ್ನು ಕೊಡಿ. ಅವರಿಗೆ ಬೇಕಾಗಿರುವ ಸಹಾಯ ಅದೊಂದೇ. ಅನಂತರ ಇವುಗಳ ಪರಿಣಾಮವಾಗಿ ಉಳಿದುದೆಲ್ಲ ಬಂದೆ ಬರುವುದು. ರಾಸಾಯನಿಕ ವಸ್ತುಗಳನ್ನು ಮಿಶ್ರ ಮಾಡುವುದಷ್ಟೇ ನಮ್ಮ ಕೆಲಸ. ಹರಳುಗಟ್ಟುವಿಕೆ ಪ್ರಕೃತಿನಿಯಮದಂತಾಗುತ್ತದೆ... ಬೆಟ್ಟ ಮಹಮ್ಮದನ ಸಮೀಪಕ್ಕೆ ಬರದೇ ಇದ್ದರೆ ಮಹಮ್ಮದನೇ ಬೆಟ್ಟದ ಸಮೀಪಕ್ಕೆ ಬರಬೇಕು. ಬಡಹುಡುಗನು ವಿದ್ಯಾವ್ಯಸಂಗಕ್ಕೆ ಬರಲಾಗದಿದ್ದಾರೆ ವಿದ್ಯೆಯೇ ಅವನ ಬಳಿಗೆ ಹೋಗಬೇಕು.

12–ಯಾವ ಬಗೆಯ ಶಿಕ್ಷಣದಿಂದ ಶೀಲಾ ರೂಪುಗೊಳ್ಳುವುದೊ, ಮನಶ್ಶಕ್ತಿ ವೃದ್ಧಿಯಾಗುವುದೊ, ಬುದ್ಧಿ ವಿಕಾಸಗೊಳ್ಳುವುದೊ ಮತ್ತು ಯಾವುದರಿಂದ ನಮ್ಮ ಸ್ವಂತ ಕಾಲ ಮೇಲೆ ನಾವು ನಿಂತು ಕೊಳ್ಳಬಲ್ಲೆವೊ ಅಂತಹ ಶಿಕ್ಷಣ ನಮಗೆ ಅವಶ್ಯಕ.

13–ಯಾವ ಶಿಕ್ಷಣದಿಂದ ನಮ್ಮ ಇಚ್ಛಾಶಕ್ತಿಯು ಅನೇಕ ಪೀಳಿಗೆಗಳಿಂದ ಬಲಾತ್ಕಾರವಾಗಿ ಹತ್ತಿಕ್ಕಲ್ಪಟ್ಟು ಈಗ ಮೃತಪ್ರಾಯವಾಗಿರುವುದೋ ಅದು ಶಿಕ್ಷಣವೆ? ನೀವೇ ಆಲೋಚಿಸಿರಿ. ಯಾವುದರ ದುಷ್ಪಭಾವದಿಂದ ಹೊಸ ಚೈತನ್ಯದಾಯಕ ವಿಚಾರಗಳ ಮಾತು ಹಾಗಿರಲಿ, ಅಂತಹ ಹಳೆಯ ವಿಚಾರಗಳು ಕೂಡಾ ಒಂದೊಂದಾಗಿ ಅಳಿದು ಹೋಗುತ್ತಿವೆಯೋ, ಯಾವುದು ಮನುಷ್ಯನನ್ನು ಯಂತ್ರಸದೃಶನನ್ನಾಗಿ ಮಾಡಿರುವುದೋ ಅದೆಂತಹ ಶಿಕ್ಷಣ? ನನ್ನ ಅಭಿಪ್ರಾಯದಲ್ಲಿ ಚಾಲಿತ ಯಂತ್ರದಂತೆ ಒಳ್ಳೆಯವರಾಗಿರುವುದಕ್ಕಿಂತಲೂ ಸ್ವಂತ ಇಚ್ಛಾಶಕ್ತಿ ಮತ್ತು ಬುದ್ಧಿಶಕ್ತಿಗಳ ಪ್ರೇರಣೆಯಿಂದ ದಾರಿತಪ್ಪಿದರೂ ಅದು ಹೆಚ್ಚು ಶ್ರೇಯಸ್ಕರ.

14–ವೇದಾಂತದೊಡನೆ ಮಿಳಿತಗೊಂಡಿರುವ ಪಾಶ್ಚಾತ್ಯ ವಿಜ್ಞಾನ, ಬ್ರಹ್ಮಚಾರ್ಯವೆ ಆಸರೆಯಾದ ಧ್ಯೇಯ ಮತ್ತು ನಮ್ಮ ಆತ್ಮದಲ್ಲಿ ದೃಢವಾದ ಶ್ರದ್ಧೆ ಮತ್ತು ನಂಬಿಕೆ –ಇವು ನಮಗೆ ಬೇಕಾಗಿರುವುದು ....... ಮನುಷ್ಯನಲ್ಲಿಯೇ ಎಲ್ಲಾ ಜ್ಞಾನವೂ ಇದೆ ಎಂದು ವೇದಾಂತ ಹೇಳುವುದು–ಚಿಕ್ಕ ಹುಡುಗನಲ್ಲಿ ಕೂಡ ಈ ಜ್ಞಾನ ಇದೆ–ಏನಿದ್ದರೂ ಅದನ್ನು ಜಾಗ್ರತಗೊಳಿಸಬೇಕು ಅಷ್ಟೆ. ಶಿಕ್ಷಕನ ಕೆಲಸ ಇಷ್ಟು ಮಾತ್ರವೇ.. ಆದರೆ

ಎಲ್ಲದರ ಮೂಲ ಧರ್ಮದಲ್ಲಿದೆ. ಧರ್ಮ ಅನ್ನದಂತೆ ಉಳಿದುವೆಲ್ಲಾ ಪಲ್ಯಗಳಂತೆ. ಕೇವಲ ಪಲ್ಯವನ್ನೇ ತಿಂದರೆ ಅಜೀರ್ಣವಾಗುವುದು. ಹಾಗೆಯೇ ಬರೇ ಅನ್ನವನ್ನೇ ತಿಂದರೂ ಅಜೀರ್ಣವಾಗುವುದು.

15–ಕಟ್ಟುನಿಟ್ಟಾದ ಬ್ರಹ್ಮಚರ್ಯದ ಅಭ್ಯಾಸದಿಂದ ಎಲ್ಲ ವಿದ್ಯೆಯ ಕಲಿಕೆ ಅತ್ಯಲ್ಪ ಕಾಲದಲ್ಲೇ ಕರತಲಾಮಲಕವಾಗುತ್ತದೆಂಬುದನ್ನು ನೀವು ಗಮನಿಸಿಲ್ಲವೆ? ಒಮ್ಮೆಯಷ್ಟೇ ಓದಿದ್ದನ್ನು ಅಥವಾ ಕೇಳಿದ್ದನ್ನು ಮರೆಯದೆ ಇರುವಂಥ ಜ್ಞಾಪಕಶಕ್ತಿ ಬ್ರಹ್ಮಚರ್ಯದಿಂದ ಬರುವುದು. ನಮ್ಮ ದೇಶದಲ್ಲಿ ಬ್ರಹ್ಮಚರ್ಯದ ಅಭಾವದಿಂದ ಎಲ್ಲವೂ ವಿನಾಶದ ಅಂಚಿನಲ್ಲಿರುವುದು.

**ವಿದ್ಯಾಶ್ರೀ ಡಿ ಹೆಚ್., ಪ್ರಶಿಕ್ಷಣಾರ್ಥಿ**

## ಮಹಿಳೆ ಮತ್ತು ಮೂಢನಂಬಿಕೆಗಳು



ಸಮಾಜದಲ್ಲಿ ತಲತಲಾಂತರದಿಂದ ರೂಡಿಯಲ್ಲಿರುವ ಮೂಡನಂಬಿಕೆಗಳಲ್ಲಿ ಹೆಚ್ಚಿನವು ಒಳಗೊಳ್ಳುವುದು ಮಹಿಳೆಯನ್ನು. ಸಂಪ್ರದಾಯ ಮತ್ತು ನಂಬಿಕೆಗಳನ್ನು ಹುಟ್ಟುಹಾಕುವುದು ಪ್ರಮುಖವಾಗಿ ಸಮಾಜದ ಪುರುಷ ಪ್ರದಾನ ಪ್ರವೃತ್ತಿ. ಇದರಿಂದ ಹುಟ್ಟಿದ ಮೂಡನಂಬಿಕೆಗಳಿಗೆ ಮಹಿಳೆಯನ್ನೇ ಮುಖ್ಯವಾದ ಗುರಿಯಾಗಿರುವುದರಲ್ಲಿ ಆಶ್ಚರ್ಯವೇನಿಲ್ಲ. ಏಸು ತನ್ನನ್ನು ಏರಿಸಲಿರುವ ಶಿಲುಬೆಯನ್ನು ಗೊಲ್ಗೊಥಾ ಗುಡ್ಡದ ತುದಿಗೆ ತಾನೇ ಹೊತ್ತುಕೊಂಡು ಹೋಗಬೇಕಾಯಿತಂತೆ. ಹಾಗೆಯೇ, ತಾನು ಬಲಿಯಾಗಬೇಕಾದ ಮೂಡನಂಬಿಕೆಗಳನ್ನು ಪೋಷಿಸಿಕೊಂಡು ಹೋಗುವುದೂ ಹೆಣ್ಣಿನ ಕರ್ತವ್ಯವಾಗಿ ಪರಿಗಣಿಸುವುದು ಸಮಾಜದ ವ್ಯವಸ್ತೆಯ ಒಂದು ವಿಪರ್ಯಾಸ. ತಾನು ಬಲಿಪಶುವಾಗಿಸುವ ಮೂಡನಂಬಿಕೆಗಳನ್ನು ನಿರಾಕರಿಸುವ, ಪ್ರತಿಭಟಿಸುವ ಬದಲು ಹೆಣ್ಣೇ ಅವುಗಳನ್ನು ವೈಭವೀಕರಿಸಿ, ಪಾಲಿಸಿಕೊಂಡು ಹೋಗಬೇಕಾದ ಪರಿಸ್ಥಿತಿ ಸಮಾಜದಲ್ಲಿ ಏರ್ಪಟ್ಟಿದೆ. ಅದೂ ಸಾಲದೆ, ಕುಟುಂಬದಲ್ಲಿ ಮಕ್ಕಳಿಗೆ 'ಸಂಸ್ಕೃತಿ', 'ಸತ್ಸಂಪ್ರದಾಯ' ಮುಂತಾದುವನ್ನು ಕಲಿಸಿಕೊಡುವುದು ಮುಖ್ಯವಾಗಿ ತಾಯಿಯ ಜವಾಬ್ದಾರಿಯಾಗಿದೆ ಹೀಗಾಗಿ, ಸಮಾಜದಲ್ಲಿನ ಮೂಡನಂಬಿಕೆಗಳನ್ನು ಗಟ್ಟಿಯಾಗಿ ಪೋಷಿಸಿಕೊಂಡು ಬರುವುದರ ಜೊತೆಯಲ್ಲಿ ಮಹಿಳೆಯು ತನ್ನ ಮುಂದಿನ ಪೀಳಿಗೆಗೂ ಇವುಗಳನ್ನು ಹಂಚಿಕೊಡುತ್ತಾಳೆ.

**ವೈಧವ್ಯ**

ಗಂಡ ಸತ್ತರೆ ಹೆಂಡತಿ ಆಗುವಳು ವಿಧವೆ

ಹೆಂಡತಿ ಸತ್ತರೆ ಗಂಡನು ಆಗುವನು ಮದುವೆ

ಎಂಬ ಮಾತು ಭಾರತೀಯ ಮಹಿಳೆಯರ ವೈವಾಹಿಕ ಬದುಕಿನ ದುರಂತವನ್ನು ಎತ್ತಿ ತೋರಿಸುತ್ತದೆ. ಗಂಡ ಸತ್ತ ಮಹಿಳೆಯರನ್ನು ಸಮಾಜದಲ್ಲಿ ಕೀಳಾಗಿ ಕಾಣಲಾಗುತ್ತಿತ್ತು. ಒಂದು ಕಾಲದಲ್ಲಿ ವಿಧವೆಯರ ತಲೆ ಕೂದಲು ಬೋಳಿಸಿ, ಕುಂಕುಮ ತೆಗೆದು, ಬಳೆ ಒಡೆದು ತೀರಾ ವಿಕಾರವಾಗಿ ಮಾಡುತ್ತಿದ್ದರು. ಅವಳ

ಉಡುಗೆ, ತೊಡುಗೆ, ನಡವಳಿಕೆ ಮೇಲೆ ಇನ್ನಿಲ್ಲದ ನಿರ್ಬಂದಗಳನ್ನು ಹೇರಿ ತೀರಾ ಅಮಾನವೀಯವಾಗಿ ನಡೆಸಿಕೊಳ್ಳುತ್ತಿದ್ದರು. ಇಂದು ವಿಧವೆಯರ ಇರುವಿಕೆಯಲ್ಲಿ ಮೊದಲಿನಷ್ಟು ವಿಕೃತಿ, ಕ್ರೌರ್ಯಗಳಿಲ್ಲವಾದರೂ ಅವರ ಬದುಕಿನಲ್ಲಿ ಸಂಪೂರ್ಣ ಬದಲಾವಣೆ ಬಂದಿಲ್ಲ. ಇಂದಿಗೂ ಆಧುನಿಕ ಎಂದೆನಿಸಿಕೊಂಡು ಮೆರೆಯುವ ಮನೆಗಳಲ್ಲಿಯೂ ಧಾರ್ಮಿಕ, ಸಾಂಪ್ರದಾಯಿಕ ಕಾರ್ಯಚಟುವಟಿಕೆಗಳಲ್ಲಿ ಸ್ವತಃ ವಿಧವೆಯರೇ ದೂರ ಉಳಿಯುತ್ತಾರೆ. ಇಲ್ಲವೇ ಅವರನ್ನು ಸಂಪ್ರದಾಯದ ಹೆಸರಿನಲ್ಲಿ . ದೂರವಿಡಲಾಗುತ್ತದೆ. ಆಕೆ ಈ ಅವಮಾನವನ್ನು ಮೌನವಾಗಿ ಅನುಭವಿಸಬೇಕಾಗುತ್ತದೆ.

ಈ ದೇಶದಲ್ಲಿ ಎಷ್ಟು ಸಂಖ್ಯೆಯಲ್ಲಿ ವಿಧವೆಯರಿದ್ದಾರೆಯೋ ಅಷ್ಟೇ ಭಿನ್ನ ಬಗೆಯ ಗೋಳಿನ ಕಥೆಗಳಿವೆ. ಕಾಶಿ, ಮಥುರಾ, ಬೃಂದಾವನ ಎಲ್ಲ ಬಗೆಯ ಅಕ್ರಮ, ಅನ್ಯಾಯ, ಲೈಂಗಿಕ ಶೋಷಣೆಯ ಕೊಂಪೆಗಳಾಗಿವೆ. ವೈಧವ್ಯ ಎಂಬುದೇ ಸಹಿಸಲಾಗದಷ್ಟು ಹೆಣ್ಣಿನ ಬದುಕಿಗೆ ಬಹುದೊಡ್ಡ ಶಾಪವಾಗಿದೆ. ಸ್ತ್ರೀಯರನ್ನು ಅಪಮಾನಿಸುವ ಇದಕ್ಕಿಂತ ದೊಡ್ಡ ಬೈಗುಳ (ವಿಧವೆ) ಇನ್ನೊಂದು ಇರಲಾರದು.

ನಮ್ಮಲ್ಲಿ ಹೆಂಡತಿ ಸತ್ತ ಪುರುಷ ಸುಲಭವಾಗಿ ಮರುಮದುವೆ ಮಾಡಿಕೊಳ್ಳುತ್ತಾನೆ. ಆದರೆ ವಿಧವೆಯರ ಮರುವಿವಾಹ ಮಾತ್ರ ಶೇ.1 ಅಥವಾ 2 ರ ಪ್ರಮಾಣದಲ್ಲಿ ಮಾತ್ರ ಜರುಗುತ್ತಿದೆ.

**ಬಂಜೆತನ**

'ಕಂದನ ಕೊಡು ಶಿವನೇ ಬಂಧನ ಪಡಲಾರ್
ಮರ್ತ್ಯದಾಗ ಬಂಜೆಂಬ ಶಬುದ ಹೊರಲಾರೆ'
ಬಾಲಕರಿಲ್ಲದ ಬ್ಯಾಲಿಡ್ಯಾತರ ಜನುಮ
ಬಾಡಿಗಿ ಎತ್ತು ದುಡಿದಂತೆ ಬಾಳೆಲೆಯ
ಹಾಸುಂಡು ಬೀಸಿ ಒಗೆದಾಂಗ'

ಶತಶತಮಾನಗಳ ನಡೆಯಲ್ಲಿ ಸ್ತ್ರೀಯರನ್ನು, ಮಕ್ಕಳು ಹೇರುವ ಯಂತ್ರಗಳಾಗಿಯೇ ನಡೆಸಿಕೊಂಡು ಬಂದಿರುವ ಚಿತ್ರಣ ಈ ಎರಡು ಜಾನಪದ ಪದ್ಯಗಳಲ್ಲಿದೆ. ಹೆಣ್ಣೊಬ್ಬಳಿಗೆ ಮದುವೆಯಾದ ವರ್ಷದಲ್ಲೇ ಮಕ್ಕಳಾಗಬೇಕು: ಇಲ್ಲವಾದರೆ ಅವಳಿಗೆ ಬಂಜೆ ಎಂಬ ಪಟ್ಟಕಟ್ಟಿ ಗಂಡನಿಗೆ ಎರಡನೇ ಮದುವೆ ಸಿದ್ದವಾಗುತ್ತದೆ. ಅಥವಾ ಕೇವಲ ಹೆಣ್ಣುಮಕ್ಕಳೇ ಹುಟ್ಟಿದರು ಗಂಡುಮಗುವಿಗಾಗಿ ಇನ್ನೊಂದು ಮದುವೆ ಮಾಡಲಾದ ಅಸಂಖ್ಯಾತ ಉದಾಹರಣೆಗಳು ದೊರೆಯುತ್ತವೆ ಬಂಜೆಯನ್ನು ಈ ಸಮಾಜ ನಡೆಸಿಕೊಂಡ ಕ್ರೂರ ಚಿತ್ರಣ ಅನೇಕ ಜಾನಪದ ಕತೆ, ಕಾವ್ಯ, ಆಚರಣೆಗಳಲ್ಲಿ ತುಂಬಿಕೊಂಡಿದೆ. ಮಕ್ಕಳಾಗದಿರುವುದಕ್ಕೆ ಎಷ್ಟರ ಮಟ್ಟಿಗೆ ಪುರುಷರೇ ಕಾರಣ? ಅದರಲ್ಲೂ ಹೆಣ್ಣು ಗಂಡುಗಳ ಜನನಕ್ಕೆ ಪುರುಷನೇ ಕಾರಣ ಎಂಬ ಅಂಶಗಳು ಈಗ ಸ್ಪಷ್ಟವಾಗಿ ಬೆಳಕಿಗೆ ಬಂದಿವೆ. ವೈಜ್ಞಾನಿಕ ಆವಿಷ್ಕಾರಗಳು ಮಕ್ಕಳಾಗದಿರುವುದಕ್ಕೆ ಪುರುಷ ಅಥವಾ ಮಹಿಳೆಯರಲ್ಲಿ ಯಾರು ಕಾರಣ ಎಂಬುದನ್ನು ನಿಖರವಾಗಿ ತೆರೆದು ತೋರಿಸುತ್ತವೆ. ಹೀಗಿರುವಾಗಲೂ ಮಹಿಳೆಯರ ಬವಣೆ ತಪ್ಪಿದ್ದಲ್ಲ.

**ರಜಸೂತಕ-ಜನನ ಸೂತಕ**

ಮಹಿಳೆಯರು ರಜಸ್ವಲೆಯರಾದಾಗ (ಮುಟ್ಟಾದಾಗ) ಅವರನ್ನು ಬೇರೆಯೇ ಕೂರಿಸುವಂತಹ ಆಚರಣೆ ಇನ್ನೂ ಕೆಲ ಜನಾಂಗಗಳಲ್ಲಿ ರೂಡಿಯಲ್ಲಿದೆ. ಮುಟ್ಟಾಗುವುದು ಎಂದರೆ ಪೀಡೆ, ಆಕೆಗೆ ಆ ಸಮಯದಲ್ಲಿ ಪ್ರೇತ ಮೆಟ್ಟಿಕೊಂಡಿರುತ್ತದೆ. ಆಕೆಯನ್ನು ಮನೆಯವರಾರು ಮುಟ್ಟುವಂತಿಲ್ಲ. ಆಕೆ ಸ್ನಾನ

ಮಾಡುವಂತಿಲ್ಲ. ಚಿಕ್ಕ ಮಕ್ಕಳನ್ನು ಮುಟ್ಟಬೇಕೆಂದರೂ ಅವನ್ನು ಬೆತ್ತಲೆ ಮಾಡಿ ಮುಟ್ಟಬಹುದು. ಯಾರಾದರೂ ಮುಟ್ಟಿದರೆ ಕೇದಾಗುತ್ತದೆ ಎಂಬ ನಂಬಿಕೆ ಬಲವಾಗಿದೆ. ಗೊಲ್ಲರ ಜನಾಂಗದಲ್ಲಿ ಮುಟ್ಟು ಮತ್ತು ಹೆರಿಗೆಯಾದಾಗ ಮನೆಯಲ್ಲಿರಿಸಿಕೊಳ್ಳದೆ ಊರಿಂದ ಹೊರಗೆ ಹೊಲದಲ್ಲಿ, ಮರದ ಕೆಳಗೆ ಇರಿಸಲಾಗುತ್ತದೆ. ಮುಟ್ಟು ಒಂದು ಸಹಜವಾದ ನೈಸರ್ಗಿಕ ಪ್ರಕ್ರಿಯೆ. ತಾಯ್ತನಕ್ಕೆ ಬೇಕಾಗುವ ಸಿದ್ದತೆಗಳನ್ನು ಮಾಡಿಕೊಂಡ ಗರ್ಭಕೋಶ ಆ ತಿಂಗಳು ಗರ್ಭದಾರಣೆಯಾಗದಿದ್ದಾಗ ಎಲ್ಲವನ್ನು ನಿರ್ದಾಕ್ಷಿಣ್ಯವಾಗಿ ಹೊರಹಾಕುತ್ತದೆ. ಇಂತಹ ಆಚರಣೆ ಬಗ್ಗೆ ಚೆನ್ನಬಸವಣ್ಣನವರು ಹೀಗೆ ನುಡಿಯುತ್ತಾರೆ.

ಗುರುಕಾರುಣ್ಯ ಕಟಾಕ್ಷದಲ್ಲಿ
ಉತ್ಪತ್ಯವಾದ ಅಜಾತಂಗಳಿಗೆ
ಜಾತಿಸೂತಕ ಜನನಸೂತಕ
ಪ್ರೇತಸೂತಕ ರಜಸೂತಕ
ಉಚ್ಚಿಷ್ಟಸೂತಕ ಉಂಟೆಂಬುವಗಳಿಗೆ
ಗುರುವಿಲ್ಲ ಲಿಂಗವಿಲ್ಲ
ಜಂಗಮವಿಲ್ಲ ಪ್ರಸಾದವಿಲ್ಲವಯ್ಯ
ಕೂಡಲ ಚೆನ್ನಸಂಗಮದೇವಾ

ರಜಸೂತಕ ಮಾತ್ರವಲ್ಲದೇ ಜನನಸೂತಕ, ಜಾತಿಸೂತಕ, ಪ್ರೇತಸೂತಕಗಳ ಬಗ್ಗೆಯೂ ವೈಚಾರಿಕತೆಯನ್ನು ಶರಣರು ಮೆರೆದಿದ್ದಾರೆ. ವೈದಿಕ ಧರ್ಮದಲ್ಲಿ ಇಂದಿಗೂ ಪಂಚಸೂತಕಗಳು ಆಚರಣೆಯಲ್ಲಿವೆ. ಈ ಸೂತಕಗಳ ಆಚರಣೆಯ ನೆಪದಲ್ಲಿ ಕೆಳಜಾತಿಯಲ್ಲಿ ಹುಟ್ಟಿದವರ, ದುಃಖಿತ ಸ್ತ್ರೀಯರ ಶೋಷನೆಯಾಗುವುದನ್ನು ಗುರ್ತಿಸಿದ ವಚನಕಾರರೆಲ್ಲರೂ ಈ ಸೂತಕಗಳನ್ನು ನಿರಾಕರಿಸಿದರು.

**ಮಹಿಳೆಗೆ ಪ್ರಥಮ ಶತ್ರು ಜ್ಯೋತಿಷ್ಯ**

ಜ್ಯೋತಿಷ್ಯದ ನಂಬಿಕೆಯು ಮಹಿಳೆಯರ ಸರ್ವನಾಶಕ್ಕೆ ಕಾರಣರಾಗುತ್ತದೆ. ವಿವಾಹದ ಸಂದರ್ಭದಲ್ಲಿ ಜ್ಯೋತಿಷಿಗಳನ್ನು ಕೇಳಿ ಜಾತಕ ಹೊಂದಿಸಿಯೇ ಮದುವೆ ಮಾಡುತ್ತಾರೆ. ಜಾತಕ ಅಥವಾ ನಕ್ಷತ್ರ ಸರಿಹೊಂದದಿದ್ದರೆ ಎಷ್ಟು ಉತ್ತಮವಾದ ವರ ಇದ್ದರೂ ಬಿಟ್ಟುಬಿಡುತ್ತಾರೆ. ಜಾತಕ ಸರಿಹೊಂದಿದ್ದರೆ ವರನಿಗೆ ಕೆಲಸವಿಲ್ಲದಿದ್ದರೂ ಮಾಡುವೆ ಮಾಡಿಸುತ್ತಾರೆ. ಜ್ಯೋತಿಷ್ಯಕ್ಕೆ ಯಾವುದೇ ವೈಜ್ಞಾನಿಕ ಆಧಾರಗಳಿಲ್ಲ.

**ಗ್ರಹಣ, ಮೊಟ್ಟೆ ಇತ್ಯಾದಿ**

ಸೂರ್ಯ ಮತ್ತು ಚಂದ್ರಗ್ರಹಣಗಳು ಕೇವಲ ನೈಸರ್ಗಿಕ ಘಟನೆಗಳು. ಅವು ಭೂಗ್ರಹದಲ್ಲಿನ ಜೀವಿಗಳ ಮೇಲೆ ಯಾವುದೇ ಪರಿಣಾಮವನ್ನು ಬೀರುವುದಿಲ್ಲ. ಸೂರ್ಯಗ್ರಹಣದ ಸಮಯದಲ್ಲಿ ಮಾತ್ರ ಸೂರ್ಯನನ್ನು ನೇರವಾಗಿ ಬರಿಗಣ್ಣಿನಿಂದ ನೋಡುವುದು ಕಣ್ಣಿಗೆ ಹಾನಿಕರ. ಇದನ್ನು ಬಿಟ್ಟರೆ ಗ್ರಹಣದಲ್ಲಿ ಅಶುಭಾಕಾರಿಯಾದುದು ಯಾವುದೂ ಇಲ್ಲ. ಈ ನಂಬಿಕೆಯಿಂದ ಮಹಿಳೆಯರ ಚಟುವಟಿಕೆಗಳ ಮೇಲೆ ಹೆಚ್ಚಿನ ಹೊರೆ ಬೀಳುತ್ತದೆ. ಗರ್ಭಿಣಿ ಹೆಂಗಸು ಗ್ರಹಣದ ಸಮಯದಲ್ಲಿ ಹೊರಗೆ ತಿರುಗಾಡಬಾರದು, ಊಟ ಮಾಡಬಾರದು ಎಂಬ ತಪ್ಪು ತಿಳುವಳಿಕೆ ಇದೆ.

ಹಾಗೆಯೇ ಗರ್ಭಿಣಿಯರು 'ಮೊಟ್ಟೆ' ತಿಂದರೆ ಮುಂದೆ ಹುಟ್ಟುವ ಮಗುವಿಗೆ ತಲೆಯಲ್ಲಿ ಕೂದಲಿರುವುದಿಲ್ಲ ಎಂಬ ತಪ್ಪು ನಂಬಿಕೆ ಕೆಲವರಲ್ಲಿದೆ. ಮೊಟ್ಟೆಯಲ್ಲಿ ಕ್ಯಾಲ್ಷಿಯಂ ಅಧಿಕವಾಗಿರುತ್ತದೆ. ಮೊಟ್ಟೆ ತಿಂದಲ್ಲಿ ಮೂಳೆ, ಚರ್ಮ, ಕೂದಲು ಚೆನ್ನಾಗಿ ಬೆಳೆಯುತ್ತದೆಂಬುದು ಸತ್ಯ. ಬಹುತೇಕ ಕಾಯಿಲೆಗಳಿಗೆ ಈಗ ಸೂಕ್ತವಾದ ಔಷದಿ ಚಿಕಿತ್ಸೆ ಇವೆ. ಆದರೆ ಕುಟುಂಬದಲ್ಲಿ ಪೌಷ್ಟಿಕತೆ, ಆರೋಗ್ಯದ ಪ್ರಶ್ನೆ ಬಂದಾಗ ಮಹಿಳೆಗೆ, ಹೆಣ್ಣುಮಕ್ಕಳಿಗೆ ಕೊಟ್ಟಕೊನೆಯ ಪ್ರಾಶಸ್ತ್ಯವಿರುತ್ತದೆ.ಇದು ನಮ್ಮ ಸಾಂಪ್ರದಾಯಿಕತೆಯ ಫಲವೇ ಸರಿ.

**ಮಾನಸಿಕ ಖಾಯಿಲೆಗಳು**

ನಮ್ಮ ಸಮಾಜದಲ್ಲಿ ದೆವ್ವಗಳು ಹೆಚ್ಚಾಗಿ ಹೆಣ್ಣುಮಕ್ಕಳ ಮೇಲೆಯೇ ಬರುತ್ತವೆ ಎಂಬುದೂ ಸ್ವಾರಸ್ಯಕರವಾದ ಸಂಗತಿ. ಕುಟುಂಬ ಜೀವನದ ಒತ್ತಡವನ್ನು ಸಹಿಸದೇ ಹೆಣ್ಣುಮಕ್ಕಳಲ್ಲಿ ಆತಂಕ, ಖಿನ್ನತೆ, ಹಿಸ್ಟೀರಿಯಾದಂತಹ ಮಾನಸಿಕ ಕಾಯಿಲೆಗಳು ಕಾಣಿಸಿಕೊಳ್ಳುತ್ತವೆ. ಅವುಗಳನ್ನು ಇಂದಿಗೂ ಸರಿಯಾದ ರೀತಿಯಲ್ಲಿ ಪತ್ತೆಮಾಡದೆ ಆಕೆಗೆ ದೆವ್ವ ಬಂದಿದೆ, ದೇವರ ಕಾಟ ಎಂದೆಲ್ಲ ಹೆಸರಿಸಿ ಮಾಟಮಂತ್ರದ ಮೊರೆ ಹೋಗುತ್ತವೆ.

ಅತ್ತೆ, ಸೊಸೆಯ ಜಗಳ, ಗಂಡ ಹೆಂಡತಿಯ ಮುನಿಸು, ವರಗಿತ್ತಿಯರ ಜಗಳ ಮುಂತಾದವುಗಳು ದೆವ್ವ ಮೈಮೇಲೆ ಬರುವುದರ ಮೂಲಕ ಪರ್ಯವಸಾನಗೊಳ್ಳುತ್ತವೆ. ಅವರಿಗೆ ಮನೋವೈದ್ಯರ ಬಳಿ ಸರಿಯಾದ ಚಿಕಿತ್ಸೆ ಅವಶ್ಯಕ ಇರುತ್ತದೆ. ಹೆರಿಗೆಯ ನಂತರವಂತೂ ಅಪೌಷ್ಟಿಕತೆ, ಮಾನಸಿಕ ಒತ್ತಡ, ನೆಮ್ಮದಿಯ ವಾತಾವರಣವಿಲ್ಲದೆ ಇರುವುದು ಮುಂತಾದ ಕಾರಣಗಳಿಂದ ಹಿಸ್ಟೀರಿಯಾ (ಉನ್ಮಾದ)ಕ್ಕೆ ತುತ್ತಾಗುತ್ತಾರೆ. ಅದನ್ನು ಗುರುತಿಸಿ ಚಿಕಿತ್ಸೆ ಕೊಡಿಸದೇ ಹುಚ್ಚಿಯ ಪಟ್ಟ ಕಟ್ಟಿಬಿಡುವುದು ಸಾಮಾನ್ಯ.

**ಗಾದೆಗಳು, ಸುಭಾಷಿತಗಳ ಮೂಲಕ ಮಹಿಳೆಯರ ಅವಹೇಳನ**

'ಕವಿತೆ, ವನಿತೆ, ಲತೆ ಇವು ಆಸರೆ ಇಲ್ಲದೆ ಸೋಭಿಸಲಾರವು'; 'ಹಲಗೆ, ದನ, ಸ್ತ್ರೀಯರು ಬಡಿಸಿಕೊಳ್ಳಲು ಮಾತ್ರ ಯೋಗ್ಯವಾದವು'; 'ನಾರಿ ನರಕಕ್ಕೆ ದಾರಿ, ಹೆಣ್ಣು ನಡೆದಾಡುವ ಸ್ಮಶಾನ' ಇಂಥ ಅಸಂಖ್ಯ ಉವಾಚಗಳು ನಮಗೆ ಪ್ರಾಚೀನ ಸಾಹಿತ್ಯದಲ್ಲಿ ದೊರೆಯುತ್ತವೆ.ಇಂಥ ನಂಬಿಕೆಗಳ ಕಾರಣವಾಗಿ ಸಾಮಾಜಿಕವಾಗಿಯೂ ಹೆಣ್ಣು ತುಚ್ಛೀಕರಿಸಲ್ಪಟ್ಟಳು. ಹೀಗಾಗಿ 'ನಗುವ ಹೆಂಗಸನ್ನು ನಂಬಬಾರದು, ಅಳುವ ಗಂಡಸನ್ನು ನಂಬಬಾರದು', 'ಹೆಣ್ಣು ಉಂಡಿದ್ದೆಲ್ಲ ಮಣ್ಣು, ಗಂಡು ಉಂಡಿದ್ದೆಲ್ಲ ಹೊನ್ನು', 'ಮಳೆ ಬಂದರೆ ಕೇಡಲ್ಲ, ಹೆಂಗಸು ತಿರುಗಿ ಕೆಟ್ಟಳು'; 'ಹೆಣ್ಣುಮಕ್ಕಳ ಕೈಯಲ್ಲಿ ಮನೆಯ ಕಾರುಬಾರ ಕೊಡಬಾರದಂತೆ'; 'ಹೆಣ್ಣು ಹುಟ್ಟಿದರೆ ಹುಣ್ಣು ಹುಟ್ಟಿದಂತೆ'.

ಬೈಗುಳ ಪದಗಳನ್ನೊಮ್ಮೆ ಕೆದಕಿ ನೋಡಿದರೆ ಅಚ್ಚರಿಯಾಗುತ್ತದೆ. ಏಕೆಂದರೆ ಹೆಚ್ಚು ಕಡಿಮೆ ಎಲ್ಲ ಬೈಗುಳ ಪದಗಳು ಹೆಣ್ಣಿನ ಅಂಗಾಂಗಗಳು, ಅವುಗಳ ಶುದ್ಧತೆ, ಪಾತಿವ್ರತ್ಯ, ಮುತ್ತೈದೆತನ ಕುರಿತಾಗಿಯೇ ಇವೆ. ಪಟ್ಟಿ ಮಾಡಲು ಸಾಧ್ಯವಿಲ್ಲದಷ್ಟು ಇಂಥ ಜಾಣ್ನುಡಿ, ನಾಣ್ಣುಡಿಗಳು ಎಲ್ಲ ಪ್ರದೇಶಗಳಲ್ಲಿ ಎಲ್ಲ ಭಾಷೆ, ಜನಾಂಗಗಳಲ್ಲಿ ಆಯಾ ಸಂಸ್ಕೃತಿಗೆ ಹೊಂದಿಕೊಂಡಂತೆ ಬೆಳೆದುಕೊಂಡು ಬಂದಿವೆ. ಇವೆಲ್ಲ ಸ್ತ್ರೀಯರನ್ನು ಅಮ್ಮನವೀಯ ನೆಲೆಯಲ್ಲಿ ಕ್ರೂರವಾಗಿ ಚಿತ್ರಿಸಲಾಗಿದೆ. ಇಂಥ ನಂಬಿಕೆಗಳಿಗೆ ಯಾವುದೇ ವೈಜ್ಞಾನಿಕ, ವೈಚಾರಿಕ, ತಾತ್ವಿಕ ತಳಹದಿ ಇಲ್ಲ.

ಮಕ್ಕಳಾಗದಿದ್ದಾಗ ಅಶ್ವಥ ಗಿಡ ಸುತ್ತುವುದು, ಕೊಂದ ಹಾಯುವುದು, ಮಾಂತ್ರಿಕರ ಬಳಿಗೆ ಹೋಗಿ ಅವರು ಕೊಡಮಾಡುವ ತರಹೇವಾರಿ ಹಿಂಸೆಗಳನ್ನು ಅನುಭವಿಸುವುದು ಹೀಗೆ ಲೆಕ್ಕವಿಲ್ಲದಷ್ಟು ಮೌಢ್ಯಗಳ ಕೋಪದಲ್ಲಿ ಮಹಿಳೆಯರು ಮುಳುಗಿಹೋಗಿದ್ದಾರೆ. ಅದರಂತೆ ದೆವ್ವ ಭೂತ, ದೇವರು ಬರುವುದು, ಬಾನಾಮತಿ, ಮಾಟ ಮಂತ್ರದಂಥ ನಂಬಿಕೆಗಳು ಕೂಡಾ ಸ್ತ್ರೀಯರ ಸುತ್ತಲೇ ಹೆಚ್ಚು ಆಕ್ರಮಿಸಿಕೊಂಡಿರುತ್ತವೆ. ಇಂಥ ನಂಬಿಕೆಗಳನ್ನು ಅವಳ ಮೇಲೆ ಒತ್ತಾಯದಿಂದ ಹೊರಿಸಲಾಗಿರುತ್ತದೆ ಅಥವಾ ಅವಳ ಬಾಳಿನ ದಾರುಣತೆಯೇ ಅವಳನ್ನು ಈ ತೆರನ ನಂಬಿಕೆಗಳತ್ತ ವಾಲುವಂತೆ ಮಾಡಿರುತ್ತದೆ. ಸ್ತ್ರೀಯರ ಆರೋಗ್ಯ ಮತ್ತು ಪರಿಸ್ಥಿತಿ ಕುರಿತು ಸಮಾಜ ಕಾಳಜಿ ಮತ್ತು ಸಕಾಲಿಕ ಎಚ್ಚರಿಕೆ ವಹಿಸುವುದಿಲ್ಲ. ಆದ್ದರಿಂದ ಅವರು ತಮ್ಮ ಅಸಂಖ್ಯಾತ ರೋಗರುಜಿನಗಳಿಗೆ ಮಂತ್ರ, ತಾಯಿತ, ಬಾಬಾಗಳ ಕಡೆ ಹೋಗುತ್ತಾರೆ. ಸಮಸ್ಯೆಗಳಿಂದ ಹೊರಬರುವ ಸಾಧ್ಯತೆ ಇಲ್ಲದಿರುವಾಗ ವ್ರತ, ನೇಮ, ಉಪವಾಸಗಳತ್ತ ಆಕರ್ಷಿತರಾಗುತ್ತಾರೆ. ಹೇಳಿಕೊಳ್ಳಲಾಗದ ಒತ್ತಡ ದೌರ್ಜನ್ಯಗಳಿಗೆ ಬಲಿಯಾದಾಗ ಮನೋರೋಗ, ಮಾನಸಿಕ ಅಸ್ವಸ್ಥತೆಗೆ ಬಲಿಯಾಗುತ್ತಾರೆ. ಮಹಿಳೆಯರನ್ನು ನಡೆಸಿಕೊಳ್ಳುವ ರೀತಿಯಲ್ಲಿ ಬದಲಾವಣೆ ತರಲು ಸಾಧ್ಯವಾಗುವುದಾದರೆ ಅರ್ಧದಷ್ಟು ಕಂದಾಚಾರಗಳಿಂದ ಸ್ತ್ರೀಯರನ್ನು ರಕ್ಷಿಸಬಹುದು. ಒಟ್ಟಾರೆ ನಮ್ಮ ಪರಂಪರಾಗತ ನಂಬಿಕೆಗಳಲ್ಲಿ ಸ್ತ್ರೀ ವಿರೋಧಿ ದೃಷ್ಟಿ–ಧೋರಣೆಗಳು ಓತಪ್ರೋತವಾಗಿ ತುಂಬಿಕೊಂಡಿವೆ. ಈ ನಂಬಿಕೆಗಳ ಮೂಲೋತ್ಪಾಟನೆಗಾಗಿ ನಾವು ನಮ್ಮ ಸಾಮಾಜಿಕ ಸಂರಚನೆಗಳಲ್ಲಿ ಮೂಲಭೂತ ಬದಲಾವಣೆ ತರಬೇಕಾಗಿದೆ. ಅಂದರೆ ಸ್ತ್ರೀಯರನ್ನು ನೋಡುವ ಪಾರಂಪರಿಕ ದೃಷ್ಟಿಕೋನ ಬದಲಾಗಬೇಕಾಗಿದೆ.

**ಅಶ್ವಿನಿ ಡಿ.ಎಸ್., ಮತ್ತು ಶೃತಿ ಡಿ.ಬಿ ಪ್ರಸಿಕ್ಷಣಾರ್ಥಿಗಳು**

# ಕನ್ನಡ ಭಾಷೆ ಮತ್ತು ಸಂಸ್ಕೃತಿಯ ಮಹತ್ವ



ಕನ್ನಡ ಎಂದರೆ ಕೇವಲ ವರ್ಣಮಾಲೆಯಲ್ಲ, ಅದು ಕರುನಾಡ ನೆಲ, ಜಲ, ಜನ, ಬದುಕು, ಸಾಹಿತ್ಯ, ಸಂಸ್ಕೃತಿ, ಕಲೆ, ಸಂಗೀತ ಎಲ್ಲವನ್ನೂ ಒಳಗೊಂಡಿದೆ. ಕಲಿಯೋಕೆ ಕೋಟಿ ಭಾಷೆ, ಆಡೋಕೆ ಒಂದೇ ಭಾಷೆ ಕನ್ನಡ ಕನ್ನಡ. ಕಸ್ತೂರಿ. ಕನ್ನಡ. ಹುಟ್ಟಿದರೆ ಕನ್ನಡ ನಾಡಲ್ ಹುಟ್ಟಬೇಕು. ಮೆಟ್ಟಿದರೆ ಕನ್ನಡ ಮಣ್ಣ ಮೆಟ್ಟಬೇಕು. "ಕನ್ನಡ ಭಾಷೆ ನಮ್ಮ ಸಂಸ್ಕೃತಿ", ಭಾರತವು ಶ್ರೀಮಂತ ಸಂಸ್ಕೃತಿಯನ್ನು ಹೊಂದಿದೆ ಮತ್ತು ಅದು ನಮ್ಮ ಗುರುತಾಗಿದೆ. ಧರ್ಮ, ಕಲೆ, ಬೌದ್ಧಿಕ ಸಾಧನೆಗಳು ಅಥವಾ ಪ್ರದರ್ಶನ ಕಲೆಗಳಲ್ಲಿ ಅದು ನಮ್ಮನ್ನು ವರ್ಣರಂಜಿತ, ಶ್ರೀಮಂತ ಮತ್ತು ವೈವಿಧ್ಯಮಯ ರಾಷ್ಟವನ್ನಾಗಿ ಮಾಡಿದೆ. ಭಾರತಿಯ ಸಂಸ್ಕೃತಿ ಮತ್ತು ಸಂಪ್ರದಾಯ ಮಾರ್ಗದರ್ಶಿಯಾಗಿ ಆಗಿದೆ.

ಕರ್ನಾಟಕದಲ್ಲಿ ಬಳಸಲಾಗುವ ಕನ್ನಡ ಭಾಷೆಯನ್ನು ದೇಶದ ಪ್ರಮುಖ ಭಾಷೆಗಳಲ್ಲಿ ಒಂದಾಗಿ ಭಾರತೀಯ ಸಂವಿಧಾನವು ಗುರುತಿಸಿದೆ. ಕರ್ನಾಟಕದ ಬಹುತೇಕ ಜನರಿಗೆ ಕನ್ನಡವು ಮಾತೃಭಾಷೆಯಾಗಿದೆ. ನೆರೆಯ ರಾಜ್ಯಗಳಾದ ಆಂಧ್ರಪ್ರದೇಶ, ಮಹಾರಾಷ್ಟ್ರ, ತಮಿಳುನಾಡು, ಕೇರಳ, ಗೋವಾ, ಹಾಗೂ ದಮನ್ ಹಾಗೂ ದಿಯುಗಳಲ್ಲಿ ಕನ್ನಡವನ್ನು ಮಾತೃ ಭಾಷೆಯಾಗಿ ಬಳಸುವ ಗಣನೀಯ ಸಂಖ್ಯೆಯ ಜನರಿದ್ದಾರೆ.ಪ್ರಸ್ತುತದಲ್ಲಿ, ಕನಿಷ್ಠ ಮೂರು ಪ್ರಾದೇಶಿಕ ಉಪಭಾಷೆಗಳಾದ, ಮೈಸೂರು ಕನ್ನಡ, ಧಾರವಾಡ-ಕನ್ನಡ ಹಾಗೂ ಮಂಗಳೂರು-ಕನ್ನಡಗಳ ಜನಪ್ರಿಯವಾದ ಭಾಷಾ ಶೈಲಿಗಳನ್ನು, ಕ್ರಮವಾಗಿ ಮೂರು ಸಾಂಸ್ಕೃತಿಕ ಕೇಂದ್ರಗಳಾದ ಮೈಸೂರು, ಧಾರವಾಡ ಹಾಗೂ ಮಂಗಳೂರು ಪ್ರದೇಶಗಳಲ್ಲಿ ಮಾತನಾಡಲಾಗುತ್ತದೆ.

ಅಶೋಕನ ಶಿಲಾಶಾಸನಗಳ ಮೂಲಕ ಭಾರತದೆಲ್ಲೆಡೆ ಆರಂಭಿಕ ಲಿಪಿಯಾಗಿ ಜನಪ್ರಿಯಗೊಂಡು, ಎಲ್ಲ ಆಧುನಿಕ ಭಾರತೀಯ ಭಾಷೆಗಳಿಗೆ ಮೂಲ-ಲಿಪಿಯಾದ ಬ್ರಾಹ್ಮೀ ಲಿಪಿಯಿಂದ ಕನ್ನಡ ಭಾಷೆಯ ಲಿಖಿತ ಲಿಪಿರೂಪಗಳನ್ನೂ ಪಡೆದುಕೊಳ್ಳಲಾಗಿದೆ. ಕ್ರಿ.ಶ. 450ಕ್ಕೆ ಸೇರಿದ ಹಲ್ಮಿಡಿ ಶಾಸನದಲ್ಲಿ ಕನ್ನಡ ಲಿಪಿಯ ಪ್ರಾರಂಭಿಕ ರೂಪವು ದೊರೆತಿದೆ.

ಬಾದಾಮಿ ಚಾಲುಕ್ಯರ ಸಂಸ್ಕೃತದ ಅನೇಕ ಶಾಸನಗಳನ್ನು ಈ ಲಿಪಿಯಲ್ಲೆ ಬರೆಯಲಾಗಿದೆ. ಕನ್ನಡ ಲಿಪಿಯು ನಿರಂತರವಾಗಿ ಬದಲಾವಣೆ ಆಗುತ್ತಲೇ ಇದ್ದು ಇಂದಿನ ಕನ್ನಡ ಲಿಪಿಯು, ಸುಮಾರು 2,000 ವರ್ಷಗಳ ಕಾಲಾವಧಿಯಲ್ಲಿ ಇಂತಹ ವಿಕಸನೀಯ ಬದಲಾವಣೆಗಳಿಂದ ಉಂಟಾದುದು. ಬದಲಾಗದ ಏಕರೂಪ ದೊಂದಿಗೆ ಯಾಂತ್ರಿಕವಾಗಿ ನಕಲಾಗುವ ಅಕ್ಷರ ರೂಪಗಳನ್ನು ನೀಡುವ ಮುದ್ರಣವನ್ನು ಪರಿಚಯಿಸಿದ ಮೇಲೆ, ಪ್ರಸ್ತುತ ಲಿಪಿರೂಪವನ್ನು ಪ್ರಮಾಣೀಕೃತಗೊಳಿಸಲಾಯಿತು.

ಕ್ರಿ.ಶ. ಆರನೆಯ ಶತಮಾನದಿಂದ ಕನ್ನಡದಲ್ಲಿ ಹೊರಡಿಸಿದ ಅನೇಕ ರಾಜಾಜ್ಞೆಗಳನ್ನು ನೋಡಿದಾಗ, ಪ್ರಾಕೃತ ಹಾಗೂ ಕನ್ನಡ ಭಾಷೆಗಳನ್ನು ಪ್ರಾರಂಭಿಕ ಮತ್ತು ನಂತರದ ಕಾಲಗಳಲ್ಲಿ ಕ್ರಮವಾಗಿ ಬಳಸಿದರೂ, ನಂತರ ಬಂದ ಕರ್ನಾಟಕದ ಅರಸರು ಆಡಳಿತ ಉದ್ದೇಶಕ್ಕಾಗಿ ಕನ್ನಡವನ್ನೂ ಬಳಸುತ್ತಿದ್ದರು ಎಂದು ತಿಳಿದು ಬರುತ್ತದೆ. ಕದಂಬರ ಹಲ್ಮಿಡಿ ಶಿಲಾಶಾಸನ ಹಾಗೂ ಚಾಲುಕ್ಯರ ಬಾದಾಮಿ ಗುಹಾ ಶಾಸನೆಗಳು ರಾಜಾನುದಾನಗಳನ್ನು ಘೋಷಿಸುವ ಅತ್ಯಂತ ಪುರಾತನ ಕನ್ನಡ ದಾಖಲೆಗಳಾಗಿವೆ. ಕಾರ್ಯರೂಪಕ ಭಾಗವನ್ನು ಕನ್ನಡದಲ್ಲಿ ಬರೆಯಲಾಗಿದೆ. ವಿಜಯನಗರ ಅರಸರಿಗೆ ಸೇರಿದ ಅನೇಕ ದಾಖಲೆಗಳು

ಕನ್ನಡದಲ್ಲಿವೆ. ವಿಜಯನಗರ ಸಾಮ್ರಾಜ್ಯದ ಉತ್ತರಾಧಿಕಾರಿಗಳಾದ ಕೆಳದಿಯ ನಾಯಕರು ಹಾಗೂ ಮೈಸೂರಿನ ಒಡೆಯರೂ ಕೂಡ, ರಾಜ್ಯದ ಏಕೈಕ ಆಡಳಿತ ಭಾಷೆಯಾಗಿ ಕನ್ನಡವನ್ನು ಬಳಸಿದರು.

ಬಿಜಾಪುರದ ಅರಸರು, ಶಾಹಜಿ, ಏಕೋಜಿ ಹಾಗೂ ಶಿವಾಜಿಯ ಶಾಸನ ಹಾಗೂ ರಾಜಾಜ್ಞೆಗಳು ಕನ್ನಡದಲ್ಲಿವೆ. ಆಡಳಿತ ಹಾಗೂ ಸಾಮಾನ್ಯ ಉದ್ದೇಶಗಳೆರಡಕ್ಕೂ ಬ್ರಿಟಿಷರು ಕೊಡಗಿನ ಅರಸರು ಹಾಗೂ ಮೈಸೂರು ಒಡೆಯರು ಕನ್ನಡವನ್ನು ವಿಸ್ತೃತವಾಗಿ ಬಳಸಿದರು. ಪ್ರಸ್ತುತದಲ್ಲಿ, ಕರ್ನಾಟಕ ಸರ್ಕಾರವು ಕನ್ನಡವನ್ನು ಅಧಿಕೃತ ಆಡಳಿತ ಭಾಷೆಯಾಗಿ ಮಾಡಿದ್ದು ಭಾಷೆಯನ್ನು ಉತ್ತೇಜಿಸಲು ಹಾಗೂ ರಾಜ್ಯ ವ್ಯವಸ್ಥೆಯ ಎಲ್ಲ ಸ್ಥರಗಳಲ್ಲೂ ಅದರ ಬಳಕೆಯನ್ನು ಅನುಷ್ಠಾನಕ್ಕೆ ತರಲು ಹಾಗೂ ಭಾಷೆಯನ್ನು ಬಳಸಲು ಹಲವಾರು ಯೋಜನೆ ಹಾಗೂ ಕ್ರಮಗಳನ್ನು ಅನುಷ್ಠಾನ ಮಾಡಿದೆ. ಹಾಗಾಗಿ ಕನ್ನಡ ಭಾಷೆಗೆ ಸರ್ಕಾರ ಹಾಗೂ ಜನಸಾಮಾನ್ಯರಿಂದಲೂ ಒತ್ತಾಸೆ ದೊರಕಿದೆ.

**ಕನ್ನಡ ಭಾಷೆ:**

ಕರುನಾಡು ಸ್ವರ್ಗದ ಸೀಮೆ–ಕಾವೇರಿ ಹುಟ್ಟಿದ ನಾಡು. ಕಲ್ಲಲ್ಲಿ ಕಲೆಯನು ಕಂಡ–ಬೇಲೂರ ಶಿಲ್ಪದ ಬೀಡು. ಕಲಿಯೋಕೆ ಕೋಟಿ ಭಾಷೆ, ಆಡೋಕೆ ಒಂದೇ ಭಾಷೆ ಕನ್ನಡ. ವಿಶ್ವಖ್ಯಾತಿಯ ವಿಶ್ವೇಶ್ವರಯ್ಯ ಜನಿಸಿದ ಈ ನಾಡು. ಇದೆ ನಾಡು– ಇದೆ ಭಾಷೆ ಎಂದೆಂದೂ ನನ್ನದಾಗಿರಲಿ ಎಂಬ ಎಸ್.ಪಿ.ಬಿ ಅವರ ಗಾಯನದಂತೆ ಎಲ್ಲೇ ಇರಲಿ ಹೇಗೆ ಇರಲಿ ನಮ್ಮ ಉಸಿರಲ್ಲಿ ಕನ್ನಡ ಸದಾ ಅಚ್ಚ ಹಸಿರಾಗಿರಲಿ ಎಂಬುದು ನಮ್ಮ ಆಶಯ. ನಾವು ನಮ್ಮ ಕನ್ನಡದ ಸುಗ್ಗಿಯನ್ನು ಕೇವಲ ನವೆಂಬರ್ ಮಾಸದಲ್ಲಿ ಮಾತ್ರವಲ್ಲ ಪ್ರತಿ ದಿನ ಆಚರಿಸಬೇಕು.

ಸರ್ವ ಜನಾಂಗದ ಶಾಂತಿಯ ತೋಟ ನಮ್ಮ ನಾಡು. ಎಲ್ಲಾದರೂ ಇರು ಎಂತಾದರೂ ಇರು ಎಂದೆಂದಿಗೂ ನೀ ಕನ್ನಡವಾಗಿರು ಎಂಬಂತೆ ನಾವು ದೇಶದ ಯಾವುದೇ ಮೂಲೆಯಲ್ಲಿದ್ದರು ಕನ್ನಡವನ್ನು ಉಳಿಸಿ, ಬೆಳೆಸುವ ಸಂಸ್ಕೃತಿ ಪ್ರತಿಯೊಬ್ಬನ ಕನ್ನಡಿಗನದಾಗಲಿ. ಕನ್ನಡ ಭಾಷೆ ಮತ್ತು ಸಂಸ್ಕೃತಿಗೆ ಭಾರತದ್ದಲ್ಲೇ ಉಜ್ವಲವಾದ ಸ್ಥಾನವಿದೆ. ಕರ್ನಾಟಕದ ಹೆಸರು ವ್ಯಾಸ ಭಾರತದಲ್ಲೇ ಉಲ್ಲೇಖವಾಗಿದೆ. ಕನ್ನಡ ಭಾಷೆಗೆ ಎರಡು ಸಾವಿರ ವರ್ಷಕ್ಕೂ ಮಿಗಿಲಾದ ಇತಿಹಾಸವಿದೆ.

ಬೇಲೂರು, ಹಳೇಬೀಡು, ಬಾದಾಮಿ, ಐಹೊಳೆ, ಪಟ್ಟದ ಕಲ್ಲು ಮುಂತಾದ ಕಡೆಗಳಲ್ಲಿ ಶಿಲ್ಪ ಕಲೆಯು ಕಾವ್ಯವಾಗಿ ಮೈದಳೆದಿದೆ. ಪಂಪ, ರನ್ನ, ಜನ್ನರ ಕಾವ್ಯದ ಸೊಗಸು ಕಾಲವನ್ನೂ ಮೆಟ್ಟಿ ತಮ್ಮ ಚಿರಂತನತೆಯನ್ನು ಮೆರೆಯುತ್ತಿದೆ. ಕನ್ನಡ ಎಂದರೆ ಕೇವಲ ವರ್ಣಮಾಲೆಯಲ್ಲ, ಅದು ಕರುನಾಡ ನೆಲ, ಜಲ, ಜನ, ಬದುಕು, ಸಾಹಿತ್ಯ, ಸಂಸ್ಕೃತಿ, ಕಲೆ, ಸಂಗೀತ ಎಲ್ಲವನ್ನೂ ಒಳಗೊಂಡಿದೆ. ಕರುನಾಡು ಸ್ವರ್ಗದ ಸೀಮೆ–ಕಾವೇರಿ ಹುಟ್ಟಿನ ನಾಡು. ಕಲ್ಲಲ್ಲಿ ಕಲೆಯನು ಕಂಡ–ಬೇಲೂರ ಶಿಲ್ಪದ ಬೀಡು. ಬಸವೇಶ್ವರ, ರನ್ನ–ಪಂಪರ ಕವಿವಾಣಿಯ ನಾಡು ನಮ್ಮ ಕನ್ನಡ ನಾಡು.

ಚಾಮುಂಡಿ ರಕ್ಷೆಯು ನಮಗೆ ಶೃಂಗೇರಿ ಶಾರದೆ ವೀಣೆ– ರಸತುಂಗೆ ಆಗಿದೆ ಇಲ್ಲಿ. ವಿಶ್ವಖ್ಯಾತಿಯ ವಿಶ್ವೇಶ್ವರಯ್ಯ ಜನಿಸಿದ ಈ ನಾಡು. ಇದೆ ನಾಡು– ಇದೆ ಭಾಷೆ ಎಂದೆಂದೂ ನನ್ನದಾಗಿರಲಿ ಎಂಬ ಎಸ್.ಪಿ.ಬಿ ಅವರ ಗಾಯನದಂತೆ ಎಲ್ಲೇ ಇರಲಿ ಹೇಗೆ ಇರಲಿ ನಮ್ಮ ಉಸಿರಲ್ಲಿ ಕನ್ನಡ ಸದಾ ಅಚ್ಚ ಹಸಿರಾಗಿರಲಿ ಎಂಬುದು ನಮ್ಮ ಆಶಯ.

ಈ ಪ್ರದೇಶವನ್ನು ಮೊದಲಿಗೆ 'ಕರಿಯ ಮಣ್ಣಿನ ನಾಡು' ಎಂದೂ, 'ಕರುನಾಡು' ಎಂದರೆ ಎತ್ತರದ ಪ್ರದೇಶದಲ್ಲಿರುವ ನಾಡು ಎಂದೂ, 'ಕಮ್ಮಿತ್ತು ನಾಡು' ಎಂದರೆ ಶ್ರೀಗಂಧದ ಕಂಪನ್ನುಳ್ಳ ನಾಡು ಎಂದೂ ಕರೆಯುತ್ತಿದ್ದರು.

**ಕನ್ನಡ ಸಂಸ್ಕೃತಿ:**

ನಮ್ಮ ನೆರೆಯ ಸಂಸ್ಕೃತಿಗಳಿಗೆ ಹೋಲಿಸಿದರೆ ನಾವು ಅನೇಕ ಸಾಂಸ್ಕೃತಿಕ ಹೋಲಿಕೆಗಳನ್ನು ನೋಡುತ್ತೇವೆ ಮತ್ತು ಭಾಷೆ ಸಂಸ್ಕೃತಿಯ ವಿಶಿಷ್ಟ ಗುರುತಾಗುತ್ತದೆ. ಅದೇ ಸಮಯದಲ್ಲಿ, ಕರ್ನಾಟಕ ಮತ್ತು ಕನ್ನಡ ಭಾಷೆಯ ಪ್ರದೇಶಗಳ ಒಂದೇ ವ್ಯಾಪ್ತಿಯಲ್ಲಿ, ನಾವು ವೈವಿಧ್ಯಮಯ ಸಾಂಸ್ಕೃತಿಕ ಆಚರಣೆಗಳು ಮತ್ತು ಬಳಕೆಗಳನ್ನು ನೋಡುತ್ತೇವೆ. ಆದ್ದರಿಂದ ಇಡೀ ಸಂಸ್ಕೃತಿಯ ಪ್ರಧಾನ ಲಕ್ಷಣವಾಗಿ ಭಾಷೆಯನ್ನು ಮಾತ್ರ ಪರಿಗಣಿಸುವ ಮಿತಿಗಳ ಬಗ್ಗೆ ನಾವು ಜಾಗರೂಕರಾಗಿರಬೇಕು. ಸಂಸ್ಕೃತಿಯು ತನ್ನ ಅಭಿವ್ಯಕ್ತಿಗೆ ಕೇವಲ ಭಾಷೆಯ ಮೇಲೆ ಅವಲಂಬಿತವಾಗಿಲ್ಲ.

ಭಾರತವು ಶ್ರೀಮಂತ ಸಂಸ್ಕೃತಿಯನ್ನು ಹೊಂದಿದೆ ಮತ್ತು ಅದು ನಮ್ಮ ಗುರುತಾಗಿದೆ. ಧರ್ಮ, ಕಲೆ, ಬೌದ್ಧಿಕ ಸಾಧನೆಗಳು ಅಥವಾ ಪ್ರದರ್ಶನ ಕಲೆಗಳಲ್ಲಿ ಅದು ನಮ್ಮನ್ನು ವರ್ಣರಂಜಿತ, ಶ್ರೀಮಂತ ಮತ್ತು ವೈವಿಧ್ಯಮಯ ರಾಷ್ಟ್ರವನ್ನಾಗಿ ಮಾಡಿದೆ. ಭಾರತಿ ೀಯ ಸಂಸ್ಕೃತಿ ಮಾರ್ಗದರ್ಶನವಾಗಿದೆ.

ಜನರು ಇಂದು ಆಧುನಿಕರಾಗಿದ್ದರೂ ನೈತಿಕ ಮೌಲ್ಯಗಳನ್ನು ಉಳಿಸಿಕೊಂಡು ಆಚರಣೆಗೆ ತಕ್ಕಂತೆ ಹಬ್ಬಗಳನ್ನು ಆಚರಿಸುತ್ತಾರೆ. ಆದ್ದರಿಂದ, ನಾವು ಇನ್ನೂ ಬದುಕುತ್ತಿದ್ದೇವೆ ಮತ್ತು ರಾಮಾಯಣ ಮತ್ತು ಮಹಾಭಾರತದಿಂದ ಮಹಾಕಾವ್ಯದ ಪಾಠಗಳನ್ನು ಕಲಿಯುತ್ತಿದ್ದೇವೆ. ಅಲ್ಲದೆ, ಗುರುದ್ವಾರಗಳು, ದೇವಾಲಯಗಳು, ಚರ್ಚ್‌ಗಳು ಮತ್ತು ಮಸೀದಿಗಳಿಗೆ ಜನರು ಇನ್ನೂ ಸೇರುತ್ತಾರೆ.

ಭಾರತವು ಅನೇಕ ಸಂಸ್ಕೃತಿಗಳನ್ನು ಹೀರಿಕೊಂಡು ಮುನ್ನಡೆದಿರುವುದರಿಂದ ಪ್ರಬಲ ಮತ್ತು ಬಹು-ಸಂಸ್ಕೃತಿಯ ಸಮಾಜವಾಗಿ ನಿಂತಿದೆ. ಇಲ್ಲಿನ ಜನರು ವಿವಿಧ ಧರ್ಮ , ಸಂಪ್ರದಾಯ ಮತ್ತು ಪದ್ಧತಿಗಳನ್ನು ಅನುಸರಿಸಿದ್ದಾರೆ.

ಭಾರತದಲ್ಲಿನ ಸಂಸ್ಕೃತಿಯು ಜನರ ಜೀವನ, ಆಚರಣೆಗಳು, ಮೌಲ್ಯಗಳು, ನಂಬಿಕೆಗಳು, ಅಭ್ಯಾಸಗಳು, ಕಾಳಜಿ, ಜ್ಞಾನ, ಇತ್ಯಾದಿಗಳಿಂದ ಎಲ್ಲವೂ ಆಗಿದೆ. ಅಲ್ಲದೆ, ಭಾರತವನ್ನು ಅತ್ಯಂತ ಹಳೆಯ ನಾಗರಿಕತೆ ಎಂದು ಪರಿಗಣಿಸಲಾಗಿದೆ.ಅಲ್ಲಿ ಜನರು ತಮ್ಮ ಹಳೆಯ ಕಾಳಜಿ ಮತ್ತು ಮಾನವೀಯತೆಯನ್ನು ಇನ್ನೂ ಅನುಸರಿಸುತ್ತಾರೆ.ಅನೇಕ ವಿಭಿನ್ನ ಯುಗಗಳು ಬಂದು ಹೋಗಿವೆ ಆದರೆ ನಿಜವಾದ ಸಂಸ್ಕೃತಿಯ ಪ್ರಭಾವವನ್ನು ಬದಲಾಯಿಸಲು ಯಾವುದೇ ಯುಗವು ತುಂಬಾ ಶಕ್ತಿಯುತವಾಗಿಲ್ಲ.

ಕನ್ನಡ ಸಂಸ್ಕೃತಿಯಲ್ಲಿ ಜಾನಪದ ನೃತ್ಯ, ಹಾಡು, ನಾಟಕ, ಕಲೆ, ವೇಷಭೂಷಣಗಳು ಆಚರಣೆಗಳು, ಆಡಂಬರಗಳು ಕನ್ನಡದ ಸಂಸ್ಕೃತಿಯನ್ನು ಹೆಚ್ಚಿಸುತ್ತದೆ.

**ಕನ್ನಡ ಭಾಷೆ ಮತ್ತು ಸಂಸ್ಕೃತಿಯ ಮಹತ್ವ:**

ಭಾರತದ ವಿವಿಧ ಪ್ರಾದೇಶಿಕ ಭಾಷೆಗಳು ಸಂಸ್ಕೃತದ ಪ್ರಭಾವಕ್ಕೆ ಒಳಗಾಗುವುದರೊಂದಿಗೆ ಹಾಗೂ ಸಂಸ್ಕೃತ ಹಾಗೂ ಇತರ ಭಾಷೆಗಳ ನಡುವಣ ಸಂಬಂಧವು ಸದಾಕಾಲ ಆತ್ಮೀಯ, ಸ್ವಾಭಾವಿಕ ಹಾಗೂ

ಗಾಢವಾಗಿದೆ. ಶತಮಾನಗಳ ಕಾಲ, ಸಂಸ್ಕೃತ ಚಿಂತನೆಗಳು ಹಾಗೂ ಸಂಸ್ಕೃತಿಯ ಆದರ್ಶಗಳು ಅವಿರತವಾಗಿ ಹರಿಯುವ ಒಂದು ಮಾರ್ಗವಾಗಿ ಕನ್ನಡ ಸಾಹಿತ್ಯವು ಅಕ್ಷರಶಃ ಕಾರ್ಯ ನಿರ್ವಹಿಸಿತು. ಸಂಸ್ಕೃತ ಚಿಂತನೆ ಹಾಗೂ ಚೈತನ್ಯದ ಸುಸಂಗತವಾದ ಸಮೀಕರಣವು ನಡೆಯದಿದ್ದಲ್ಲಿ, ಕರ್ನಾಟಕ ಸಾಹಿತ್ಯವು ತನ್ನ ಶ್ರೀಮಂತ ವೈವಿಧ್ಯತೆ ಹಾಗೂ ಅಮೋಘ ಪರಿಪೂರ್ಣತೆಯನ್ನು ಪಡೆಯಲು ಸಾಧ್ಯವಾಗುತ್ತಿರಲಿಲ್ಲ. ಕನ್ನಡ ಬರಹಗಾರರಿಗೆ ಸಂಸ್ಕೃತವು ಮಾನದಂಡವನ್ನು ಸ್ಥಾಪಿಸಿ ಉತ್ತಮ ಬರವಣಿಗೆಯ ನಿಯಮಗಳನ್ನು ಒದಗಿಸಿತು.ತತ್ವಚಿಂತನೆ, ನೈತಿಕತೆ, ಕಾವ್ಯ ಹಾಗೂ ಸಾಹಿತ್ಯಕ, ವಿಜ್ಞಾನಗಳಲ್ಲಿ ಸಂಸ್ಕೃತ ಸಾಹಿತ್ಯಕ್ಕೆ ಕರ್ನಾಟಕವು ಮೆಚ್ಚುವಂತಹ ಕೊಡುಗೆಯನ್ನು ನೀಡಿದೆ.

ಕರ್ನಾಟಕದ ಪ್ರಾರಂಭಿಕ ಜೈನ ಬರಹಗಾರರು ಮೂಲತಃ ಪ್ರಾಕೃತದಲ್ಲಿ ಬರೆದರಾದರೂ ನಂತರ ಸಂಸ್ಕೃತದಲ್ಲಿ ಬರೆದಿದ್ದಾರೆ. ಕನ್ನಡದಲ್ಲಿ ಬರವಣಿಗೆಯನ್ನು ಪ್ರಾರಂಭಿಸುವ ಮುನ್ನ, ಅನೇಕ ಪ್ರಾಕೃತ ಹಾಗೂ ಸಂಸ್ಕೃತ ಕೃತಿಗಳನ್ನು ಕರ್ನಾಟಕದ ಜೈನ ವಿದ್ವಾಂಸರು ರಚಿಸಿದರು. ಹೊಯ್ಸಳರ ಕಾಲದಲ್ಲಿ, ಸಂಸ್ಕೃತ ಕಾವ್ಯಕ್ಕೆ ವಿದ್ಯಾಚಕ್ರವರ್ತಿ ಕುಟುಂಬವು ಗಣನೀಯ ಕೊಡುಗೆಗಳನ್ನು ನೀಡಿತು

ತುಳು ಭಾಷೆಯು, ದ್ರಾವಿಡ ಕುಲಕ್ಕೆ ಸೇರಿದ ಪುರಾತನ ಭಾಷೆಗಳಲ್ಲಿ ಒಂದು. ತುಳು ಮಾತನಾಡುವ ತುಳುವ ಜನರನ್ನು ದಕ್ಷಿಣ ಕನ್ನಡ, ಉಡುಪಿ ಹಾಗೂ ಕೇರಳದ ಕಾಸರಗೋಡು ಜಿಲ್ಲೆಯಲ್ಲಿ ಬಹುತೇಕವಾಗಿ ಕಾಣಬಹುದು. ಉತ್ತರದಲ್ಲಿ ಕಲ್ಯಾಣಪುರ ನದಿ, ಪಶ್ಚಿಮದಲ್ಲಿ ಅರಬ್ಬಿ ಸಮುದ್ರ, ಪೂರ್ವದಲ್ಲಿ ಪಶ್ಚಿಮ ಘಟ್ಟ ಹಾಗೂ ದಕ್ಷಿಣದಲ್ಲಿ ಪಯಸ್ವಿನಿ / ಚಂದ್ರಗಿರಿ ನದಿಯಿಂದ ತುಳುನಾಡು ಆವೃತವಾಗಿದೆ. ತುಳುವಿಗೆ ತನ್ನದೇ ಆದ ಭಾಷಾ ವೈಚಿತ್ರ್ಯಗಳಿದ್ದರೂ ಕನ್ನಡ ಹಾಗೂ ಇತರ ದ್ರಾವಿಡ ಭಾಷೆಗಳೊಂದಿಗೆ ಅನೇಕ ಸಾಮಾನ್ಯ ಗುಣಲಕ್ಷಣಗಳನ್ನು ಹಂಚಿಕೊಂಡಿದೆ. ಪಾಡ್ದನಗಳು, ಸಂದಿ, ಕಬಿತ, ಉರಳು, ಪಡಿಪು, ನೃತ್ಯ–ಪದ್ಯ, ಗಾದೆ, ಒಗಟು, ಜೋಗುಳ, ಅಜ್ಜಿಕಥೆ, ಇತ್ಯಾದಿಯಾಗಿ ವಿಸ್ತೃತವಾದ ಜಾನಪದ ಸಂಪ್ರದಾಯವನ್ನು ಅದು ಹೊಂದಿದೆ.

ಕನ್ನಡ ಭಾಷೆ ಮತ್ತು ಸಂಸ್ಕೃತಿ ಉತ್ಕೃಷ್ಟವಾದದ್ದು, ಶ್ರೀಮಂತವಾದದ್ದು. ವಿಪುಲವಾಗಿ ದೊರಕುವ ಸಾಹಿತ್ಯ ಕೃತಿಗಳು, ಐತಿಹಾಸಿಕ ದಾಖಲೆಗಳು ಈ ಅಂಶವನ್ನು ದೃಢೀಕರಿಸುತ್ತವೆ.ಅನೇಕ ವಿಭಿನ್ನ ಯುಗಗಳು ಬಂದು ಹೋಗಿವೆ ಆದರೆ ನಿಜವಾದ ಸಂಸ್ಕೃತಿಯ ಪ್ರಭಾವವನ್ನು ಬದಲಾಯಿಸಲು ಯಾವುದೇ ಯುಗವು ತುಂಬಾ ಶಕ್ತಿಯುತವಾಗಿಲ್ಲ. ಆದ್ದರಿಂದ, ಯುವ ಪೀಳಿಗೆಯ ಸಂಸ್ಕೃತಿಯು ಇನ್ನೂ ಹಳೆಯ ತಲೆಮಾರುಗಳೊಂದಿಗೆ ಸಂಪರ್ಕ ಹೊಂದಿದೆ. ಅಲ್ಲದೆ, ನಮ್ಮ ಜನಾಂಗೀಯ ಸಂಸ್ಕೃತಿಯು ಯಾವಾಗಲೂ ಹಿರಿಯರನ್ನು ಗೌರವಿಸಲು, ಉತ್ತಮವಾಗಿ ವರ್ತಿಸಲು, ಅಸಹಾಯಕರನ್ನು ನೋಡಿಕೊಳ್ಳಲು ಮತ್ತು ನಿರ್ಗತಿಕರಿಗೆ ಮತ್ತು ಬಡವರಿಗೆ ಸಹಾಯ ಮಾಡಲು ನಮಗೆ ಕಲಿಸುತ್ತದೆ.

ಕನ್ನಡ ಭಾಷೆ ಮತ್ತು ಸಂಸ್ಕೃತಿಗೆ ಭಾರತದಲ್ಲಿ ಉಜ್ವಲವಾದ ಸ್ಥಾನವಿದೆ. ಸಾವಿರ ವರ್ಷಕ್ಕೂ ಮಿಗಿಲಾದ ಇತಿಹಾಸ ಹೊಂದಿರುವ ಶ್ರೀಮಂತವಾದ, ವಿಶಿಷ್ಟವಾದ ಈ ಸಂಸ್ಕೃತಿಗೆ ಮನಸೋಲಾದವರೆ ಇಲ್ಲ. ಇತಂಹ ಭಾಷೆ ಮತ್ತು ಸಂಸ್ಕೃತಿಯನ್ನು ಗೌರವದಿಂದ ಕಾಪಾಡಿಕೊಂಡು ಹೋಗುವುದು ನಮ್ಮೆಲ್ಲಾ ಕನ್ನಡಿಗರ ಅಧ್ಯಾ ಕರ್ತವ್ಯವಾಗಿದೆ.

**ರಶ್ಮಿ ಎಂ ಮತ್ತು ಮೇಘನಾ ವಿ., ಪ್ರಶಿಕ್ಷಣಾರ್ಥಿಗಳು**

## ಜ್ಞಾನಪೀಠ ಪ್ರಶಸ್ತಿ



ಜ್ಞಾನಪೀಠ ಪ್ರಶಸ್ತಿ ಭಾರತದ ಸಾಹಿತಿಗಳಿಗೆ ಸಲ್ಲುವ ಅತ್ಯಂತ ಪ್ರತಿಷ್ಠಿತ ಪ್ರಶಸ್ತಿ. ಈ ಪ್ರಶಸ್ತಿಯು ಭಾರತದ ಸಂವಿಧಾನದ ಎಂಟನೇ ಅನುಸೂಚಿಗಳಲ್ಲಿ ಉಲ್ಲೇಖವಾಗಿರುವ 22 ಭಾಷೆಗಳಿಗೆ ಅತ್ಯುತ್ತಮ ಸಾಹಿತ್ಯ ಕೃತಿಯನ್ನು ಅಥವಾ ಸಮಗ್ರ ಸಾಹಿತ್ಯದ ಕೊಡುಗೆಯನ್ನು ನೀಡಿದ ಭಾರತೀಯ ನಾಗರಿಕನಿಗೆ ಲಭಿಸುವುದು. ಸಾಹು ಜೈನ್ಪರಿವಾರದವರು, ಈ ಪ್ರಶಸ್ತಿಯನ್ನು ಮೇ 22, 1961 ರಲ್ಲಿ ಸ್ಥಾಪಿಸಿದರು. ಈ ಪ್ರಶಸ್ತಿಯನ್ನು ಪ್ರಪ್ರಥಮವಾಗಿ 1965 ರಲ್ಲಿ ಮಲೆಯಾಳಂ ಲೇಖಕ ಜಿ. ಶಂಕರ ಕುರುಪರಿಗೆ ಪ್ರದಾನ ಮಾಡಲಾಯಿತು. ವಿಜೇತರಿಗೆ ಪ್ರಶಸ್ತಿ ಫಲಕ, 11 ಲಕ್ಷ ರೂಪಾಯಿ ಚೆಕ್ಹಾಗೂ ವಾಗ್ದೇವಿಯ ಕಂಚಿನ ವಿಗ್ರಹವನ್ನು ನೀಡಿ ಗೌರವಿಸಲಾಗುವುದು.

ಈ ಪ್ರಶಸ್ತಿಯನ್ನು ಸರಕಾರ ನೀಡುತ್ತದೆ ಎಂಬ ತಪು ಕಲ್ಪನೆಯೂ ವ್ಯಾಪಕವಾಗಿದೆ. ವಾಸ್ತವದಲ್ಲಿ ಈ ಪ್ರಶಸ್ತಿಯನ್ನು ನೀಡುವವರು ಜ್ಞಾನಪೀಠ ಟ್ರಸ್ಟ್. ಟೈಂಸ್ ಆಫ್ ಇಂಡಿಯಾದ ಒಡೆತನವನ್ನು ಹೊಂದಿರುವ ಜೈನ ಕುಟುಂಬ ಜ್ಞಾನಪೀಠ ಟ್ರಸ್ಟಿನ ಸ್ಥಾಪಕರು. ಈಗಲೂ ಅದರ ಸದಸ್ಯರಲ್ಲಿ ಹೆಚ್ಚಿನವರು ಈ ಕುಟುಂಬಕ್ಕೆ ಸೇರಿದ್ದಾರೆ. 1982ರಿಂದ, ಈ ಪ್ರಶಸ್ತಿಯನ್ನು ಭಾರತೀಯ ಸಾಹಿತ್ಯಕ್ಕೆ ಸಮಗ್ರ ಕೊಡುಗೆಯನ್ನು ನೀಡಿದ ಲೇಖಕರಿಗೆ ಸಂದಾಯವಾಗುತ್ತಿದೆ. ಈವರೆಗೆ ಹಿಂದಿ ಸಾಹಿತಿಗಳು ಹನ್ನೊಂದು ಪ್ರಶಸ್ತಿಗಳನ್ನು ಪಡೆದು ಅತಿ ಹೆಚ್ಚು ಜ್ಞಾನಪೀಠ ಪ್ರಶಸ್ತಿ ಪಡೆದ ಭಾಷೆಯನ್ನಾಗಿ ಮಾಡಿದ್ದಾರೆ. ಕನ್ನಡ ಭಾಷೆಯು ಎಂಟು ಪ್ರಶಸ್ತಿಯನ್ನು ಪಡೆದು ಎರಡನೆ ಸ್ಥಾನದಲ್ಲಿದೆ. 1982 ರಿಂದ ಒಂದು ಕೃತಿಯ ಬದಲಿಗೆ ಸಮಗ್ರ ಸಾಹಿತ್ಯದ ಕೊಡುಗೆಯನ್ನು ಗಮನಿಸಿ ನೀಡಲಾಗುತ್ತಿದೆ. ಕನ್ನಡ ಶ್ರೀಮಂತಭಾಷೆ. ಸಾವಿರಾರು ವರುಷಗಳ ಸಾಹಿತ್ಯ ಪರಂಪರೆ ಕನ್ನಡಕ್ಕಿದೆ. ಕನ್ನಡ ಭಾಷೆಯ ಸೌಂದರ್ಯಕ್ಕೆ ಮತ್ತು ಹಿರಿಮೆಗೆ ಮತ್ತೊಂದು ಹೆಗ್ಗಳಿಕೆ ಎಂದರೆ ಹಿಂದಿ ಭಾಷೆ ನಂತರ ಅತಿ ಹೆಚ್ಚು ಜ್ಞಾನಪೀಠ ಪ್ರಶಸ್ತಿಯನ್ನು ತನ್ನದಾಗಿಸಿ ಕೊಂಡಿರುವುದು. ಈವರೆಗೆ ಎಂಟು ಕನ್ನಡ ಸಾಹಿತಿಗಳು ಜ್ಞಾನಪೀಠ ಪ್ರಶಸ್ತಿಯಿಂದ ಪುರಸ್ಕೃತಗೊಂಡು, ಕನ್ನಡವನ್ನು ಅತೀ ಹೆಚ್ಚು ಜ್ಞಾನಪೀಠ ಪ್ರಶಸ್ತಿ ಪಡೆದ ಭಾಷೆಯನ್ನಾಗಿ ಮಾಡಿದ್ದಾರೆ. ಕನ್ನಡಕ್ಕೆ ಮೊಟ್ಟ ಮೊದಲು ಜ್ಞಾನಪೀಠ ಪ್ರಶಸ್ತಿಯನ್ನು ತಂದುಕೊಟ್ಟವರು

**ಕೆ. ವಿ. ಪುಟ್ಟಪ್ಪನವರು.** ಇವರು 'ಕುವೆಂಪು' ಎಂಬ ಕಾವ್ಯನಾಮದಿಂದ ಪ್ರಸಿದ್ಧರು. ಇವರ ಪೂರ್ಣ ಹೆಸರು ಕುಪ್ಪಳ್ಳಿ ವೆಂಕಟಪ್ಪ ಪುಟ್ಟಪ್ಪ. ಇವರ "ಶ್ರೀರಾಮಾಯಣದರ್ಶನಂ" ಕೃತಿಗಾಗಿ ಕೇಂದ್ರ ಸಾಹಿತ್ಯ ಅಕಾಡೆಮಿ 1968 ರಲ್ಲಿ 'ಜ್ಞಾನಪೀಠ ಪ್ರಶಸ್ತಿ'ಯನ್ನು ನೀಡಿ ಗೌರವಿಸಿತು.

**ದ.ರಾ. ಬೇಂದ್ರೆ:**

ಅಂಬಿಕಾತನಯದತ್ತ ಎಂಬ ಕಾವ್ಯನಾಮ ಹೊಂದಿದ್ದ ಕನ್ನಡದವರ ಕವಿ ದತ್ತಾತ್ರೇಯ ರಾಮಚಂದ್ರ ಬೇಂದ್ರೆ (ದ.ರಾ. ಬೇಂದ್ರೆ)ಯವರು ಧಾರವಾಡದಲ್ಲಿ 1886ರ ಜನವರಿ 31ರಂದು ಜನಿಸಿದರು. "ನಾಕುತಂತಿ" ವರಕವಿ ದ.ರಾ.ಬೇಂದ್ರೆಯವರ ಕವನಸಂಕಲನ. ಇದಕ್ಕಾಗಿ ಬೇಂದ್ರೆಯವರಿಗೆ 1973ರಲ್ಲಿ ಜ್ಞಾನಪೀಠ ಪ್ರಶಸ್ತಿದೊರಕಿತು.

**ಶಿವರಾಮಕಾರಂತ:**

ಉಡುಪಿ ಜಿಲ್ಲೆಯ ಕುಂದಾಪುರ ತಾಲೂಕು ಸಮೀಪದ ಕೋಟದಲ್ಲಿ 1902 ಅಕ್ಟೋಬರ್ 10 ರಂದು ಜನಿಸಿದ್ದ ಶಿವರಾಮಕಾರಂತರು, ಪ್ರೌಢಶಿಕ್ಷಣವನ್ನಷ್ಟೇ ಪಡೆದಿದ್ದರು. ಇವರ 'ಮೂಕಜ್ಜಿಕನಸುಗಳು' ಕೃತಿಗೆ ಜ್ಞಾನಪೀಠ ಪ್ರಶಸ್ತಿದೊರೆತಿದೆ.

**ಮಾಸ್ತಿ ವೆಂಕಟೇಶ ಅಯ್ಯಂಗಾರ:**

ಕನ್ನಡದ ಜ್ಞಾನಪೀಠ ಪ್ರಶಸ್ತಿ ವಿಜೇತರಲ್ಲೊಬ್ಬರಾದ 'ಸಣ್ಣಕಥೆಗಳಜನಕ' ಎಂದೇ ಪ್ರಸಿದ್ಧರಾದ ಮಾಸ್ತಿವೆಂಕಟೇಶ ಅಯ್ಯಂಗಾರರು 'ಶ್ರೀನಿವಾಸ' ಎಂಬ ಕಾವ್ಯನಾಮದಿಂದ ಸುಪ್ರಸಿದ್ಧರಾಗಿದ್ದರು. ಕನ್ನಡ ಸಾಹಿತ್ಯಕ್ಕೆ ಇವರ ಸಮಗ್ರ ಕೊಡುಗೆಗಾಗಿ ಜ್ಞಾನಪೀಠ ಲಭಿಸಿದೆ.

**ಡಾ. ವಿ. ಕೃ. ಗೋಕಾಕ್:**

ಕನ್ನಡ ಸಾಹಿತ್ಯ ಲೋಕದ ದಿಗ್ಗಜರಲ್ಲಿ ಡಾ. ವಿ. ಕೃ. ಗೋಕಾಕ್ ಒಬ್ಬರು. ಇವರು ಸಾಹಿತ್ಯ ಕ್ಷೇತ್ರದಲ್ಲಿಯಂತೆಯೇ ಭಾಷಾ ಕ್ಷೇತ್ರಕ್ಕೂ ಅಪಾರ ಕೊಡುಗೆ ನೀಡಿದವರು. ವಿನಾಯಕ ಕೃಷ್ಣಗೋಕಾಕ್ ಅವರು ವಿ.ಕೃ.ಗೋಕಾಕ್ ಎಂದೇ ಸುಪರಿಚಿತರಾಗಿದ್ದರು. ಕನ್ನಡ ಸಾಹಿತ್ಯಕ್ಕೆ ಇವರ ಸಮಗ್ರ ಕೊಡುಗೆಗಾಗಿ ಜ್ಞಾನಪೀಠ ಲಭಿಸಿದೆ.

**ಡಾ. ಯು. ಆರ್. ಅನಂತಮೂರ್ತಿ:**

ಕನ್ನಡಕ್ಕೆ ಆರನೆಯ ಜ್ಞಾನಪೀಠ ಪ್ರಶಸ್ತಿಯನ್ನು ತಂದು ಕೊಟ್ಟವರು ಡಾ. ಯು.ಆರ್. ಅನಂತಮೂರ್ತಿಯವರು. ಅನಂತಮೂರ್ತಿಯವರು ಸಣ್ಣಕತೆಗಾರರಾಗಿ ಹಾಗೂ ಕಾದಂಬರಿಕಾರರಾಗಿ ಪ್ರಸಿದ್ಧರಾಗಿದ್ದಾರೆ. ಕನ್ನಡ ಸಾಹಿತ್ಯಕ್ಕೆ ಇವರ ಸಮಗ್ರ ಕೊಡುಗೆಗಾಗಿ ಜ್ಞಾನಪೀಠ ಲಭಿಸಿದೆ.

**ಗಿರೀಶ್ ಕಾರ್ನಾಡ್:**

ಗಿರೀಶ್ ಕಾರ್ನಾಡ್: 1938ರಮೇ 19ರಂದು ಮಹಾರಾಷ್ಟ್ರದ ಮಾಥೆರ್ನ ಎಂಬಲ್ಲಿ ಜನಿಸಿದರು. ಗಿರೀಶರ ಮೊದಲನೆ ಕೃತಿ 'ಯಾಯಾತಿ' ಎಂಬ ನಾಟಕ. ಈ ನಾಟಕವು ಇವರಿಗೆ ದೊಡ್ಡಮಟ್ಟದಲ್ಲಿ ಪ್ರಶಂಸೆ ಮತ್ತು ಪ್ರಚಾರವನ್ನು ತಂದುಕೊಟ್ಟಿತು. ಕನ್ನಡ ಸಾಹಿತ್ಯಕ್ಕೆ ಇವರ ಸಮಗ್ರ ಕೊಡುಗೆಗಾಗಿ ಜ್ಞಾನಪೀಠ ಲಭಿಸಿದೆ.

**ಡಾ. ಚಂದ್ರಶೇಖರ ಕಂಬಾರ:**

ಬೆಳಗಾವಿ ಜಿಲ್ಲೆಯ ಹುಕ್ಕೇರಿ ತಾಲ್ಲೂಕಿನ ಘೋಡಗೇರಿಯಲ್ಲಿ 2 ಜನವರಿ 1937ರಂದು ಡಾ. ಚಂದ್ರಶೇಖರ ಕಂಬಾರರು ಜನಿಸಿದರು. ಕನ್ನಡ ಸಾಹಿತ್ಯಕ್ಕೆ ಇವರ ಸಮಗ್ರ ಕೊಡುಗೆಗಾಗಿ ಜ್ಞಾನಪೀಠ ಲಭಿಸಿದೆ.

ಪ್ರತಿಯೊಂದು ಪ್ರಶಸ್ತಿಗೂ ಅದರದ್ದೇ ಆದ ಪ್ರಾಮುಖ್ಯತೆ ಹೊಂದಿದೆ. ಹಾಗೆಯೇ ಜ್ಞಾನಪೀಠ ಪ್ರಶಸ್ತಿಯೂ ಕೂಡ ತನ್ನದೇ ಆದ ಪ್ರಾಮುಖ್ಯತೆಯನ್ನು ಹೊಂದಿದೆ. ಮೊಸರು ನಮ್ಮ ಕನ್ನಡದ ಅನೇಕ ಕವಿಗಳು ಈ ಪ್ರಶಸ್ತಿಯನ್ನು ತಮ್ಮ ಮುಡಿಗೇರಿಸುವ ಮೂಲಕ ಕನ್ನಡಕ್ಕೆ ಹೆಮ್ಮೆಯನ್ನು ತಂದು ಕೊಟ್ಟಿದ್ದಾರೆ. ಇಂತಹ ಪ್ರಶಸ್ತಿಗಳು ಸಾಹಿತ್ಯ ಕ್ಷೇತ್ರವನು ್ನಇನ್ನಷ್ಟು ಹೆಚ್ಚು ಮೆರಗುಗೊಳಿಸಲು ಮತ್ತು ಸಾಹಿತ್ಯಗಳಿಗೆ ಸಾಹಿತ್ಯ ರಚಿಸಲು ಪ್ರೋತ್ಸಾಹ ನೀಡುತ್ತದೆ.

**ಅಕ್ಷತಾ ಎನ್. ಬಿ ಮತ್ತು ರಚನಾ ಹೆಚ್ ಎಸ್., ಪ್ರಶಿಕ್ಷಣಾರ್ಥಿಗಳು**

# ಬೆಂಗಳೂರಿನ ನಿರ್ಮಾತೃ ಕೆಂಪೇಗೌಡ



ಕೆಂಪೇಗೌಡರ ವಂಶಸ್ಥರನ್ನು ಯಲಹಂಕ ಪ್ರಭುಗಳೆಂದೇ ಕರೆಯಲಾಗುತ್ತದೆ. ಯಲಹಂಕ ನಾಡು ವಿಜಯನಗರದ ವಿಕೇಂದ್ರೀಕೃತ ಆಡಳಿತ ವ್ಯವಸ್ಥೆಯ ಫಲವಾಗಿ ಉದಯಿಸಿತು. ಕರ್ನಾಟಕದ ದಕ್ಷಿಣ ಭಾಗದಲ್ಲಿ ಕ್ರಿ.ಶ. ಸುಮಾರು 1420 ರಿಂದ 1728ರವರೆಗೆ ಆವತಿ, ಯಲಹಂಕ, ಬೆಂಗಳೂರು, ಮಾಗಡಿ ಮತ್ತು ಸಾವನದುರ್ಗಗಳನ್ನು ಪ್ರಮುಖ ಆಡಳಿತ ಕೇಂದ್ರಗಳನ್ನಾಗಿ ಮಾಡಿಕೊಂಡು ಆಳ್ವಿಕೆ ನಡೆಸಿದ ಯಲಹಂಕ ನಾಡಪ್ರಭುಗಳು ರಾಜ್ಯದ ಇತಿಹಾಸದಲ್ಲಿ ಪ್ರಮುಖ ಸ್ಥಾನವನ್ನು ಪಡೆದಿದ್ದಾರೆ.

ನಾಡಪ್ರಭುಗಳ ಬಗ್ಗೆ ಅಲ್ಲಲ್ಲಿ ತೆಳುವಾದ ಸುಳುಹುಗಳು ವಿಜಯನಗರದ ಅರಸರ ಕಾಲದ ಶಾಸನದಲ್ಲಿ ಕಂಡುಬರುತ್ತದೆ. ಆದರೆ, ಕೆಂಪೇಗೌಡರ ವಂಶಸ್ಥರ ಮೂಲಪುರುಷ, ಮೂಲಸ್ಥಳ ಇವುಗಳ ಬಗ್ಗೆ ವಿದ್ವಾಂಸರಲ್ಲಿ ಏಕಾಭಿಪ್ರಾಯ ಇರುವುದಿಲ್ಲ. ಯಲಹಂಕ ನಾಡಪ್ರಭುಗಳ ಬಗ್ಗೆ ಖಚಿತವಾದ ಐತಿಹಾಸಿಕ ಸಾಕ್ಷಾಧಾರಗಳು ದೊರೆಯದಿರುವುದು ಇದಕ್ಕೆ ಕಾರಣವಾಗಿದೆ. ಜನಪದ ಮೌಖೀಕ ಕಥನಗಳಲ್ಲಿ ಹರಿದು ಬಂದ ವಿಷಯಗಳನ್ನೆ ಕೆಲವರು ತಮ್ಮ ಕೃತಿಗಳಲ್ಲಿ ಆಧಾರವೆಂಬಂತೆ ಪ್ರತಿಪಾದಿಸಿದ್ದಾರೆ. ಇಲ್ಲಿಯೂ ಅಭಿಪ್ರಾಯಬೇಧಗಳು ಗೋಚರವಾಗುತ್ತವೆ.

ವಿಶ್ವ ಭೂಪಟದ ಅತಿ ಮುಖ್ಯ ನಗರಗಳಲ್ಲೊಂದು ಎಂಬಂತೆ ಗುರುತಿಸಿಕೊಂಡಿರುವ ಭಾರತದ ದೇಶದ ಅತಿದೊಡ್ಡ ನಗರವೆಂಬ ಖ್ಯಾತಿಯುಳ್ಳ ನಮ್ಮ ಬೆಂಗಳೂರು ಮಹಾನಗರದ ಇತಿಹಾಸವನ್ನು ಕೆದಕುತ್ತಾ ಹೋದಂತೆ ನಮಗೆ ಮಹತ್ವದ ಸಂಗತಿಗಳು ಬೆಳಕು ಚೆಲ್ಲುತ್ತವೆ. ಅವುಗಳಲ್ಲಿ ಪ್ರಮುಖವಾಗಿ ಈ ಸುಂದರ ನಗರ ನಿರ್ಮಾಣಕ್ಕೆ ಕಾರಣಕರ್ತರ ಹೆಸರುಗಳು ದೊರೆಯುತ್ತವೆ.

ಯಲಹಂಕ ಪ್ರಭು ಹಿರಿಯ ಅಥವಾ ಒಂದನೇ ಕೆಂಪೇಗೌಡರು ಹಾಗೂ ಕೆಂಪೇಗೌಡರ ಮೊಮ್ಮಗ ಮಾಗಡಿಯ ಕೆಂಪೇಗೌಡ ಅಥವಾ ಇಮ್ಮಡಿ ಕೆಂಪೇಗೌಡ. ದಾಖಲೆಗಳ ಪ್ರಕಾರ, ಗಂಗರ ಅವನೀತನ ಕಾಲದ ಶಾಸನ (ಕ್ರಿ.ಶ. 469–520)ದ ಪ್ರಕಾರ ಗಂಗರಸರು ಕೆಂಗೇರಿಯ ಬಳಿ ತಮ್ಮ ಬೆಂಗಾವಲು ಆಳುಗಳಿಗಾಗಿ "ಬೆಂಗಾವಲಾಳೂರು" ಎಂಬ ಊರನ್ನು ಕಟ್ಟಿದರೆಂಬ ಮಾಹಿತಿಯೂ ಇದೆ. ಹಾಗೇಯೇ ಯಲಹಂಕ ಪ್ರಭು ಕೆಂಪೇಗೌಡರ ತಾಯಿ ಲಿಂಗಮ್ಮಾಂಬೆಯ ಊರು ಕೊಡಿಗೇಹಳ್ಳಿಯ ಬಳಿ ಇದ್ದ "ಬೆಂಗುಳೂರು".

ಅದೇ ಊರಿನ ಸೋದರ ಮಾವನ ಮಗಳು ಚಿನ್ನಾಂಬೆಯನ್ನೇ ಮದುವೆಯಾಗಿದ್ದ. ತನ್ನ ಬಾಲ್ಯದ ನೆನಪುಗಳಿಂದ ಹೊರಬಾರದ ಆತ ಅದೇ ಪ್ರೀತಿಯ ಬೆಸುಗೆಯಿಂದ ತಾನು ಕಟ್ಟಿದ ಊರಿಗೆ "ಬೆಂಗುಳೂರು' ಎಂದೇ ಹೆಸರಿಟ್ಟ ಎಂದು ಚರಿತ್ರಕಾರರು ಅಭಿಪ್ರಾಯಪಡುತ್ತಾರೆ. ಮಡಿವಾಳದ ಸಮೀಪದ ತಾವರೆಕೆರೆಯ ಸೋಮೇಶ್ವರ ದೇವಾಲಯದಲ್ಲಿರುವ 1247ರ ತಮಿಳು ಶಾಸನದಲ್ಲಿ "ಬೆಂಗುಳೂರು' ಎಂಬ ಉಲ್ಲೇಖವಿದೆ.

ಹಿರಿಯ ಕೆಂಪೇಗೌಡರು ಕೆಂಪನಂಜೇಗೌಡರ ಮಗನಾಗಿದ್ದು, ವಿಜಯನಗರ ಸಾಮ್ರಾಜ್ಯದ ಸಾಮಂತರಾಗಿದ್ದವರು. ಅವರು ಇಂದಿನ ಕರ್ನಾಟಕದ ರಾಜಧಾನಿಯಾಗಿರುವ ಬೆಂಗಳೂರನ್ನು ಸ್ಥಾಪಿಸಿದವರು. 1537ರಲ್ಲಿ ಎಂದರೆ 480 ವರ್ಷಗಳ ಹಿಂದೆ ಅವರು ತಮ್ಮ ಕನಸಿನ ಬೆಂಗಳೂರನ್ನು ಕಟ್ಟಿ

ಬೆಳೆಸಿದರು. ಬೆಂಗಳೂರು ನಗರ ಇಂದು ಭಾರತದಲ್ಲಿ ಮಾತ್ರವಲ್ಲದೆ ಜಾಗತಿಕ ಮಟ್ಟದಲ್ಲಿ ಮಾನ್ಯತೆ ಪಡೆದಿದೆ. ಎಲ್ಲ ಜಾತಿ, ಮತ, ಧರ್ಮ, ಪಂಥಗಳಿಗೆ ಸೇರಿದ ಜನರನ್ನು ಇದು ಒಳಗೊಂಡಿದೆ.

ಎಲ್ಲರನ್ನೂ ಎಲ್ಲವನ್ನೂ ಸದಾ ತನ್ನೆಡೆಗೆ ಬೆಂಗಳೂರು ಸೆಳೆಯುತ್ತಿರುವ ಕಾರಣ, ಇಲ್ಲಿಯ ಆಹ್ಲಾದಕರ ಹವಾಗುಣ. ಇದಕ್ಕೆ ಬಹುಮುಖ್ಯ ಕಾರಣ ಬೆಂಗಳೂರು ನಗರವನ್ನು ಆಯಕಟ್ಟಿನ ಸ್ಥಳದಲ್ಲಿ ಸ್ಥಾಪಿಸಿರುವುದು. ಬೆಂಗಳೂರು ಸಮುದ್ರ ಮಟ್ಟಕ್ಕಿಂತ ಮೂರು ಸಾವಿರ ಅಡಿಗಳ ಮೇಲಿದ್ದು ಸುತ್ತಲೂ ಬಹು ಸಂಖ್ಯೆಯ ಕೆರೆಗಳನ್ನು ಹೊಂದಿತ್ತು. ಇಂತಹ ಪ್ರಶಸ್ತವಾದ ಸ್ಥಳದಲ್ಲಿ ಬೆಂಗಳೂರನ್ನು ಸ್ಥಾಪಿಸಿದ ಕೀರ್ತಿ ಹಿರಿಯ ಕೆಂಪೇಗೌಡರಿಗೆ ಸಲ್ಲುತ್ತದೆ.

ಇತಿಹಾಸದಲ್ಲಿ ಹಿರಿಯ ಕೆಂಪೇಗೌಡ ಅಥವಾ 1ನೇ ಕೆಂಪೇಗೌಡರನ್ನು ಬೆಂಗಳೂರು ನಗರ ನಿರ್ಮಾತೃ ಎಂದೇ ಗುರುತಿಸಲಾಗುತ್ತದೆ. ಇಂದು ಬೆಂಗಳೂರು ಜಾಗತಿಕ ಮಟ್ಟದಲ್ಲಿ ಗಮನ ಸೆಳೆದಿದೆ ಎಂದರೆ ಅದಕ್ಕೆ ಕಾರಣ ಕೆಂಪೇಗೌಡರೇ. 1531ರಿಂದ 1569ರವರೆಗೆ ಸುಮಾರು ಮೂವತ್ತೆಂಟು ವರ್ಷಗಳ ದೀರ್ಘ ಆಳ್ವಿಕೆಯಲ್ಲಿ ಕೆಂಪೇಗೌಡರು ದೂರದರ್ಶಿತ್ವ, ಕರ್ತೃತ್ವ ಶಕ್ತಿ, ರಾಜಕೀಯ ನೈಪುಣ್ಯತೆ, ಅಭಿವೃದ್ಧಿಯ ಮುನ್ನೋಟ, ವ್ಯಾವಹಾರಿಕ ಮನೋಭಾವ, ಕಲೆಗೆ ನೀಡಿದ ಪ್ರೋತ್ಸಾಹ ಮುಂತಾದ ಅಂಶಗಳಿಂದ ಚರಿತ್ರೆಯ ಪುಟಗಳಲ್ಲಿ ಅಮರರಾಗಿದ್ದಾರೆ.

ಅಂದು ಕೆಂಪೇಗೌಡರು ಸ್ಥಾಪಿಸಿದ ಬೆಂಗಳೂರು ಇಂದು ವಿರಾಟ್ ಸ್ವರೂಪದಲ್ಲಿ ಬೆಳೆದು ಅವರು ಕಂಡ ಕನಸುಗಳನ್ನು ನನಸಾಗಿಸಿ ವಿಶ್ವಮಾನ್ಯತೆ ಪಡೆದುವುದರಿಂದ ನಗರದ ಬೆಳವಣಿಗೆಯ ಜೊತೆಗೆ ಸ್ಥಾಪಕ ಕೆಂಪೇಗೌಡರ ಹೆಸರು ಕೂಡಾ ಜಗದ್ವಿಖ್ಯಾತವಾಗಿದೆ. ಬೆಂಗಳೂರು ಅಂದಿನ ಕಾಲದಲ್ಲೂ ಒಂದು ಪ್ರಮುಖ ವಾಣಿಜ್ಯ ಕೇಂದ್ರವಾಗಿತ್ತು. ಇಂದೂ ಸಹ ಅದು ಪ್ರಮುಖ ವಾಣಿಜ್ಯ ಕೇಂದ್ರವಾಗಿದೆ. ಇದಕ್ಕೆ ಕಾರಣ ಕೆಂಪೇಗೌಡರ ದೂರದರ್ಶಿತ್ವ.

ಇಂತಹ ಅವರ ವಿವೇಚನಾಯುತ ಯೋಜನೆಗೆ ಮತ್ತು ಕರ್ತೃತ್ವ ಶಕ್ತಿಯುಳ್ಳ ವ್ಯಕ್ತಿತ್ವಕ್ಕೆ ಜನತೆ ಇಂದಿಗೂ ಅವರನ್ನು ಋಣಪೂರ್ವಕವಾಗಿ ನೆನೆಯುತ್ತಲೇ ಇರುತ್ತದೆ. ಅವುಗಳಿಗೆ ಉದಾಹರಣೆ ಎಂಬಂತೆ ಇಂದು ಬೆಂಗಳೂರಿನ ಹೊರಭಾಗದಲ್ಲಿ ತಲೆಯೆತ್ತಿರುವ, ಅಂತರರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಗೌರವ ಪೂರ್ವಕವಾಗಿ ಅವರ ಹೆಸರನ್ನೇ ಇಡಲಾಗಿದೆ. ಬೆಂಗಳೂರಿನ ಒಳಗೂ ಸಹ ಅವರ ಹೆಸರಿನಲ್ಲಿ ಹಲವಾರು ಸಂಘ ಸಂಸ್ಥೆಗಳು ಗೌರವ ಸ್ಮಾರಕಗಳಂತೆ ಸದಾ ನಿರ್ಮಾತೃವಿನ ಹೆಸರನ್ನು ನೆನಪಿಸಿ ಕೊಂಡಾಡುತ್ತಿವೆ.

ಕೆಂಪೇಗೌಡರ ಜಯಂತ್ಯುತ್ಸವದ ಅಂಗವಾಗಿ ಇಂದಿನ ಸರ್ಕಾರ ಬೆಂಗಳೂರಿನ ಗತ ವೈಭವ ಸಾರುವ ಹಾಗೂ ಬೆಂಗಳೂರು ನಿರ್ಮಾಣಕ್ಕೆ ಅಮೂಲ್ಯ ಕೊಡುಗೆ ನೀಡಿದ ಬೆಂಗಳೂರು ನಿರ್ಮಾಪಕ ಒಂದನೇ ಕೆಂಪೇಗೌಡರ ಇತಿಹಾಸ ಹಾಗೂ ಅವರ ಸಾಧನೆಗಳನ್ನು ತಿಳಿಹೇಳುವ ಛಾಯಾಚಿತ್ರಗಳು, ಅಮೂಲ್ಯ ದಾಖಲೆಗಳುಳ್ಳ ಸ್ಮಾರಕ ವಸ್ತು ಸಂಗ್ರಹಾಲಯ "ನಾಡಪ್ರಭು ಕೆಂಪೇಗೌಡ ಅಧ್ಯಯನ ಕೇಂದ್ರ'ವನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಸ್ಥಾಪಿಸುವ ಉದ್ದೇಶ ರಾಜ್ಯ ಸರ್ಕಾರಕ್ಕಿದೆ. ಇದು ಮುಂದಿನ ಪೀಳಿಗೆಗೆ ಅನುಕೂಲವಾಗಲಿದೆ.

**ಇದು "ಗಂಡು ಭೂಮಿ':**

ಕೆಂಪೇಗೌಡರಿಗೆ ಬಾಲ್ಯದಲ್ಲೇ ದೊರೆಯಾಗುವ ಎಲ್ಲಾ ಲಕ್ಷಣಗಳಿದ್ದವು. ನೆಲ, ಜಲ, ಭಾಷೆ ಹಾಗೂ ಪ್ರಜೆಗಳ ರಕ್ಷಣೆ, ಸರ್ವ ಧರ್ಮ ಸಮನ್ವಯತೆ, ದೇಶ ಕಟ್ಟುವ ಧ್ಯೇಯ, ಯೋಜನೆಗಳನ್ನು ರೂಪಿಸುವ ಚಾಕಚಕ್ಯತೆ ಮುಂತಾದ ಗುಣಗಳಿದ್ದವು. ಈ ಎಲ್ಲ ಗುಣಗಳನ್ನು ಯಲಹಂಕ ಪ್ರದೇಶದ ಆಳ್ವಿಕೆಗೆ, ಪ್ರಜೆಗಳ ಹಿತಕ್ಕಾಗಿ ಬಳಸಿಕೊಂಡು ಯಲಹಂಕ ಪ್ರಭುಗಳೆನಿಸಿದ್ದರು. ಒಮ್ಮೆ ಅವರು ಭೇಟೆ ಅರಸಿ ಯಲಹಂಕದಿಂದ ಬೆಂದಕಾಳೂರಿನ ಕಡೆಗೆ ಬರುತ್ತಿದ್ದಾಗ, ಮಾರ್ಗ ಮಧ್ಯದಲ್ಲಿ ಮೊಲವೊಂದು ನಾಯಿಯನ್ನು ಓಡಿಸಿಕೊಂಡು ಹೋಗುತ್ತಿದ್ದನ್ನು ಕಂಡರು. ಆಶ್ಚರ್ಯಚಕಿತರಾದ ಗೌಡರು ಇದು "ಗಂಡು ಭೂಮಿ' ಇರಲೇಬೇಕು ಎಂದು, ತೀರ್ಮಾನಿಸಿ ಮಣ್ಣಿನ ಕೋಟೆ ನಿರ್ಮಿಸಿ ಬೆಂಗಳೂರು ನಗರವನ್ನಾಗಿಸಿದರು.

**ನಾಡಪ್ರಭುಗಳ ವ್ಯಕ್ತಿತ್ವ:**

ಜನಪದ ಲಾವಣಿಗಳಲ್ಲಿ ಒಂದನೆ ಕೆಂಪೇಗೌಡರ ವ್ಯಕ್ತಿತ್ವ ಅನುಪಮವಾಗಿ ಕಂಡುಬರುತ್ತದೆ. ಎತ್ತರವಾದ ನಿಲುವಿನ ಆಜಾನುಬಾಹು. ಸಾಧನೆಯಿಂದ ಹುರಿಗಟ್ಟಿದ ದೇಹ, ಗೋಧಿ ಬಣ್ಣ, ದುಂಡು ಮುಖ, ನೀಳ ನಾಸಿಕ, ಮಿಂಚುಗಣ್ಣು, ಹುರಿಬಿಟ್ಟ ಮೀಸೆ ಹೀಗೆ ಅವರ ವರ್ಣನೆ ಇದೆ. ಇವೆಲ್ಲದಕ್ಕೂ ಮಿಗಿಲಾಗಿ ಕೆಂಪೇಗೌಡರು ಪ್ರಜಾವತ್ಸಲ, ಉದಾರಿ ಮತ್ತು ಪರೋಪಕಾರಿ ಎಂದು ಇತಿಹಾಸ ತಿಳಿಸುತ್ತದೆ. ಇತಿಹಾಸದ ಪುಟಗಳಲ್ಲಿನ ಅವರ ಸ್ಥಾನಕ್ಕಿಂತ ಬೆಂಗಳೂರಿನ ಜನರ ಹೃದಯ ಸಿಂಹಾಸನದಲ್ಲಿ ಕೆಂಪೇಗೌಡರು ಸದಾ ಋಣಪೂರ್ವಕವಾಗಿ ರಾರಾಜಿಸುತ್ತಿದ್ದಾರೆ.

**ಮಾಲಾ ಎಂ ಮತ್ತು ಪದ್ಮಾ ಗಿರಿಯಣ್ಣನವರ್., ಪ್ರಶಿಕ್ಷಣಾರ್ಥಿಗಳು**

# ಪರಾಕ್ರಮ ದಿವಸ್



ರಾಷ್ಟ್ರಕ್ಕೆ ನೇತಾಜಿಯ ಅದಮ್ಯ ಮನೋಭಾವ ಮತ್ತು ನಿಸ್ವಾರ್ಥ ಸೇವೆಯನ್ನು ಗೌರವಿಸಲು ಮತ್ತು ನೆನಪಿಟ್ಟುಕೊಳ್ಳಲು ಈ ವರ್ಷ ವಿಶೇಷವಾಗಿ ಯುವಕರನ್ನು ಧೈರ್ಯದಿಂದ ವರ್ತಿಸುವಂತೆ ಪ್ರೇರೆಪಿಸಲು ಭಾರತ ಸರ್ಕಾರ ಪ್ರತಿ ವರ್ಷ ಅವರ ಜನ್ಮದಿನವನ್ನು ಪರಾಕ್ರಮ ದಿವಸ ಎಂದು ಆಚರಿಸಲು ನಿರ್ಧರಿಸಿದೆ.


ನೇತಾಜಿ ಸುಭಾಷ್ ಚಂದ್ರ ಬೋಸ್ ಜನವರಿ 23. 1897 ರಂದು ಬಂಗಾಳ ವಿಭಾಗದ ಒರಿಸ್ಸಾದಲ್ಲಿ ಜನಿಸಿದರು. 14 ಸದಸ್ಯರ ಕುಟುಂಬದ 9ನೇ ಸದಸ್ಯರಾಗಿದ್ದರು ನೇತಾಜಿ 1920ರಲ್ಲಿ ಇಂಗ್ಲೆಂಡ್‌ನಲ್ಲಿ ನಡೆದ ಭಾರತೀಯ ನಾಗರಿಕ ಸೇವಾ ಪರೀಕ್ಷೆಯನ್ನು ತೆರವುಗೊಳಿಸಿದರು. ಆದರೆ ಭಾರತದ ಸ್ವಾತಂತ್ರ ಹೋರಾಟದ ಬಗ್ಗೆ ಕೇಳಿದ ನಂತರ 1921 ರ ಎಪ್ರಿಲ್ 23 ರಂದು ತಮ್ಮ ಕೆಲಸಕ್ಕೆ ರಾಜೀನಾಮೆ ನೀಡಿದರು ನೇತಾಜಿ 1920 ಮತ್ತು1930 ರ ದಶಕಗಳಲ್ಲಿ ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ಸಿನ ಕಿರಿಯ ಹಾಗೂ ವಿಂಗ್‌ನ ನಾಯಕರಾಗಿದ್ದರು 1938 ಮತ್ತು 1939ರಲ್ಲಿ ಕಾಂಗ್ರೆಸ್ ಅಧ್ಯಕ್ಷರಾದರು. ಆದರೆ ಮಾತ್ಮ ಗಾಂಧೀಜಿ ಅವರೊಂದಿಗಿನ ಭಿನ್ನಾಭಿಪ್ರಾಯಗಳ ನಂತರ ಅವರನ್ನು 1939ರಲ್ಲಿ ಕಾಂಗ್ರೆಸ್ ನಾಯಕತ್ವ ಸ್ಥಾನಗಳಿಂದ ಗಡಿಪಾರು ಮಾಡಲಾಯಿತು.

ಮಹಾತ್ಮ ಗಾಂಧೀಜಿಯವರ ಅಹಿಂಸಾತ್ಮಕ ಸಿದ್ಧಾಂತವನ್ನು ವಿರೋಧಿಸಿದ ನೇತಾಜಿ ಅಹಿಂಸೆ ಸ್ವಾತಂತ್ರ್ಯವನ್ನು ಪಡೆಯಲು ಎಂದಿಗೂ ಸಾಕಾಗುವುದಿಲ್ಲ ಎಂದು ನಂಬಿದ್ದರು ಮತ್ತು ಹಿಂಸಾತ್ಮಕ ಪ್ರತಿರೋಧವನ್ನು ಪ್ರತಿಪಾದಿಸಿದರು. ಆದ್ದರಿಂದ ಭಾರತದ ಸ್ವಾತಂತ್ರ್ಯಕ್ಕಾಗಿ ಬೆಂಬಲ ಪಡೆಯಲು ಜರ್ಮನಿ ಮತ್ತು ಜಪಾನಿನ ಪ್ರಯಾಣಿಸಲು ಅವರು ನಿರ್ಧರಿಸಿದರು ನೇತಾಜಿ ಜಪಾನ್ ಸಹಾಯದಿಂದ ಆಜಾದ್ಹಿಂದ್‌ಫೌಜ್ ಅಥವಾ ಭಾರತೀಯ ರಾಷ್ಟ್ರೀಯ ಸೈನ್ಯವನ್ನು ಆಯೋಜಿಸಿದರು ಬ್ರಿಟಿಷ್ ಪಡೆಗಳ ವಿರುದ್ಧ ಬ್ರಿಟಿಷ್ ಮಲಯ ಸಿಂಗಪುರ ಮತ್ತು ಆಗ್ನೇಯ ಏಷ್ಯಾದ ಇತರ ಭಾಗಗಳಿಂದ ಬಂದ ಭಾರತೀಯ ಕೈದಿಗಳು ಮತ್ತು ತೋಟ ಕಾರ್ಮಿಕರೊಂದಿ ಆಜಾದ್ಹಿಂದ್‌ಫೌಜ್ ರಚನೆಯಾಯಿತು. ನೇತಾಜಿ 1935 ಪ್ರಕಟವಾದ "ದಿ ಇಂಡಿಯನ್ ಸ್ಟ್ರಗಲ್" ಎಂಬ ಪುಸ್ತಕವನ್ನು ಬರೆದಿದ್ದಾರೆ ಅವರು ಜರ್ಮನಿಯಲ್ಲಿ ಆಜಾದ್ಹಿಂದ ರೇಡಿಯೋ ಕೇಂದ್ರವನ್ನು ಸ್ಥಾಪಿಸಿದರು.

ಭಗವದ್ಗೀತೆ ತನಗೆ ಸ್ಫೂರ್ತಿದಾಯಕವಾದದ್ದು ಎಂದು ನೇತಾಜಿ ನಂಬಿದ್ದರು ಅಲ್ಲದೆ ಅವರು ಸ್ವಾಮಿ ವಿವೇಕಾನಂದರ ಸಾರ್ವತ್ರಿಕ ಭ್ರಾತೃತ್ವದ ಬೋಧನೆಗಳು ಅವರ ರಾಷ್ಟ್ರೀಯತಾವಾದಿ ಆಲೋಚನೆಗಳು ಮತ್ತು ಸಾಮಾಜಿಕ ಸೇವೆಗೆ ಹೆಚ್ಚಿನ ಒತ್ತು ನೀಡಿದ್ದಾರೆ, ಈ ಮಹಾ ನಾಯಕ ನಮ್ಮ ದೇಶಕ್ಕೆ ನೀಡಿದ ಕೊಡುಗೆ ಅಪಾರವಾದದ್ದು ಇಂತಹ ಮಹಾನ್  ಹೋರಾಟ ಪ್ರತಿಯೊಬ್ಬರಿಗೂ ಸ್ಫೂರ್ತಿದಾಯಕ ದೇಶದ ಕುರಿತಾದ ಇವರ ಅಭಿಮಾನ ಮಾದರಿಯಾದದ್ದು ಹಾಗಾಗಿ ಪ್ರಸ್ತುತ ಯುವ ಜನತೆ ನೇತಾಜಿಯವರ ಚಿಂತನೆಗಳು ಅನುಕರಣಿಯ ಶೌರ್ಯ ಸಾಹಸಕ್ಕೆ ಗೌರವನ್ನು ಸಲ್ಲಿಸಲು ಸೂಕ್ತವಾದ ದಿನ ಅವರ ಜನುಮ ದಿನವನ್ನು ಪರಾಕ್ರಮ ದಿವಸ್ ಎಂದು ಆಚರಿಸುವುದಾಗದೆ.

**ವಿದ್ಯಾಶ್ರೀ ಡಿ. ಹೆಚ್., ಪ್ರಶಿಕ್ಷಣಾರ್ಥಿ**

# ವೃಕ್ಷಮಾತೆ ಸಾಲುಮರದ ತಿಮ್ಮಕ್ಕ



ಸಾಲುಮರದ ತಿಮ್ಮಕ್ಕ - ಇವರು ಕರ್ನಾಟಕದಲ್ಲಿ ಜನಿಸಿ ನೆಲೆಸಿರುವ ಒಬ್ಬ ಭಾರತೀಯ ಪರಿಸರವಾದಿ. ತಮಗೆ ಮಕ್ಕಳಿಲ್ಲದ ಕಾರಣಕ್ಕೆ ರಸ್ತೆಯ ಬದಿಯಲ್ಲಿ ಆಲದ ಸಸಿಗಳನ್ನು ನೆಟ್ಟು ಅವುಗಳನ್ನೇ ಮಕ್ಕಳಂತೆ ಭಾವಿಸಿ ಬೆಳೆಸಿದ ಈಕೆ ಓರ್ವ ಅನಕ್ಷರಸ್ಥೆಯಾಗಿದ್ದುಕೊಂಡು ಪರಿಸರ ಸಂರಕ್ಷಣೆಯಲ್ಲಿ ಮಹತ್ತರ ಕಾರ್ಯ ಮಾಡಿದುದನ್ನು ಹಲವಾರು ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಸಂಸ್ಥೆಗಳು ಗಮನಿಸಿ ಪುರಸ್ಕರಿಸಿವೆ ಅಲ್ಲದೆ ಈಕೆ ಮುಂದಿನ ಪೀಳಿಗೆಯ ಒಳಿತಿಗಾಗಿ ಮರಗಳಿಗೆ ನೀರುಣಿಸಿ ಬೆಳೆಸಿದದ್ದಾಳೆ. ಅವರ ಈ ಕೆಲಸವನ್ನು ಭಾರತದ ರಾಷ್ಟ್ರೀಯ ಪೌರ ಪ್ರಶಸ್ತಿಯಿತ್ತು ಸನ್ಮಾನಿಸಲಾಗಿದೆ. ಅಮೇರಿಕ ಸಂಯುಕ್ತ ಸಂಸ್ಥಾನದ ಲಾಸ್ ಏಂಜಲೀಸ್ ಮತ್ತು ಓಕ್ಲ್ಯಾಂಡ್, ಕ್ಯಾಲಿಫೋರ್ನಿಯಗಳಲ್ಲಿ ಸ್ಥಿತವಾಗಿರುವ ಪರಿಸರ ಶಿಕ್ಷಣಕ್ಕಾಗಿ ತಿಮ್ಮಕ್ಕರವರ ಸಂಪನ್ಮೂಲಗಳು ಎಂಬ ಪರಿಸರವಾದಿ ಸಂಘಟನೆಯ ಹೆಸರನ್ನು ತಿಮ್ಮಕ್ಕ ಅವರನ್ನು ಆಧರಿಸಿ ಇಡಲಾಗಿದೆ.

ತಿಮ್ಮಕ್ಕ ಅವರು ತುಮಕೂರು ಜಿಲ್ಲೆಯ ಗುಬ್ಬಿ ತಾಲ್ಲೂಕಿನಲ್ಲಿ ಜನಿಸಿದರು. ತಂದೆ ಚಿಕ್ಕರಂಗಯ್ಯ; ತಾಯಿ ವಿಜಯಮ್ಮ. ಇವರಿಗೆ ಯಾವುದೇ ಔಪಚಾರಿಕ ಶಿಕ್ಷಣ ಲಭ್ಯವಾಗದೆ ಹತ್ತಿರದ ಒಂದು ಕಲ್ಲು ಗಣಿಯಲ್ಲಿ ದಿನಗೂಲಿ ನೌಕರರಾಗಿ ಕೆಲಸ ಮಾಡಿದರು. ಇವರು ಚಿಕ್ಕಯ್ಯ ಎಂಬ ಒಬ್ಬ ದನಕಾಯುವವರನ್ನು ಮದುವೆಯಾಗಿದ್ದು, ಅವರು ರಾಮನಗರ ಜಿಲ್ಲೆಯ ಮಾಗಡಿ ತಾಲ್ಲೂಕಿನ ಹುಲಿಕಲ್ ಗ್ರಾಮದವರು. ದುರದೃಷ್ಟವಶಾತ್, ಇವರಿಗೆ ಮಕ್ಕಳಿರಲಿಲ್ಲ. ತಿಮ್ಮಕ್ಕ ಅವರು ತಮಗೆ ಮಕ್ಕಳಿರದ ದುಃಖವನ್ನು ಮರೆಯಲು ಆಲದ ಮರಗಳನ್ನು ನೆಡಲಾರಂಭಿಸಿದರು ಎಂದು ಹೇಳಲಾಗಿದೆ.

ಕುದೂರಿನಿಂದ ಹುಲಿಕಲ್ ತನಕವಿರುವ ರಾಜ್ಯ ಹೆದ್ದಾರಿ 94ರಲ್ಲಿ ತಿಮ್ಮಕ್ಕರವರು ಬೆಳಸಿದ ಆಲದ ಮರಗಳು. ತಿಮ್ಮಕ್ಕ ಅವರ ಹಳ್ಳಿಯ ಬಳಿ ಆಲದ ಮರಗಳು ಹೇರಳವಾಗಿದ್ದವು. ತಿಮ್ಮಕ್ಕ ಮತ್ತು ಅವರ ಪತಿ ಈ ಮರಗಳಿಂದ ಸಸಿಗಳನ್ನು ಕಸಿಮಾಡಲು ಆರಂಭಿಸಿದರು. ಮೊದಲ ವರ್ಷದಲ್ಲಿ ಹತ್ತು ಸಸಿಗಳನ್ನು ನೆರೆಯ ಕುದೂರು ಹಳ್ಳಿಯ ಬಳಿ 4 ಕಿ.ಮೀ. ಉದ್ದಳತೆಯ ದೂರ ನೆಡಲಾಯಿತು. ಹೀಗೆಯೇ ಎರಡನೇ ವರ್ಷ ಹದಿನೈದು ಮತ್ತು ಮೂರನೇ ವರ್ಷ 20 ಸಸಿಗಳನ್ನು ನೆಡಲಾಯಿತು.

ಇವರು ಈ ಸಸಿಗಳನ್ನು ನೆಡಲು ತಮ್ಮ ಅತ್ಯಲ್ಪ ಆದಾಯವನ್ನೇ ಬಳಸಿದರು. ಈ ಗಂಡ-ಹೆಂಡಿರು ಸಸಿಗಳಿಗೆ ನೀರುಣಿಸಲು ಬಿಂದಿಗೆ ಕೊಳಗಗಳಲ್ಲಿ ನೀರನ್ನು ನಾಲ್ಕು ಕಿ.ಮೀ. ದೂರ ಸಾಗಿಸುತ್ತಿದ್ದರು. ಹಾಗೂ ಸಸಿಗಳನ್ನು ಮೇವಿನ ಜಾನುವಾರುಗಳ ಕಾಟದಿಂದ ತಪ್ಪಿಸಲು ಅವುಗಳ ಸುತ್ತ ಮುಳ್ಳು ಪೊದೆಗಳನ್ನು ಹೊದಿಸಿ ಕಾಪಾಡಿದರು. ಸಸಿಗಳು ಬೆಳೆಯಲು ನೀರಿನ ಅವಶ್ಯಕತೆಯಿರುವುದರಿಂದ, ಅವಗಳನ್ನು ಹೆಚ್ಚಾಗಿ ಮುಂಗಾರು ಮಳೆಯ ಕಾಲದಲ್ಲಿ ನೆಡಲಾಯಿತು. ಒಟ್ಟಾರೆ 284 ಸಸಿಗಳನ್ನು ನೆಡಲಾಗಿ, ಇಂದಿಗೆ ಅವುಗಳ ಮೌಲ್ಯವು ಸುಮಾರು 15 ಲಕ್ಷ ರೂಪಾಯಿಗಳೆಂದು ಅಂದಾಜು ಮಾಡಲಾಗಿದೆ. ಈ ಮರಗಳ ನಿರ್ವಹಣೆಯನ್ನು ಈಗ ಕರ್ನಾಟಕ ಸರ್ಕಾರವು ವಹಿಸಿಕೊಂಡಿದೆ. ತಮ್ಮ ಸಾಧನೆಗಾಗಿ ತಿಮ್ಮಕ್ಕ ಅವರಿಗೆ ಈ ಕೆಳಗಿನ ಸನ್ಮಾನಗಳು ಮತ್ತು ಪ್ರಶಸ್ತಿಗಳನ್ನು ಪ್ರದಾನ ಮಾಡಲಾಗಿದೆ.

ಪೌರ ಪ್ರಶಸ್ತಿ - 1995, ಇಂದಿರಾ ಪ್ರಿಯದರ್ಶಿನಿ ವೃಕ್ಷಮಿತ್ರ ಪ್ರಶಸ್ತಿ - 1997, ವೀರಚಕ್ರ ಪ್ರಶಸ್ತಿ - 1997, ಮಹಿಳಾ ಮತ್ತು ಶಿಶು ಕಲ್ಯಾಣ ಇಲಾಖೆ, ಕರ್ನಾಟಕ ಸರ್ಕಾರ - ಇವರಿಂದ ಮಾನ್ಯತೆಯ ಪ್ರಮಾಣ ಪತ್ರ ಭಾರತೀಯ ವೃಕ್ಷ ವಿಜ್ಞಾನ ಮತ್ತು ತಂತ್ರಜ್ಞಾನ ಸಂಸ್ಥೆ, ಬೆಂಗಳೂರು - ಇವರಿಂದ ಶ್ಲಾಘನೆಯ ಪ್ರಮಾಣ ಪತ್ರ. ಕರ್ನಾಟಕ ಕಲ್ಪವಲ್ಲಿ ಪ್ರಶಸ್ತಿ - 2000, ಗಾಡ್ಫ್ರಿ ಫಿಲಿಪ್ಸ್ ಧೀರತೆ ಪ್ರಶಸ್ತಿ - 2006, ಪಂಪಾಪತಿ

ಪರಿಸರ ಪ್ರಶಸ್ತಿ ಬಾಬಾಸಾಹೇಬ್ ಅಂಬೇಡ್ಕರ್ ಪ್ರಶಸ್ತಿ, ವನಮಾತೆ ಪ್ರಶಸ್ತಿ, ಮಾಗಡಿ ವ್ಯಕ್ತಿ ಪ್ರಶಸ್ತಿ ಶ್ರೀಮಾತಾ ಪ್ರಶಸ್ತಿ. ಆರ್ಟ್ ಆಫ್ ಲಿವಿಂಗ್ ಸಂಸ್ಥೆಯಿಂದ ವಿಶಾಲಾಕ್ಷಿ ಪ್ರಶಸ್ತಿ. 2010ರ ಸಾಲಿನ ಪ್ರತಿಷ್ಠಿತ 'ನಾಡೋಜ' ಪ್ರಶಸ್ತಿ ಲಭಿಸಿದೆ. 2019 ರ ಗಣರಾಜ್ಯೋತ್ಸವ ಸಂದರ್ಭದಲ್ಲಿ ಅವರಿಗೆ ಪದ್ಮಶ್ರೀ ಪ್ರಶಸ್ತಿಯನ್ನು ಪ್ರಕಟಿಸಲಾಗಿದೆ. 2020ರಲ್ಲಿ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದಿಂದ ಗೌರವ ಡಾಕ್ಟರೇಟ್

ತಿಮ್ಮಕ್ಕ ಅವರ ಪತಿ 1991ರಲ್ಲಿ ಮೃತಪಟ್ಟರು. ಇಂದು, ಭಾರತದಲ್ಲಿ ಹಲವಾರು ಕಾಡು ಬೆಳೆಸುವ ಕಾರ್ಯಕ್ರಮಗಳಿಗೆ ತಿಮ್ಮಕ್ಕ ಅವರನ್ನು ಆಹ್ವಾನಿಸಲಾಗುತ್ತದೆ. ತಮ್ಮ ಹಳ್ಳಿಯ ವಾರ್ಷಿಕ ಜಾತ್ರೆಗಾಗಿ ಮಳೆ ನೀರು ಶೇಖರಿಸಲು ದೊಡ್ಡ ತೊಟ್ಟಿಯ ನಿರ್ಮಾಣವೂ ಸೇರಿದಂತೆ ಇವರು ಇತರೆ ಸಮಾಜ ಸೇವೆಯ ಕೆಲಸಗಳಲ್ಲಿ ತೊಡಗಿದ್ದಾರೆ. ಇವರು ತಮ್ಮ ಹಳ್ಳಿಯಲ್ಲಿ ಒಂದು ಆಸ್ಪತ್ರೆಯನ್ನು ಕಟ್ಟುವ ಆಸೆಯನ್ನಿಟ್ಟುಕೊಂಡಿದ್ದಾರೆ. ಇದಕ್ಕಾಗಿ ಒಂದು ನ್ಯಾಸ ನಿಧಿಯನ್ನು ನಿಯೋಜಿಸಲಾಗಿದೆ.


**ಪ್ರಿಯಾಂಕ ಬಿ ಎನ್ ಮತ್ತು ಮಂಜುಳಾ ಸಿ., ಪ್ರಶಿಕ್ಷಣಾರ್ಥಿಗಳು**

# ಭಾಷಾಸಂಘದ ಅಡಿಯಲ್ಲಿ ಕೈಗೊಳ್ಳಲಾದ ಆನ್‌ಲೈನ್ ರಸಪ್ರಶ್ನೆ ಕಾರ್ಯಕ್ರಮದ ಲಿಂಕ್‌ಗಳು

ಐಕ್ಯೂಎಸಿ, ಭಾಷಾಸಂಘ ಹಾಗೂ ಉದ್ಯೋಗ ಕೋಶ ಇವರ ಸಹಯೋಗದಲ್ಲಿ ಪ್ರಶಿಕ್ಷಣಾರ್ಥಿಗಳಿಗಾಗಿ ಟಿಇಟಿ ಪ್ರಥಮ ಭಾಷೆ ಕಡ್ಡಾಯ ಕನ್ನಡ & ಇಂಗ್ಲೀಷ್ ಕುರಿತು ಅಂತರ್ಜಾಲ ರಸಪ್ರಶ್ನೆ ಕಾರ್ಯಕ್ರಮ.

https://docs.google.com/forms/d/1cEVQpHR_YJZPGn7A2rYx7lp2Q-c1MGVTTZEea-FhjKM/edit







ಐಕ್ಯೂಎಸಿ ಹಾಗೂ ಭಾಷಾಸಂಘದ ಸಹಯೋಗದಲ್ಲಿ ಕನ್ನಡ ರಾಜ್ಯೋತ್ಸವ–2021 ರ ಪ್ರಯುಕ್ತ ರಾಜ್ಯಮಟ್ಟದ ಕನ್ನಡ ನಾಡು ನುಡಿಯ ಕುರಿತು ಕೈಗೊಂಡ ಅಂತರ್ಜಾಲ ರಸಪ್ರಶ್ನೆ ಕಾರ್ಯಕ್ರಮ.

https://docs.google.com/forms/d/1Uu9fnRgyzsspxIg-Fngei6-fG5PdbCl3yAT39WHSwL0/edit

*********

# 2020–2021 ಮತ್ತು 2022ರ ಭಾಷಾಸಂಘದ ಅಡಿಯಲ್ಲಿ ನಡೆದ ಕಾರ್ಯಕ್ರಮಗಳ ಪತ್ರಿಕೆಗಳಲ್ಲಿ ಮೂಡಿಬಂದ ವರದಿಗಳು

**ಶಿಕ್ಷಣ ಚಟುವಟಿಕೆ** | ಕುಮದ್ವತಿ ಶಿಕ್ಷಣ ಮಹಾವಿದ್ಯಾಲಯದಲ್ಲಿ ಸುಜ್ಞಾನ ವಾರ್ಷಿಕ ಸಂಚಿಕೆ ಬಿಡುಗಡೆ

## ಮಕ್ಕಳಲ್ಲಿ ಸೃಜನಶೀಲತೆ ಬೆಳೆಸಬೇಕು: ಡಾ. ಜಯಶ್ರೀ ಸಲಹೆ

• **ಕನ್ನಡಪ್ರಭ ವಾರ್ತೆ** ಶಿಕಾರಿಪುರ

ಮಕ್ಕಳಲ್ಲಿ ಸೃಜನಶೀಲತೆಯನ್ನು ಹುಟ್ಟು ಹಾಕುವುದು ಶಿಕ್ಷಕರ ಆದ್ಯ ಕರ್ತವ್ಯ ಎಂದು ಕುಮದ್ವತಿ ಶಿಕ್ಷಣ ಮಹಾವಿದ್ಯಾಲಯ ಪ್ರಾಚಾರ್ಯರಾದ ಡಾ. ಜಯಶ್ರೀ ವಿ.ಆರ್. ಹೇಳಿದರು.

ಕುಮದ್ವತಿ ಶಿಕ್ಷಣ ಮಹಾವಿದ್ಯಾಲಯದಲ್ಲಿ ಹಮ್ಮಿಕೊಂಡಿದ್ದ 2019- 20ನೇ ಶೈಕ್ಷಣಿಕ ಸಾಲಿನ ಸುಜ್ಞಾನ ವಾರ್ಷಿಕ ಸಂಚಿಕೆ ಮತ್ತು ಕಾಲೇಜಿನ ವಿವಿಧ ಸಂಘಗಳ ವಾರ್ಷಿಕ ಸಂಚಿಕೆಯನ್ನು ಬಿಡುಗಡೆಗೊಳಿಸಿ ಅವರು ಮಾತನಾಡಿದರು.

ಸಾಹಿತ್ಯ ಮನುಕುಲದ ಇತಿಹಾಸವನ್ನು ಪ್ರತಿಬಿಂಬಿಸುತ್ತದೆ. ಕಾಲದಿಂದ ಕಾಲಕ್ಕೆ ಅನೇಕ ಸ್ವರೂಪದಲ್ಲಿ ಸಾಹಿತ್ಯ ಸೃಷ್ಟಿಯು ನಿರಂತರವಾಗಿ ಮೂಡಿಬಂದಿದೆ. ಇದರಿಂದ ಪ್ರಸ್ತುತ ಕಾಲಾಂತರದಲ್ಲಿ ನಡೆದ ಘಟನಾವಳಿಗಳನ್ನು ತಿಳಿದು ಹೊಸತನದ ಸೃಷ್ಟಿಯ ಸ್ವರೂಪ ಒಡಮೂಡುತ್ತದೆ. ಕವಿಗಳು, ಸಾಹಿತಿಗಳು, ವಿಮರ್ಶಕರು, ವಿಚಾರವಾದಿಗಳು, ಬರಹಗಾರರು, ಇತಿಹಾಸಕಾರರು, ಸಂಶೋಧಕರು ಮತ್ತು ವಾಸ್ತುಶಿಲ್ಪಗಾರರು ಹೀಗೆ ಅನೇಕರು ವಿವಿಧ ರೀತಿಯಲ್ಲಿ ತಮ್ಮ ಮನದ ಭಾವನೆಯನ್ನು ಸುತ್ತಮುತ್ತಲಿನ ಘಟನೆಗಳನ್ನು ಸಮೀಕರಿಸಿ ಆಧಾರವನ್ನು ಕಲೆ ಹಾಕುವುದರ ಮೂಲಕ ವೈವಿಧ್ಯಮಯ ಕೊಡುಗೆಯನ್ನು ಸಾಹಿತ್ಯ ಕ್ಷೇತ್ರಕ್ಕೆ ನೀಡುತ್ತಾ ಬಂದಿದ್ದಾರೆ ಎಂದು ತಿಳಿಸಿದರು.



ಶಿಕಾರಿಪುರದ ಕುಮದ್ವತಿ ಶಿಕ್ಷಣ ಮಹಾವಿದ್ಯಾಲಯದಲ್ಲಿ ಹಮ್ಮಿಕೊಂಡಿದ್ದ 2019 - 20ನೇ ಶೈಕ್ಷಣಿಕ ಸಾಲಿನ ಸುಜ್ಞಾನ ವಾರ್ಷಿಕ ಸಂಚಿಕೆ ಮತ್ತು ಕಾಲೇಜಿನ ವಿವಿಧ ಸಂಘಗಳ ವಾರ್ಷಿಕ ಸಂಚಿಕೆಯನ್ನು ಪ್ರಾಚಾರ್ಯರಾದ ಡಾ. ಜಯಶ್ರೀ ವಿ.ಆರ್. ಬಿಡುಗಡೆಗೊಳಿಸಿದರು.

- ಸಾಹಿತ್ಯ ಮನುಕುಲದ ಇತಿಹಾಸವನ್ನು ಪ್ರತಿಬಿಂಬಿಸುತ್ತದೆ
- ಕಾಲದಿಂದ ಕಾಲಕ್ಕೆ ಅನೇಕ ಸ್ವರೂಪದಲ್ಲಿ ಸಾಹಿತ್ಯ ಸೃಷ್ಟಿಯು ನಿರಂತರವಾಗಿ ಮೂಡಿಬಂದಿದೆ

ಇತ್ತೀಚೆಗೆ ಸಾಹಿತ್ಯ ರಚನೆ ಸ್ವಲ್ಪಮಟ್ಟಿಗೆ ಕಳೆಗುಂದಿದೆ. ಆಧುನಿಕ ತಂತ್ರಜ್ಞಾನದ ಭರಾಟೆಯಲ್ಲಿ ಎಲ್ಲವೂ ಮಿಂಚಿನಂತೆ ಕಂಡು ಮರೆಯಾಗಿಬಿಡುತ್ತವೆ ಎಂಬ ಭಾವನೆ ಪ್ರತಿಯೊಬ್ಬರಲ್ಲೂ ಮೂಡಿದ್ದಂತೂ ವಾಸ್ತವ. ಇದೇ ರೀತಿ ಮನೋಭಾವನೆ ಮುಂದುವರಿದರೆ ಬಹುಶಃ ಮುಂದಿನ ದಿನಗಳಲ್ಲಿ ಸಾಕಷ್ಟು ಅಗತ್ಯದ ದಾಖಲೆಗಳು ಸಿಗದೇ ಇರಬಹುದು. ಅದಕ್ಕಾಗಿ ಶಿಕ್ಷಣ ಕ್ರಮದಲ್ಲಿ ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಸೃಜನಶೀಲತೆಯ ಬರವಣಿಗೆಗೆ ಆದ್ಯತೆ ನೀಡಬೇಕು. ಅಧ್ಯಾಪಕರು ಸಹಕ್ರಿಯಾತ್ಮಕತೆಯನ್ನು ಮೈಗೂಡಿಸಿಕೊಂಡು ತಮ್ಮ ವಿದ್ಯಾರ್ಥಿಗಳಲ್ಲಿ ಸೃಜನಶೀಲತೆಯನ್ನು ಹುಟ್ಟು ಹಾಕುವುದು ಅವರ ಆದ್ಯ ಕರ್ತವ್ಯ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ- 2020, ಭವಿಷ್ಯ ಭಾರತದ ಮೈಲಿಗಲ್ಲು ಎಂಬ ವಿಚಾರ ಸಂಕಿರಣದಲ್ಲಿ ಪ್ರಶಿಕ್ಷಣಾರ್ಥಿಗಳು ಮಂಡಿಸಿದ ಲೇಖನಗಳ ಪುಸ್ತಕ, ಭಾಷಾ ಸಂಘದಿಂದ ಚಿಗುರು ಮತ್ತು ಇನ್‌ಸ್ಪೈರ್ ಸಂಚಿಕೆ, ಸಮಾಜ ವಿಜ್ಞಾನ ಸಂಘದಿಂದ ಸಮಾಜ ವಿಜ್ಞಾನ ಸಂಚಿಕೆ, ವಿಜ್ಞಾನ ಸಂಘದಿಂದ ವಿಜ್ಞಾನ ಸಂಚಿಕೆಗಳನ್ನು ಬಿಡುಗಡೆ ಗೊಳಿಸಿದರು.

ಸಹಾಯಕ ಪ್ರಾಧ್ಯಾಪಕರು ರವಿ, ಪ್ರಶಿಕ್ಷಣಾರ್ಥಿಗಳು ಉಪಸ್ಥಿತರಿದ್ದರು. ಪ್ರಶಿಕ್ಷಣಾರ್ಥಿ ಚೈತ್ರಾ ಮತ್ತು ತಂಡದವರು ಪ್ರಾರ್ಥಿಸಿ, ಸಿಂಧು ಎಂ.ಎಸ್. ಸ್ವಾಗತಿಸಿ, ಕಾವ್ಯ ನಿರೂಪಿಸಿ ಪವಿತ್ರ ವಂದಿಸಿದರು.

ಕನ್ನಡಪ್ರಭ Thu, 11 March 2021
https://kpepaper.asianetnews.com/c/58998891

---

ಕ್ರಾಂತಿ ದೀಪ
KRANTHI DEEPA REGIONAL KANNADA DAILY

## ಮಕ್ಕಳಲ್ಲಿ ಸೃಜನಶೀಲತೆ ಬೆಳೆಸಿ: ಡಾ. ಜಯಶ್ರೀ



**ಶಿಕಾರಿಪುರ, ಮಾ.10:** ಮಕ್ಕಳಲ್ಲಿ ಸೃಜನಶೀಲತೆಯನ್ನು ಹುಟ್ಟು ಹಾಕುವುದು ಶಿಕ್ಷಕರ ಆದ್ಯ ಕರ್ತವ್ಯ ಎಂದು ಇಲ್ಲಿನ ಕುಮದ್ವತಿ ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ. ಜಯಶ್ರೀ ವಿ ಆರ್ ತಿಳಿಸಿದರು.

ಕುಮದ್ವತಿ ಶಿಕ್ಷಣ ಮಹಾವಿದ್ಯಾಲಯದಲ್ಲಿ ಹಮ್ಮಿಕೊಂಡಿದ್ದ 2019-20ನೇ ಶೈಕ್ಷಣಿಕ ಸಾಲಿನ ಸುಜ್ಞಾನ ವಾರ್ಷಿಕ ಸಂಚಿಕೆ ಮತ್ತು ಕಾಲೇಜಿನ ವಿವಿಧ ಸಂಘಗಳ ವಾರ್ಷಿಕ ಸಂಚಿಕೆಯನ್ನು ಬಿಡುಗಡೆಗೊಳಿಸಿ ಅವರು ಮಾತನಾಡಿದರು.

ಸಾಹಿತ್ಯ ಮನುಕುಲದ ಇತಿಹಾಸವನ್ನು ಪ್ರತಿಬಿಂಬಿಸುತ್ತದೆ. ಕಾಲದಿಂದ ಕಾಲಕ್ಕೆ ಅನೇಕ ಸ್ವರೂಪದಲ್ಲಿ ಸಾಹಿತ್ಯ ಸೃಷ್ಟಿಯು ನಿರಂತರವಾಗಿ ಮೂಡಿಬಂದಿದೆ. ಇದರಿಂದ ಪ್ರಸ್ತುತ ಕಾಲಾಂತರದಲ್ಲಿ ನಡೆದ ಘಟನಾ ವಳಿಗಳನ್ನು ತಿಳಿದು ಹೊಸತನದ ಸೃಷ್ಟಿಯ ಸ್ವರೂಪ ಒಡಮೂಡುತ್ತದೆ. ಕವಿಗಳು, ಸಾಹಿತಿಗಳು, ವಿಮರ್ಶಕರು, ವಿಚಾರ ವಾದಿಗಳು, ಬರಹಗಾರರು, ಇತಿಹಾಸ ಕಾರರು, ಸಂಶೋಧಕರು ಮತ್ತು ವಾಸ್ತು ಶಿಲ್ಪಗಾರರು ಹೀಗೆ ಅನೇಕರು ವಿವಿಧ ರೀತಿಯಲ್ಲಿ ತಮ್ಮ ಮನದ ಭಾವನೆಯನ್ನು ಸುತ್ತಮುತ್ತಲಿನ ಘಟನೆಗಳನ್ನು ಸಮೀಕರಿಸಿ ಆಧಾರವನ್ನು ಕಲೆ ಹಾಕುವುದರ ಮೂಲಕ ವೈವಿಧ್ಯಮಯ ಕೊಡುಗೆಯನ್ನು ಸಾಹಿತ್ಯ ಕ್ಷೇತ್ರಕ್ಕೆ ನೀಡುತ್ತಾ ಬಂದಿದ್ದಾರೆ ಎಂದು ತಿಳಿಸಿದರು.

ರಾಷ್ಟ್ರೀಯ ಶಿಕ್ಷಣ ನೀತಿ -2020, ಭವಿಷ್ಯ ಭಾರತದ ಮೈಲಿಗಲ್ಲು ಎಂಬ ವಿಚಾರ ಸಂಕಿರಣದಲ್ಲಿ ಪ್ರಶಿಕ್ಷಣಾರ್ಥಿಗಳು ಮಂಡಿಸಿದ ಲೇಖನಗಳ ಪುಸ್ತಕ, ಭಾಷಾ ಸಂಘದಿಂದ ಚಿಗುರು ಮತ್ತು ಇನ್‌ಸ್ಪೈರ್ ಸಂಚಿಕೆ, ಸಮಾಜ ವಿಜ್ಞಾನ ಸಂಘದಿಂದ ಸಮಾಜ ವಿಜ್ಞಾನ ಸಂಚಿಕೆ, ವಿಜ್ಞಾನ ಸಂಘದಿಂದ ವಿಜ್ಞಾನ ಸಂಚಿಕೆಗಳನ್ನು ಬಿಡುಗಡೆಗೊಳಿಸಿದರು.

ಸಹಾಯಕ ಪ್ರಾಧ್ಯಾಪಕರು ರವಿ, ಉಪಸ್ಥಿತರಿದ್ದರು. ಸಿಂಧು ಎಂ ಎಸ್ ಸ್ವಾಗತಿಸಿ, ಕಾವ್ಯ ನಿರೂಪಿಸಿ ಪವಿತ್ರ ವಂದಿಸಿದರು.

Main Krantideepa Main Edition
Mar 11, 2021 Page No. 2
Powered by : eReleGo.com

---

## ಮಕ್ಕಳಲ್ಲಿ ಸೃಜನಶೀಲತೆ ಬೆಳೆಸುವುದು ಶಿಕ್ಷಕರ ಕರ್ತವ್ಯ



**ಶಿಕಾರಿಪುರ:** ಮಕ್ಕಳಲ್ಲಿ ಸೃಜನಶೀಲತೆಯನ್ನು ಹುಟ್ಟು ಹಾಕುವುದು ಶಿಕ್ಷಕರ ಆದ್ಯ ಕರ್ತವ್ಯ ಎಂದು ಕುಮದ್ವತಿ ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ. ಜಯಶ್ರೀ ವಿ.ಆರ್. ಹೇಳಿದರು.

ಕುಮದ್ವತಿ ಶಿಕ್ಷಣ ಮಹಾವಿದ್ಯಾಲಯದಲ್ಲಿ ಹಮ್ಮಿಕೊಂಡಿದ್ದ 2019-20ನೇ ಶೈಕ್ಷಣಿಕ ಸಾಲಿನ ಸುಜ್ಞಾನ ವಾರ್ಷಿಕ ಸಂಚಿಕೆ ಮತ್ತು ಕಾಲೇಜಿನ ವಿವಿಧ ಸಂಘಗಳ ವಾರ್ಷಿಕ ಸಂಚಿಕೆಯನ್ನು ಬಿಡುಗಡೆಗೊಳಿಸಿ ಅವರು ಮಾತನಾಡಿದರು.

ಸಾಹಿತ್ಯ ಮನುಕುಲದ ಇತಿಹಾಸವನ್ನು ಪ್ರತಿಬಿಂಬಿಸುತ್ತದೆ. ಕಾಲದಿಂದ ಕಾಲಕ್ಕೆ ಅನೇಕ ಸ್ವರೂಪದಲ್ಲಿ ಸಾಹಿತ್ಯ ಸೃಷ್ಟಿಯು ನಿರಂತರವಾಗಿ ಮೂಡಿ ಬಂದಿದೆ ಇದರಿಂದ ಪ್ರಸ್ತುತ ಕಾಲಾಂತರದಲ್ಲಿ ನಡೆದ ಘಟನಾವಳಿಗಳನ್ನು ತಿಳಿದು ಹೊಸತನದ ಸೃಷ್ಟಿಯ ಸ್ವರೂಪ ಒಡಮೂಡುತ್ತದೆ. ಕವಿಗಳು, ಸಾಹಿತಿಗಳು, ವಿಮರ್ಶಕರು, ವಿಚಾರವಾದಿಗಳು, ಬರಹಗಾರರು, ಇತಿಹಾಸಕಾರರು, ಸಂಶೋಧಕರು ಮತ್ತು ವಾಸ್ತುಶಿಲ್ಪಗಾರರು ಹೀಗೆ ಅನೇಕರು ವಿವಿಧ ರೀತಿಯಲ್ಲಿ ತಮ್ಮ ಮನದ ಭಾವನೆಯನ್ನು ಸುತ್ತಮುತ್ತಲಿನ ಘಟನೆಗಳನ್ನು ಸಮೀಕರಿಸಿ ಆಧಾರವನ್ನು ಕಲೆ ಹಾಕುವುದರ ಮೂಲಕ ವೈವಿಧ್ಯಮಯ ಕೊಡುಗೆಯನ್ನು ಸಾಹಿತ್ಯ ಕ್ಷೇತ್ರಕ್ಕೆ ನೀಡುತ್ತಾ ಬಂದಿದ್ದಾರೆ ಎಂದು ತಿಳಿಸಿದರು.

ಇತ್ತೀಚೆಗೆ ಸಾಹಿತ್ಯ ರಚನೆ ಸ್ವಲ್ಪ ಮಟ್ಟಿಗೆ ಕಳೆಗುಂದಿದೆ ಎಂದ ಅವರು ಆಧುನಿಕ ತಂತ್ರಜ್ಞಾನದ ಭರಾಟೆಯಲ್ಲಿ ಎಲ್ಲವೂ ಮಿಂಚಿನಂತೆ ಕಂಡು ಮರೆಯಾಗಿಬಿಡುತ್ತವೆ ಎಂಬ ಭಾವನೆ ಪ್ರತಿಯೊಬ್ಬರಲ್ಲೂ ಮೂಡಿದ್ದಂತೂ ವಾಸ್ತವ. ಅಧ್ಯಾಪಕರುಗಳು ಸಹ ಕ್ರಿಯಾತ್ಮಕತೆಯನ್ನು ಮೈಗೂಡಿಸಿಕೊಂಡು ತಮ್ಮ ವಿದ್ಯಾರ್ಥಿಗಳಲ್ಲಿ ಸೃಜನಶೀಲತೆಯನ್ನು ಹುಟ್ಟು ಹಾಕುವುದು ಅವರ ಆದ್ಯ ಕರ್ತವ್ಯ ಎಂದರು.

ಕಾರ್ಯಕ್ರಮದಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ -2020, ಭವಿಷ್ಯ ಭಾರತದ ಮೈಲಿಗಲ್ಲು ಎಂಬ ವಿಚಾರ ಸಂಕಿರಣದಲ್ಲಿ ಪ್ರಶಿಕ್ಷಣಾರ್ಥಿಗಳು ಮಂಡಿಸಿದ ಲೇಖನಗಳ ಪುಸ್ತಕ, ಭಾಷಾ ಸಂಘದಿಂದ ಚಿಗುರು ಮತ್ತು ಇನ್‌ಸ್ಪೈರ್ ಸಂಚಿಕೆ, ಸಮಾಜ ವಿಜ್ಞಾನ ಸಂಘದಿಂದ ಸಮಾಜ ವಿಜ್ಞಾನ ಸಂಚಿಕೆ, ವಿಜ್ಞಾನ ಸಂಘದಿಂದ ವಿಜ್ಞಾನ ಸಂಚಿಕೆಗಳನ್ನು ಬಿಡುಗಡೆ ಗೊಳಿಸಿದರು.

ಸಹಾಯಕ ಪ್ರಾಧ್ಯಾಪಕರು ರವಿ, ಪ್ರಶಿಕ್ಷಣಾರ್ಥಿಗಳು ಉಪಸ್ಥಿತರಿದ್ದರು. ಪ್ರಶಿಕ್ಷಣಾರ್ಥಿ ಚೈತ್ರಾ ಮತ್ತು ತಂಡದವರು ಪ್ರಾರ್ಥಿಸಿ, ಸಿಂಧು ಎಂ ಎಸ್ ಸ್ವಾಗತಿಸಿ,ಕಾವ್ಯ ನಿರೂಪಿಸಿ ಪವಿತ್ರ ವಂದಿಸಿದರು.

---

## ಅಭ್ಯಾಸ ಅನಿವಾರ್ಯ: ಗುರುಪ್ರಸಾದ್



**ಶಿಕಾರಿಪುರ, ಜು.19:** "ಶಿಕ್ಷಕರು ನಟನಿದ್ದಂತೆ, ಇವರು ನಟನಿಗಿರುವ ಮೇಧಾವಿತನ ಶಿಕ್ಷಕನಿಗೂ ಇರುತ್ತದೆ. ಪದ್ಯ, ಸಂಗತಿಗಳನ್ನು ಆಂಗಿಕ, ವಾಚಿಕ, ಆಹಾರ್ಯ ಹೀಗೆ ವೈವಿಧ್ಯಮಯವಾಗಿ ಅರ್ಥೈಸುವ ಸಾಹಸವು ಶಿಕ್ಷಕರದ್ದಾಗಿ ರುತ್ತದೆ. ಹೀಗೆ ವಿವರಿಸುವಾಗ ಧ್ವನಿ ಸೂಕ್ತವಾಗಿರಬೇಕು ಅಕ್ಷರಗಳ ಉಚ್ಚಾರಣೆ, ಧ್ವನಿಯ ಅಭ್ಯಾಸಗಳು ಮುಖ್ಯವೋ ಹಾಗೆಯೇ ರಂಗಭೂಮಿಯಲ್ಲಿಯೂ ದೈಹಿಕ ಮತ್ತು ಧ್ವನಿಯ ಅಭ್ಯಾಸಗಳನ್ನು ಕಲಿಸಬೇಕಾದ ಅನಿವಾರ್ಯತೆ ಇಂದು ಇದೆ ಎಂದು ಶಿರಾಳಕೊಪ್ಪ ಕದಂಬ ಪ್ರಥಮ ದರ್ಜೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕ ಡಾ. ಟಿ. ಆರ್. ಗುರುಪ್ರಸಾದ್ ಹೇಳಿದರು.

ಕುಮದ್ವತಿ ಶಿಕ್ಷಣ ಮಹಾವಿದ್ಯಾಲಯದಲ್ಲಿ ಕಾಲೇಜಿನ ಐಕ್ಯೂಎಸಿ, ಸಿರಿಯಾಳ ಕಲಾಕೇಂದ್ರ, ಶಿರಾಳಕೊಪ್ಪ ಮತ್ತು ಭಾಷಾ ಸಂಘದ ವತಿಯಿಂದ ಆನ್‌ಲೈನ್ ಮೂಲಕ ಏರ್ಪಡಿಸಲಾಗಿದ್ದ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಶಿಕ್ಷಕರು ತಾವುಗಳು ಪಾಠವನ್ನು ಬೋಧಿಸುವಾಗ ವಿದ್ಯಾರ್ಥಿಗಳ ಸಂಖ್ಯೆ ಮತ್ತು ಸಂದರ್ಭ, ಸ್ಥಿತಿ ಮತ್ತು ಶಾರೀರಿಕ ಅಭ್ಯಾಸಗಳನ್ನು ರೂಢಿ ಮಾಡಿಕೊಳ್ಳಬೇಕಾಗುತ್ತದೆ. ಪದ್ಯವನ್ನು, ಗದ್ಯವನ್ನು ಧ್ವನಿಪೂರ್ಣವಾಗಿ ವ್ಯಕ್ತಪಡಿಸುವಲ್ಲಿ ಹರ್ಷ, ಕೋಪ, ಭೀಬತ್ಸ, ಸಂತೋಷ ಮತ್ತು ಕ್ರೋಧದಂತಹ ಸಂದರ್ಭವನ್ನು ಅರ್ಥೈಸುವ ಕಲೆಯನ್ನು ಕಲಿಯ ಬೇಕಾದರೆ, ರಂಗಭೂಮಿಯ ಕಲೆಯ ಆವಶ್ಯಕತೆಯಿದೆ. ಆದ್ದರಿಂದ ಬಾವಿ ಶಿಕ್ಷಕರಿಗೆ ನಾಟಕ ಮತ್ತು ರಂಗಭೂಮಿಯ ಜ್ಞಾನವಿರಬೇಕು ಎಂಬ ಆಶಯ ವ್ಯಕ್ತಪಡಿಸಿದರು.

ಪ್ರಾಚಾರ್ಯರಾದ ಡಾ. ಜಯಶ್ರೀ ವಿ.ಆರ್ ಅಧ್ಯಕ್ಷತೆ ವಹಿಸಿದ್ದರು. ಸ್ವಾಗತವನ್ನು ಸಹಾಯಕ ಪ್ರಾಧ್ಯಾಪಕ ಡಾ. ರವಿ ಹೆಚ್. ಹಾಗೂ ವಂದನಾರ್ಪಣೆಯನ್ನು ಇನ್ನೊಬ್ಬ ಸಹಾಯಕ ಪ್ರಾಧ್ಯಾಪಕ ಡಾ. ವೀರೇಂದ್ರಕುಮಾರ ವಾಲಿ ನಡೆಸಿಕೊಟ್ಟರು.

ಆಶಾದಾಯಕ ವಿಚಾರ | ಶಿಕ್ಷಕಸ್ನೇಹಿ ಮೊಬೈಲ್ ಆ್ಯಪ್‌ಗಳ ಪರಿಚಯಾತ್ಮಕ ಕಾರ್ಯಾಗಾರದಲ್ಲಿ ಡಾ.ಶಿವಕುಮಾರ್

# ಶಿಕ್ಷಣ ಕ್ಷೇತ್ರದಲ್ಲಿ ಆತಂಕ ಕಳೆಯುತ್ತಿರುವ ಆ್ಯಪ್‌ಗಳು

• **ಕನ್ನಡಪ್ರಭ ವಾರ್ತೆ** ಶಿಕಾರಿಪುರ

ಬದಲಾಗುತ್ತಿರುವ ಶಿಕ್ಷಣ ಕ್ಷೇತ್ರದಲ್ಲಿ ಶಿಕ್ಷಕರೂ ತಮ್ಮ ಬೋಧನಾಶೈಲಿ ಹಾಗೂ ವಿಧಾನಗಳಲ್ಲಿ ಮಾರ್ಪಾಡುಗಳನ್ನು ತಂದು ಬೋಧಿಸುವ ಸಂದರ್ಭಗಳು ಎದುರಾಗಿವೆ ಎಂದು ಕುಮದ್ವತಿ ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಜಿ.ಎಸ್.ಶಿವಕುಮಾರ್ ಹೇಳಿದರು.

ಗುರುವಾರ ಕಾಲೇಜಿನ ಸಭಾಂಗಣದಲ್ಲಿ ಐಕ್ಯೂಎಸಿ ಹಾಗೂ ಭಾಷಾ ಸಂಘದ ವತಿಯಿಂದ ಪ್ರಶಿಕ್ಷಣಾರ್ಥಿಗಳಿಗೆ ನಡೆದ ಶಿಕ್ಷಕ ಸ್ನೇಹಿ ಮೊಬೈಲ್ಆಪ್‌ಗಳಪರಿಚಯಾತ್ಮಕಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶಿಕ್ಷಣ ಕ್ಷೇತ್ರದಲ್ಲಿ ವ್ಯಾಪಕ ಬದಲಾವಣೆ ಆಗುತ್ತಿದೆ. ಕೇವಲ ಪುಸ್ತಕ, ಪೆನ್ನು, ಕಪ್ಪುಹಲಗೆ ಮೂಲಕ ಮಕ್ಕಳಿಗೆ ಪಾಠ ಹೇಳಿಕೊಡುವ ಕಾಲ ಬದಲಾಗಿದೆ. ಆಧುನಿಕತೆಯ ಎಲ್ಲ ಹೊಸ ವಿಧಾನಗಳನ್ನು ಬಳಸಿಕೊಳ್ಳುವ ಮೂಲಕ ನಿತ್ಯ ಶಿಕ್ಷಣ ಕ್ಷೇತ್ರದಲ್ಲಿ ನಡೆಯುತ್ತಿರುವ ಹೊಸ ಆವಿಷ್ಕಾರ ತಂತ್ರಜ್ಞಾನವನ್ನು ಅರಿತು ಮಕ್ಕಳಿಗೆ ಪಾಠ ಹೇಳಿಕೊಡಬೇಕಾಗಿದೆ ಎಂದರು.



ಶಿಕಾರಿಪುರದ ಕುಮದ್ವತಿ ಶಿಕ್ಷಣ ಮಹಾವಿದ್ಯಾಲಯದಲ್ಲಿ ಗುರುವಾರ ನಡೆದ ಶಿಕ್ಷಕರ ಸ್ನೇಹಿ ಮೊಬೈಲ್ ಆಪ್‌ಗಳ ಪರಿಚಯಾತ್ಮಕ ಕಾರ್ಯಾಗಾರವನ್ನು ಪ್ರಾಚಾರ್ಯ ಡಾ.ಶಿವಕುಮಾರ್ ಉದ್ಘಾಟಿಸಿದರು.

ಕೋವಿಡ್ ಪರಿಣಾಮದಿಂದಾಗಿ ಶಿಕ್ಷಣ ಕ್ಷೇತ್ರ ಬಡವಾಗುತ್ತಿದೆ ಎಂಬ ಆತಂಕ ಎಲ್ಲರನ್ನೂ ಕಾಡುತ್ತಿದೆ. ಆದರೆ ತನ್ನ ವ್ಯಾಪ್ತಿಯನ್ನು ವಿಸ್ತರಿಸಿಕೊಳ್ಳುತ್ತಿದೆ ಎಂದು ತಿಳಿಸಿದ ಅವರು ಕಲಿಕೆಗೆ ಪೂರಕವಾಗಿ ಹೊಸ ಹೊಸ ಮೊಬೈಲ್ ಆಪ್‌ಗಳನ್ನು ಬಳಸಿ, ಕಲಿಕೆಯನ್ನು ಕಲಿಸುವ ಹಾಗೂ ಸದೃಢಗೊಳಿಸುತ್ತಿರುವ ನಿದರ್ಶನಗಳು ಸಾಕ್ಷಿಯಾಗಿದೆ. ಈ ನಿಟ್ಟಿನಲ್ಲಿ ಕುಮದ್ವತಿ ಶಿಕ್ಷಣ ಮಹಾವಿದ್ಯಾಲಯವು ವಿದ್ಯಾರ್ಥಿ ಸ್ನೇಹಿ ಆಪ್‌ಗಳ ಬಳಕೆಯ ಮೂಲಕ ಬೋಧನೆ ಮತ್ತು ಕಲಿಕೆಯನ್ನು ಉತ್ಕೃಷ್ಟಗೊಳಿಸುವ ಜವಾಬ್ದಾರಿಯೊಂದಿಗೆ ಪ್ರಶಿಕ್ಷಣಾರ್ಥಿಗಳಿಗಾಗಿ ಝೂಮ್, ಟೆಸ್ಟ್‌ಮೋಜ್, ಗೂಗಲ್ ಕ್ಲಾಸ್‌ರೂಂ, ಗೂಗಲ್ ಫಾರಂ, ಡಬ್ಲೂವ್‌ಪಿ.ಎಸ್, ಗೂಗಲ್ ಮೀಟ್, ವಿಡಿಯೋ ಕ್ರಿಯೇಷನ್ ಇತ್ಯಾದಿ ವಿದ್ಯಾರ್ಥಿ ಸ್ನೇಹಿ ಆಪ್‌ಗಳ ಪರಿಚಯ ಹಾಗೂ ತರಬೇತಿಯನ್ನು ಹಮ್ಮಿಕೊಂಡಿದೆ. ಈ ಕಾರ್ಯಕ್ರಮವು ಅತ್ಯುತ್ತಮವಾಗಿ ಮೂಡಿ ಬರಲಿ ಎಂದು ಆಶಿಸಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಎಲ್ಲಾ ಬೋಧಕ ಮತ್ತು ಬೋಧಕೇತರ ವರ್ಗದವರು ಹಾಗೂ ಪ್ರಶಿಕ್ಷಣಾರ್ಥಿಗಳು ಪಾಲ್ಗೊಂಡಿದ್ದರು. ಪ್ರಶಿಕ್ಷಣಾರ್ಥಿ ಶ್ವೇತಾ ಜಿ.ಎಚ್ ಪ್ರಾರ್ಥಿಸಿ, ಡಾ. ಕಿರಣ್ ಕುಮಾರ ಸ್ವಾಗತಿಸಿದರು. ಡಾ. ವೀರೇಂದ್ರಕುಮಾರ್ ವಾಲಿ ನಿರೂಪಿಸಿ ಡಾ. ರವಿ ವಂದಿಸಿದರು.

ಕನ್ನಡಪ್ರಭ Fri, 28 January 2022
https://kpepaper.asianetnews.com/c/65865577

# ಶಿಕ್ಷಕ ಸ್ನೇಹಿ ಮೊಬೈಲ್ ಆಪ್‌ಗಳ ಕಾರ್ಯಾಗಾರ

**ಶಿಕಾರಿಪುರ** : ಬದಲಾಗುತ್ತಿರುವ ಶಿಕ್ಷಣ ಕ್ಷೇತ್ರದಲ್ಲಿ ಶಿಕ್ಷಕರೂ ಸಹ ತಮ್ಮ ಬೋಧನಾ ಶೈಲಿ ಹಾಗೂ ವಿಧಾನಗಳಲ್ಲಿ ಮಾರ್ಪಾಡುಗಳನ್ನು ತಂದು ಬೇಧಿಸುವ ಸಂದರ್ಭಗಳು ಎದುರಾಗಿದೆ ಎಂದು ಇಲ್ಲಿನ ಕುಮದ್ವತಿ ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯ ಡಾ.ಜಿ.ಎಸ್. ಶಿವಕುಮಾರ್ ತಿಳಿಸಿದರು.

ಕಾಲೇಜಿನ ಸಭಾಂಗಣದಲ್ಲಿ ಐಕ್ಯೂಎಸಿ ಹಾಗೂ ಭಾಷಾ ಸಂಘದ ವತಿಯಿಂದ ಪ್ರಶಿಕ್ಷಣಾರ್ಥಿಗಳಿಗಾಗಿ ನಡೆದ ಶಿಕ್ಷಕ ಸ್ನೇಹಿ ಮೊಬೈಲ್ ಆಪ್‌ಗಳ ಪರಿಚಯಾತ್ಮಕ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶಿಕ್ಷಣ ಕ್ಷೇತ್ರದಲ್ಲಿ ವ್ಯಾಪಕ ಬದಲಾವಣೆಯಾಗುತ್ತಿದ್ದು ಕೇವಲ ಪುಸ್ತಕ, ಪೆನ್ನು, ಕಪ್ಪುಹಲಗೆ ಮೂಲಕ ಮಕ್ಕಳಿಗೆ ಪಾಠ ಹೇಳಿಕೊಡುವ ಕಾಲ ಬದಲಾಗಿ ಆಧುನಿಕತೆಯ ಎಲ್ಲ ಹೊಸ ವಿಧಾನಗಳನ್ನು ಬಳಸಿಕೊಳ್ಳುವ ಮೂಲಕ ನಿತ್ಯ ಶಿಕ್ಷಣ ಕ್ಷೇತ್ರದಲ್ಲಿ ನಡೆಯುತ್ತಿರುವ ಹೊಸ ಆವಿಷ್ಕಾರ ತಂತ್ರಜ್ಞಾನವನ್ನು ಅರಿತು ಮಕ್ಕಳಿಗೆ ಪಾಠ ಹೇಳಿಕೊಡಬೇಕಾಗಿದೆ ಎಂದರು.



ಶೈಕ್ಷಣಿಕ ಕ್ಷೇತ್ರದಲ್ಲಿನ ಶಿಕ್ಷಕರ ಮನೋಭಾವಗಳು, ವಿದ್ಯಾರ್ಥಿಗಳ ಬುದ್ಧಿಶಕ್ತಿ ಹಾಗೂ ಕಲಿಕೆಯ ಪ್ರಕ್ರಿಯೆಯಲ್ಲಿ ತೊಡಗಿಸುವಿಕೆಯನ್ನು ಪರಿಗಣಿಸಿ, ಬೋಧನಾ ಕಲಿಕೆಯಲ್ಲಿ ಬದಲಾವಣೆಗಳನ್ನು ತಂದುಕೊಳ್ಳುವ ಅನಿವಾರ್ಯತೆ ಬಂದಿದೆ ಎಂದು ತಿಳಿಸಿದರು.

ಕೋವಿಡ್ ಪರಿಣಾಮದಿಂದಾಗಿ ಶಿಕ್ಷಣ ಕ್ಷೇತ್ರ ಬಡವಾಗುತ್ತಿದೆ ಎಂಬ ಆತಂಕ ಎಲ್ಲರನ್ನೂ ಕಾಡುತ್ತಿದ್ದು ಆದರೆ ತನ್ನ ವ್ಯಾಪ್ತಿಯನ್ನು ವಿಸ್ತರಿಸಿಕೊಳ್ಳುತ್ತಿದೆ. ಕಲಿಕೆಗೆ ಪೂರಕವಾಗಿ ಹೊಸ ಹೊಸ ಮೊಬೈಲ್ ಆಪ್‌ಗಳನ್ನು ಬಳಸಿ, ಕಲಿಕೆಯನ್ನು ಕಲಿಸುವ ಹಾಗೂ ಸದೃಢಗೊಳಿಸುತ್ತಿರುವ ನಿದರ್ಶನಗಳು ಸಾಕ್ಷಿಯಾಗಿದೆ. ಈ ನಿಟ್ಟಿನಲ್ಲಿ ಕುಮದ್ವತಿ ಶಿಕ್ಷಣ ಮಹಾವಿದ್ಯಾಲಯವು ವಿದ್ಯಾರ್ಥಿಸ್ನೇಹಿ ಆಪ್‌ಗಳ ಬಳಕೆಯ ಮೂಲಕ ಬೋಧನೆ ಮತ್ತು ಕಲಿಕೆಯನ್ನು ಉತ್ಕೃಷ್ಟಗೊಳಿಸಿದೆ ಎಂದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಎಲ್ಲಾ ಬೋಧಕ ಮತ್ತು ಬೋಧಕೇತರ ವರ್ಗದವರು ಹಾಗೂ ಪ್ರಶಿಕ್ಷಣಾರ್ಥಿಗಳು ಪಾಲ್ಗೊಂಡಿದ್ದರು. ಪ್ರಶಿಕ್ಷಣಾರ್ಥಿ ಶ್ವೇತಾ ಜಿ.ಹೆಚ್. ಪ್ರಾರ್ಥಿಸಿ, ಡಾ. ಕಿರಣ್ ಕುಮಾರ ಸ್ವಾಗತಿಸಿದರು ಡಾ. ವೀರೇಂದ್ರಕುಮಾರ್ ವಾಲಿ ನಿರೂಪಿಸಿ ಡಾ. ರವಿ ವಂದಿಸಿದರು.

ವಿಶ್ವವಾಣಿ
vishwavani.news

# ಶಿಕ್ಷಕ ಸ್ನೇಹಿ ಆ್ಯಪ್‌ಗಳ ಕಾರ್ಯಾಗಾರ ಉದ್ಘಾಟನೆ

**ಶಿಕಾರಿಪುರ:** ಬದಲಾಗುತ್ತಿರುವ ಶಿಕ್ಷಣ ಕ್ಷೇತ್ರದಲ್ಲಿ ಶಿಕ್ಷಕರೂ ಸಹ ತಮ್ಮ ಬೋಧನಾ ಶೈಲಿ ಹಾಗೂ ವಿಧಾನಗಳಲ್ಲಿ ಮಾರ್ಪಾಡುಗಳನ್ನು ತಂದು ಬೇಧಿಸುವ ಸಂದರ್ಭಗಳು ಎದುರಾಗಿದೆ ಎಂದು ಇಲ್ಲಿನ ಕುಮದ್ವತಿ ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯ ಡಾ.ಜಿ.ಎಸ್ ಶಿವಕುಮಾರ್ ತಿಳಿಸಿದರು.ಗುರುವಾರ ಕಾಲೇಜಿನ ಸಭಾಂಗಣದಲ್ಲಿ ಐಕ್ಯೂಎಸಿ ಹಾಗೂ ಭಾಷಾ ಸಂಘದ ವತಿಯಿಂದ ಪ್ರಶಿಕ್ಷಣಾರ್ಥಿಗಳಿಗಾಗಿ ನಡೆದ ಶಿಕ್ಷಕ ಸ್ನೇಹಿ ಮೊಬೈಲ್ ಆಪ್‌ಗಳ ಪರಿಚಯಾತ್ಮಕ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಕೋವಿಡ್ ಪರಿಣಾಮದಿಂದಾಗಿ ಶಿಕ್ಷಣ ಕ್ಷೇತ್ರ ಬಡವಾಗುತ್ತಿದೆ ಎಂಬ ಆತಂಕ ಎಲ್ಲರನ್ನೂ ಕಾಡುತ್ತಿದ್ದು ಆದರೆ ತನ್ನ ವ್ಯಾಪ್ತಿಯನ್ನು ವಿಸ್ತರಿಸಿಕೊಳ್ಳುತ್ತಿದೆ. ಈ ನಿಟ್ಟಿನಲ್ಲಿ ಕುಮದ್ವತಿ ಶಿಕ್ಷಣ ಮಹಾವಿದ್ಯಾಲಯವು ವಿದ್ಯಾರ್ಥಿಸ್ನೇಹಿ ಆಪ್‌ಗಳ ಬಳಕೆಯ ಮೂಲಕ ಬೋಧನೆ ಮತ್ತು ಕಲಿಕೆಯನ್ನು ಉತ್ಕೃಷ್ಟಗೊಳಿಸುವ ಜವಾಬ್ದಾರಿಯೊಂದಿಗೆ ಪ್ರಶಿಕ್ಷಣಾರ್ಥಿಗಳಿಗಾಗಿ ಜೂಮ್, ಟೆಸ್ಟ್‌ಮೋಜ್, ಗೂಗಲ್ ಕ್ಲಾಸ್‌ರೂಂ, ಗೂಗಲ್ ಫಾರಂ, ಡಬ್ಲೂವ್ ಪಿ.ಎಸ್, ಗೂಗಲ್ ಮೀಟ್, ವಿಡಿಯೋ ಕ್ರಿಯೇಷನ್ ಇತ್ಯಾದಿ ವಿದ್ಯಾರ್ಥಿ ಸ್ನೇಹಿ ಆಪ್‌ಗಳ ಪರಿಚಯ ಹಾಗೂ ತರಬೇತಿಯನ್ನು ಹಮ್ಮಿಕೊಂಡಿದೆ ಕಾಲೇಜಿನ ಎಲ್ಲಾ ಬೋಧಕ ಮತ್ತು ಬೋಧಕೇತರ ವರ್ಗದವರು ಹಾಗೂ ಪ್ರಶಿಕ್ಷಣಾರ್ಥಿಗಳು ಪಾಲ್ಗೊಂಡಿದ್ದರು.

# ಯಶಸ್ವಿಯಾದ ಶಿಕ್ಷಕರ ಸ್ನೇಹಿ ಮೊಬೈಲ್ ಆಪ್‌ಗಳ ಪರಿಚಯಾತ್ಮಕ ಕಾರ್ಯಾಗಾರ

ಸುವರ್ಣಪ್ರಭವಾರ್ತೆ
ಶಿಕಾರಿಪುರ(ಶಿವಮೊಗ್ಗ),ಜ.28

:ಕೋವಿಡ್ ಪರಿಣಾಮದಿಂದಾಗಿ ಶಿಕ್ಷಣ ಕ್ಷೇತ್ರ ಬಡವಾಗುತ್ತಿದೆ ಎಂದರೂ ಅದು ತನ್ನ ವ್ಯಾಪ್ತಿಯನ್ನು ವಿಸ್ತರಿಸಿಕೊಳ್ಳುತ್ತಿದೆ. ಇದರಿಂದ ಕಲಿಕೆಗೆ ಪೂರಕವಾಗಿ ಹೊಸ ಹೊಸ ಮೊಬೈಲ್ ಆಪ್‌ಗಳನ್ನು ಬಳಸಿ, ಕಲಿಕೆಯನ್ನು ಕಲಿಸುವ ಹಾಗೂ ಸದೃಢಗೊಳಿಸುತ್ತಿರುವ ನಿದರ್ಶನಗಳು ನಮ್ಮ ಮುಂದಿವೆ ಎಂದು ಕುಮದ್ವತಿ ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ. ಶಿವಕುಮಾರ ಜಿ.ಎಸ್ ತಿಳಿಸಿದರು.

ಪಟ್ಟಣದ ಗುರುವಾರ ಮಧ್ಯಾಹ್ನ ಕಾಲೇಜಿನ ಸಭಾಂಗಣದಲ್ಲಿ ಐಕ್ಯೂಎಸಿ ಹಾಗೂ ಭಾಷಾ ಸಂಘದ ವತಿಯಿಂದ ಏರ್ಪಡಿಸಲಾಗಿದ್ದ "ಪ್ರಶಿಕ್ಷಣಾರ್ಥಿಗಳಿಗಾಗಿ ಶಿಕ್ಷಕರ ಸ್ನೇಹಿ ಮೊಬೈಲ್ ಆಪ್‌ಗಳ ಪರಿಚಯಾತ್ಮಕ ಕಾರ್ಯಾಗಾರ" ವನ್ನು ಉದ್ಘಾಟಿಸಿ ಮಾತನಾಡಿದ ಅವರು, ಬದಲಾಗುತ್ತಿರುವ ಶಿಕ್ಷಣ ಕ್ಷೇತ್ರದಲ್ಲಿ ಶಿಕ್ಷಕರೂ ಸಹ ತಮ್ಮ ಬೋಧನಾ ಶೈಲಿ ಹಾಗೂ ವಿಧಾನಗಳಲ್ಲಿ ಮಾರ್ಪಾಡುಗಳನ್ನು ತಂದು ಬೇಧಿಸುವ ಸಂದರ್ಭಗಳು ಎದುರಾಗಿವೆ. ಏಕೆಂದರೆ, ತಂತ್ರಜ್ಞಾನದಲ್ಲಿನ ಬದಲಾವಣೆಗಳು, ಶೈಕ್ಷಣಿಕ ಕ್ಷೇತ್ರದಲ್ಲಿನ ಶಿಕ್ಷಕರ ಮನೋಭಾವಗಳು, ವಿದ್ಯಾರ್ಥಿಗಳ ಬುದ್ಧಿಶಕ್ತಿ ಹಾಗೂ ಕಲಿಕೆಯ ಪ್ರಕ್ರಿಯೆಯಲ್ಲಿ ತೊಡಗಿಸುವಿಕೆಯನ್ನು ಪರಿಗಣಿಸಿ, ಬೋಧನಾ ಕಲಿಕೆಯಲ್ಲಿ ಬದಲಾವಣೆಗಳನ್ನು ತಂದುಕೊಳ್ಳುವ ಅನಿವಾರ್ಯತೆ ಬಂದಿದೆ.



ಈ ನಿಟ್ಟಿನಲ್ಲಿ ಶಿಕ್ಷಣ ಮಹಾವಿದ್ಯಾಲಯವು ವಿದ್ಯಾರ್ಥಿಸ್ನೇಹಿ ಆಪ್‌ಗಳ ಬಳಕೆಯ ಮೂಲಕ ಬೋಧನೆ ಮತ್ತು ಕಲಿಕೆಯನ್ನು ಉತ್ಕೃಷ್ಟಗೊಳಿಸುವ ಜವಾಬ್ದಾರಿಯೊಂದಿಗೆ ಪ್ರಶಿಕ್ಷಣಾರ್ಥಿಗಳಿಗಾಗಿ ಜೂಮ್, ಟೆಸ್ಟ್‌ಮೋಜ್, ಗೂಗಲ್ ಕ್ಲಾಸ್‌ರೂಂ, ಗೂಗಲ್ ಫಾರಂ, ಡಬ್ಲೂವ್ ಪಿ.ಎಸ್, ಗೂಗಲ್ ಮೀಟ್, ವಿಡಿಯೋ ಕ್ರಿಯೇಷನ್ ಇತ್ಯಾದಿ ವಿದ್ಯಾರ್ಥಿ ಸ್ನೇಹಿ ಆಪ್‌ಗಳ ಪರಿಚಯ ಹಾಗೂ ತರಬೇತಿಯನ್ನು ಹಮ್ಮಿಕೊಂಡಿದೆ ಈ ಕಾರ್ಯಕ್ರಮವು ಅತ್ಯುತ್ತಮವಾಗಿ ಮೂಡಿ ಬರಲಿ ಎಂದು ಆಶಿಸಿದರು.

ಕಾರ್ಯಕ್ರಮದಲ್ಲಿ ಪ್ರಾರ್ಥನೆಯನ್ನು ಪ್ರಶಿಕ್ಷಣಾರ್ಥಿಗಳಾದ ಶ್ವೇತಾ ಜಿ.ಹೆಚ್., ಸ್ವಾಗತವನ್ನು ಡಾ. ಕಿರಣ್ ಕುಮಾರ ಕೆ.ಎಸ್., ಸಹಾಯಕ ಪ್ರಾಧ್ಯಾಪಕರು ವಂದನೆಯನ್ನು ಡಾ.ರವಿ ಹೆಚ್., ಸಹಾಯಕ ಪ್ರಾಧ್ಯಾಪಕರು ಮಾಡಿದರೆ, ಕಾರ್ಯಕ್ರಮದ ನಿರೂಪಣೆಯನ್ನು ಡಾ. ವೀರೇಂದ್ರ ಕುಮಾರ ವಾಲಿ ಎಸ್., ಸಹಾಯಕ ಪ್ರಾಧ್ಯಾಪಕರು ನೆರವೇರಿ ಸಿಕೊಟ್ಟರು.

ಕಾರ್ಯಕ್ರಮದಲ್ಲಿ ಕಾಲೇಜಿನ ಎಲ್ಲಾ ಬೋಧಕ ಮತ್ತು ಬೋಧಕೇತರ ವರ್ಗದವರು ಹಾಗೂ ಪ್ರಶಿಕ್ಷಣಾರ್ಥಿಗಳು ಪಾಲ್ಗೊಂಡಿದ್ದರು.

****************


# ನಾಡಗೀತೆ

ಜಯ್ ಭಾರತ ಜನನಿಯ ತನುಜಾತೆ,
ಜಯಹೇ ಕರ್ನಾಟಕ ಮಾತೆ!
ಜಯ್ ಸುಂದರ ನದಿ ವನಗಳ ನಾಡೆ,
ಜಯ ಹೇ ರಸಋಷಿಗಳ ಬೀಡೆ!

ಭೂದೇವಿಯ ಮಕುಟದ ನವಮಣಿಯೆ,
ಗಂಧದ ಚಂದದ ಹೊನ್ನಿನ ಗಣಿಯೆ;
ರಾಘವ ಮಧುಸೂದನರವತರಿಸಿದ
ಭಾರತ ಜನನಿಯ ತನುಜಾತೆ,
ಜಯ ಹೇ ಕರ್ನಾಟಕ ಮಾತೆ!

ಜನನಿಯ ಜೋಗುಳ ವೇದದ ಘೋಷ,
ಜನನಿಗೆ ಜೀವವು ನಿನ್ನಾವೇಶ.
ಹಸುರಿನ ಗಿರಿಗಳ ಸಾಲೆ
ನಿನ್ನಯ ಕೊರಳಿನ ಮಾಲೆ,
ಕಪಿಲ ಪತಂಜಲ ಗೌತಮ ಜಿನನುತ
ಭಾರತ ಜನನಿಯ ತನುಜಾತೆ
ಜಯ ಹೇ ಕರ್ನಾಟಕ ಮಾತೆ!

ಶಂಕರ ರಾಮಾನುಜ ವಿದ್ಯಾರಣ್ಯ
ಬಸವೇಶ್ವರರಿಹ ದಿವ್ಯಾರಣ್ಯ
ರನ್ನ ಷಡಕ್ಷರಿ ಪೊನ್ನ
ಪಂಪ ಲಕುಮಿಪತಿ ಜನ್ನ
ಕಬ್ಬಿಗರುದಿಸಿದ ಮಂಗಳಧಾಮ,
ಕವಿಕೋಗಿಲೆಗಳ ಪುಣ್ಯಾರಾಮ!



ನಾನಕ ರಾಮಾನಂದ ಕಬೀರರ
ಭಾರತ ಜನನಿಯ ತನುಜಾತೆ,
ಜಯಹೇ ಕರ್ನಾಟಕ ಮಾತೆ!

ತೈಲಪ ಹೊಯ್ಸಳರಾಳಿದ ನಾಡೆ,
ಡಂಕಣ ಜಕಣರ ನೆಚ್ಚಿನ ಬೀಡೆ,
ಕೃಷ್ಣ ಶರಾವತಿ ತುಂಗಾ
ಕಾವೇರಿಯ ವರ ರಂಗ!
ಚೈತನ್ಯ ಪರಮಹಂಸ ವಿವೇಕರ
ಭಾರತ ಜನನಿಯ ತನುಜಾತೆ,
ಜಯ ಹೇ ಕರ್ನಾಟಕ ಮಾತೆ!

ಸರ್ವ ಜನಾಂಗದ ಶಾಂತಿಯ ತೋಟ,
ರಸಿಕರ ಕಂಗಳ ಸೆಳೆಯುವ ನೋಟ.
ಹಿಂದೂ ಕ್ರೈಸ್ತ ಮುಸಲ್ಮಾನ
ಪಾರಸಿಕ ಜೈನರುದ್ಯಾನ.
ಜನಕನ ಹೋಲುವ ದೊರೆಗಳ ಧಾಮ,
ಗಾಯಕ ವೈಣಿಕರಾರಾಮ
ಕನ್ನಡಿ ನುಡಿ ಕುಣಿದಾಡುವ ಗೇಹ,
ಕನ್ನಡ ತಾಯಿಯ ಮಕ್ಕಳ ದೇಹ!

ಜಯ್ ಭಾರತ ಜನನಿಯ ತನುಜಾತೆ,
ಜಯ ಹೇ ಕರ್ನಾಟಕ ಮಾತೆ!
ಜಯ್ ಸುಂದರ ನದಿ ವನಗಳ ನಾಡೆ,
ಜಯ ಹೇ ರಸಋಷಿಗಳ ಬೀಡೆ.

– ರಾಷ್ಟ್ರಕವಿ ಕುವೆಂಪು

# ೨೦೨೦ – ೨೦೨೧ ಭಾಷಾ ಸಂಘದ ವಾರ್ಷಿಕ ಚಟುವಟಿಕೆಗಳು

